ಸಂಪುಟ: ೦೭/ ಸಂಚಿಕೆ: ೧೧೦/ಶುಕ್ರವಾರ ದಿನಾಂಕ : ೧೩-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 110/ FRIDAY Date : 13-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಅಹಮದಾಬಾದ್‌ನಿಂದ ಇಂಗ್ಲೆಂಡಿಗೆ ಹೋಗುತ್ತಿದ್ದ ವಿಮಾನ ಅಪಘಾತ

### ಏರ್ ಇಂಡಿಯಾ ವಿಮಾನ ಪತನ; ಎಲ್ಲ 242 ಪ್ರಯಾಣಿಕರ ಸಾವು ಶಂಕೆ



**ಅಹಮದಾಬಾದ್:** ಗುಜರಾತ್‌ನ ಅಹಮದಾಬಾದ್‌ನಿಂದ ಗ್ಯಾಟ್ವಿಕ್ (ಇಂಗ್ಲೆಂಡ್)ಗೆ ಹೋಗುತ್ತಿದ್ದ ಏರ್ ಇಂಡಿಯಾ ಎಐ 171 ವಿಮಾನ ಗುರುವಾರದಂದು ಮಧ್ಯಾಹ್ನ ಟೇಕ್ ಆಫ್ ಆದ ತಕ್ಷಣ ಪತನಗೊಂಡಿತು. 12 ಸಿಬ್ಬಂದಿ ಸೇರಿದಂತೆ 242 ಜನರು ಈ ವಿಮಾನದಲ್ಲಿದ್ದರು. ಈ ವಿಮಾನ ಅಹಮದಾಬಾದ್ ವಿಮಾನ ನಿಲ್ದಾಣದ ಬಳಿ ಇದ್ದ ಡಾಕ್ಟರ್ ಹಾಸ್ಟೆಲ್‌ನೊಳಗೆ ನುಗ್ಗಿದೆ. ಇದರಿಂದ ವಿಮಾನದಲ್ಲಿರುವ ಪ್ರಯಾಣಿಕರು ಮಾತ್ರವಲ್ಲದೆ 15 ವೈದ್ಯಕೀಯ ವಿದ್ಯಾರ್ಥಿಗಳು ಕೂಡ ಸಾವನ್ನಪ್ಪಿದ್ದಾರೆ ಎನ್ನಲಾಗುತ್ತಿದೆ. ಇತ್ತೀಚಿನ ಅತಿ ದುರಂತವಾದ ವಿಮಾನ ಅಪಘಾತ ಇದಾಗಿದೆ.

ವಿಮಾನ ಅಪಘಾತಕ್ಕೀಡಾದಾಗ 12 ಸಿಬ್ಬಂದಿ ಸೇರಿದಂತೆ ಸುಮಾರು 242 ಜನರು ಅಹಮದಾಬಾದ್–ಲಂಡನ್ ವಿಮಾನದಲ್ಲಿದ್ದರು. ಈ ಘಟನೆಯಲ್ಲಿ ಓರ್ವ ಪ್ರಯಾಣಿಕ ಪ್ರಾಣಾಪಾಯದಿಂದ ಪಾರಾಗಿದ್ದು, ಉಳಿದವರು ಬದುಕುಳಿದ ಅಧಿಕೃತ ಮಾಹಿತಿ ಲಭ್ಯವಾಗಿಲ್ಲ ಎಂದು ಅಹಮದಾಬಾದ್ ಪೊಲೀಸ್ ಆಯುಕ್ತರು ಹೇಳಿದ್ದಾರೆ. ಈ ಘಟನೆಯ ನಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ ಗುಜರಾತ್ ಸಿಎಂ, ರಾಜ್ಯದ ಗೃಹ ಸಚಿವರು ಮತ್ತು ಡಿಜಿಪಿ ಅವರೊಂದಿಗೆ ಮಾತನಾಡಿದ್ದಾರೆ. ಗುಜರಾತ್ ಮಾಜಿ ಸಿಎಂ ವಿಜಯ್ ರೂಪಾನಿ ಕೂಡ ಇಂದಿನ ವಿಮಾನ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ಈ ವಿಮಾನದಲ್ಲಿ 169 ಭಾರತೀಯರು, 53 ಬ್ರಿಟಿಷ್ ಪ್ರಜೆಗಳು, 7 ಪೋರ್ಚುಗೀಸ್ ಮತ್ತು ಒಬ್ಬ ಕೆನಡಾದ ಪ್ರಯಾಣಿಕ ಇದ್ದರು.

ಅಪಘಾತ ಸಂಭವಿಸಿದಾಗ ಅಹಮದಾಬಾದ್‌ನ ಮೇಘನಿನಗರ ಪ್ರದೇಶದ ಬಳಿಯ ಧಾರ್ಪುರದಿಂದ ಭಾರೀ ಹೊಗೆ ಕಾಣಿಸಿಕೊಂಡಿತ್ತು. ಅಗ್ನಿಶಾಮಕ ದಳ ಸ್ಥಳಕ್ಕೆ ಧಾವಿಸಿದ್ದು, ತುರ್ತು ಪ್ರತಿಕ್ರಿಯೆ ತಂಡಗಳನ್ನು ನಿಯೋಜಿಸಲಾಗುತ್ತಿದೆ. ಅಪಘಾತದ ಕಾರಣವನ್ನು ಅಧಿಕಾರಿಗಳು ಇನ್ನೂ ದೃಢಪಡಿಸಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರು ಅಪಘಾತದ ಬಗ್ಗೆ ಗೃಹ ಸಚಿವ ಅಮಿತ್ ಶಾ ಮತ್ತು ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ಅವರೊಂದಿಗೆ ಮಾತನಾಡಿದ್ದಾರೆ. ಈಗಾಗಲೇ ಗೃಹ ಸಚಿವ ಅಮಿತ್ ಶಾ ಅಹಮದಾಬಾದ್‌ಗೆ ಹೊರಟಿದ್ದಾರೆ. ಗುಜರಾತ್ ಸಿಎಂ ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಿದ್ದಾರೆ.




ಅಹಮದಾಬಾದ್ ಬಳಿ ಏರ್ ಇಂಡಿಯಾ ವಿಮಾನ ಅಪಘಾತದ ನಂತರ ನಾಗರಿಕ ಆಡಳಿತಕ್ಕೆ ಸಹಾಯ ಮಾಡಲು ಸುಮಾರು 130 ಸಿಬ್ಬಂದಿಯನ್ನು ಒಳಗೊಂಡ ಭಾರತೀಯ ಸೇನಾ ತಂಡಗಳನ್ನು ನಿಯೋಜಿಸಲಾಗಿದೆ. ಭಾರತೀಯ ಸೇನೆಯ ಪ್ರತಿಕ್ರಿಯೆಯಲ್ಲಿ ಭಗ್ನಾವಶೇಷಗಳ ತೆರವಿಗೆ ಜೆಸಿಬಿಗಳನ್ನು ಹೊಂದಿರುವ ಎಂಜಿನಿಯ–ರಿಂಗ್ ತಂಡಗಳು, ವೈದ್ಯರು ಮತ್ತು ಅರೆವೈದ್ಯರನ್ನು ಒಳಗೊಂಡ ವೈದ್ಯಕೀಯ ತಂಡಗಳು, ಕ್ವಿಕ್ ಆಕ್ಷನ್ ತಂಡಗಳು (ಕಿಂಖಿಗಳು), ಅಗ್ನಿಶಾಮಕ ಉಪಕರಣಗಳು ಮತ್ತು ನೀರಿನ ಬೌಸರ್‌ಗಳನ್ನು ಹೊಂದಿರುವ ಅಗ್ನಿಶಾಮಕ ಉಪಕರಣಗಳು ಮತ್ತು ಸ್ಥಳ ನಿರ್ವಹಣೆಗಾಗಿ ಪ್ರೊವೊಸ್ಟ್ ಸಿಬ್ಬಂದಿ ಸೇ–ರಿದ್ದಾರೆ. ಮಿಲಿಟರಿ ಆಸ್ಪತ್ರೆಯನ್ನು ಸಹ ಸನ್ನದ್ಧವಾಗಿ ಇರಿಸಲಾಗಿದೆ.

ಈ ದುರಂತ ಘಟನೆಗೆ ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಸಲಹೆಗಾರ ಮುಹಮ್ಮದ್ ಯೂನಸ್, ಸಿಂಗಾಪುರದ ಪ್ರಧಾನಿ, ಫ್ರಾನ್ಸ್ ಅಧ್ಯಕ್ಷ, ರಷ್ಯಾ ಅಧ್ಯಕ್ಷ, ಆಸ್ಟ್ರೇಲಿಯಾ ಪ್ರಧಾನಿ ಮುಂತಾದ ಜಾಗತಿಕ ನಾಯಕರು ಕೂಡ ಸಂತಾಪ ಸೂಚಿಸಿದ್ದಾರೆ.

---

#### ಜಿಲ್ಲಾ ಮಟ್ಟದ ಟಾಸ್ಕಫೋರ್ಸ ಸಭೆ : ಓಆರ್‌ಎಸ್, ಝಿಂಕ್ ಮಾತ್ರೆ ವಿತರಣೆ

## 16 ರಿಂದ ಅತಿಸಾರ ಭೇದಿ ತಡೆಗೆ ಆಂದೋಲನ



ಬಾಗಲಕೋಟ: ಜಿಲ್ಲೆಯಲ್ಲಿ ಐದು ವರ್ಷದೊಳಗಿನ ಮಕ್ಕಳಲ್ಲಿ ಕಂಡುಬರುವ ಅತಿಸಾರ ಭೇದಿ ತಡೆಗೆ ಜೂನ್ 16 ರಿಂದ ಜುಲೈ 31 ವರೆಗೆ ಆಂದೋಲನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ಅತಿಸಾರಭೇದಿ ಮತ್ತು ದಡಾರ ಮತ್ತು ರುಬೆಲ್ಲ ನಿರ್ಮೂಲನೆ ಕುರಿತು ಜರುಗಿದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಹುಟ್ಟಿದ ಮಗುವಿನಿಂದ ಹಿಡಿದು 5 ವರ್ಷದೊಳಗಿನ ಮಕ್ಕಳಲ್ಲಿ ಕಂಡುಬರುತ್ತಿದ್ದು, ಯಾವುದೇ ಮಕ್ಕಳು ಇದರಿಂದ ಮರಣ ಹೊಂದದಂತೆ ಪರಿಣಾಮಕಾರಿ ಚಿಕಿತ್ಸೆಗೆ ಓಆರ್‌ಎಸ್ ಮತ್ತು ಝಿಂಕ್ ಮಾತ್ರೆ ವಿತರಣೆಗೆ ಕ್ರಮವಹಿಸಲು ಸೂಚನೆ ನೀಡಿದರು.

ಜಿಲ್ಲೆಯಲ್ಲಿ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪರಿಣಾಮಕಾರಿ ಚಿಕಿತ್ಸೆಗೆ ಓಆರ್‌ಎಸ್ ಮತ್ತು ಝಿಂಕ್ ಮಾತ್ರೆ ವಿತರಣೆ ಮಾಡಲಾಗುತ್ತಿದ್ದು, ಜಿಲ್ಲೆಯಲ್ಲಿ ಲಭ್ಯವಿರುವ 83185 ಓಆರ್‌ಎಸ್ ಮತ್ತು 652380 ಜಿಂಕ್ ಮಾತ್ರಗಳನ್ನು ಜಿಲ್ಲೆಯ ಆಯಾ ತಾಲೂಕಿನ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ವಿತರಣೆಗೆ ಕ್ರಮವಹಿಸಬೇಕು. ಇದರ ಜೊತೆಗೆ ಕುಡಿಯುವ ನೀರು ಶುಚಿತ್ವ ಇರಬೇಕು. ಆಹಾರ ಸೇವನೆ ಮುಂಚೆ ಕೈಗಳನ್ನು ಸುಚಿಗೊಳಿಸಿಕೊಳ್ಳುವುದು ಮುಖ್ಯವಾಗಿದೆ. ಈ ಬಗ್ಗೆ ಹೆಚ್ಚಿನ ಪ್ರಮಾಣದಲ್ಲಿ ಶಾಲೆ, ಅಂಗನವಾಡಿ ಜನ ಸಮುದಾಯದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ತಿಳಿಸಿದರು.

ಈ ಕಾರ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ, ನೀರು ಮತ್ತು ನೈರ್ಮಲ್ಯ, ಎನ್‌ಜಿಓಗಳು ಪಾಲ್ಗೊಳ್ಳಬೇಕು. ಓ.ಆರ್.ಎಸ್ ಮತ್ತು ಝಿಂಕ್ ಮಾತ್ರಗಳು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ದೊರೆಯಲಿದ್ದು, ಝಿಂಕ್ ಮಾತ್ರೆಗಳನ್ನು 14 ದಿನಗಳವರೆಗೆ ಪ್ರತಿದಿನ 1 ರಂತೆ ನೀಡುವುದರಿಂದ ಶಕ್ತಿಯನ್ನು ಹೆಚ್ಚಿಸುತ್ತದೆ. ಎರಡು ತಿಂಗಳಗಳವರೆಗೆ ಅತಿಸಾರ ಭೇದಿಯಿಂದ ಕಾಪಾಡುತ್ತದೆ ಎಂದು ತಿಳಿಸಿದರು.

ವಿಶ್ವ ಆರೋಗ್ಯ ಸಂಸ್ಥೆಯ ಸರ್ವೇಲೆನ್ಸ್ ಅಧಿಕಾರಿ ಮುಕುಂದ ಗಲಗಲಿ ದಡಾರ ಮತ್ತು ರುಬೆಲ್ಲಾ ನಿರ್ಮೂಲನೆ ಕುರಿತು ಮಾತನಾಡಿ ಎಂ.ಆರ್–1 ಮತ್ತು ಎಂ.ಆರ್–2 ಲಸಿಕಾ ವಂಚಿತ ಮಕ್ಕಳನ್ನು ಹುಡುಕಿ, ಅವರಿಗೆ ದಡಾರ ಮತ್ತು ರುಬೆಲ್ಲಾ ಲಸಿಕೆಯನ್ನು ಹಾಕಲಾಗುತ್ತದೆ. ಜ್ವರ ಮತ್ತು ಗಂಧೆ ಪ್ರಕರಣಗಳು ವರದಿಯಾಗಿದ್ದು, ಎಲ್ಲ ತಾಕೂಕಿನ ಪ್ರಕರಣಗಳ ವರದಿ ಮಾಡಲು ತಾಲೂಕಾ ಮಟ್ಟದ ಅಧಿಕರಿಗಳಿಗೆ ಸೂಚನೆ ನೀಡಿದರು. ಜಿಲ್ಲೆಯಲ್ಲಿ 46 ಸಂಶಯಾತ್ಮಕ ಪ್ರಕರಣಗಳಲ್ಲಿ 4 ಪ್ರಕರಣಗಳು ದೃಡಪಟ್ಟಿವೆ. ದೃಡಪಟ್ಟ ಪ್ರದೇಶಗಳಲ್ಲಿ ವಿಶೇಷ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆಣ್ಣವರ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಕುಸುಮಾ ಮಾಗಿ, ಜಿಲ್ಲಾ ಆಯುಷ ಅಧಿಕಾರಿ ಡಾ.ಶೇಖರಯ್ಯ ಮಠ ಸೇರಿದಂತೆ ಆಯಾ ತಾಲೂಕಿನ ವೈದ್ಯಾಧಿಕಾ–ರಿಗಳು ಉಪಸ್ಥಿರಿದ್ದರು.

---

## ಆರು ದಿನಗಳ ಕಾಲ ಕರಾವಳಿ ಮಲೆನಾಡಿನ ಜಿಲ್ಲೆಗಳಿಗೆ ರೆಡ್ ಅಲರ್ಟ್

**ಬೆಂಗಳೂರು** : ರಾಜ್ಯದಲ್ಲಿ ಗಾಳಿಯ ಚಲನೆಯು ನೈರುತ್ಯದಿಂದ ಈಶಾನ್ಯಕ್ಕೆ ಬದಲಾಗುವ ಸಾಧ್ಯತೆಗಳಿದ್ದು, ಇದರ ಪರಿಣಾಮವಾಗಿ ಮುಂದಿನ ಆರು ದಿನಗಳ ಕಾಲ ಉತ್ತಮ ಮಳೆಯಾಗಲಿದೆ. ಕರಾವಳಿ ಹಾಗೂ ಮಲೆನಾಡಿನ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಣೆ ಮಾಡಲಾಗಿದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಹಾಗೂ ಮಲೆನಾಡು ಜಿಲ್ಲೆಗಳಾದ ಕೊಡಗು, ಹಾಸನ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಜೂ.18ರವರೆಗೆ ಭಾರೀ ಮಳೆಯಾಗಲಿದ್ದು, ಆರು ದಿನಗಳ ಕಾಲ ರೆಡ್ ಅಲರ್ಟ್ ನೀಡಲಾಗಿದೆ.

ಉತ್ತರ ಒಳನಾಡಿನ ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಬಾಗಲಕೋಟೆ, ಕೊಪ್ಪಳ, ದಾವಣಗೆರೆ, ಮೈಸೂರು ಜಿಲ್ಲೆಗಳಲ್ಲಿ ಉತ್ತಮ ಮಳೆಯಾಗಲಿದ್ದು, ಜೂ.18ರವರೆಗೆ ಆರೆಂಜ್ ಅಲರ್ಟ್ ನೀಡಲಾಗಿದೆ. ಉಳಿದ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

## ರಾಜ್ಯದಲ್ಲಿ ಕೋವಿಡ್ ಕಾರಣದಿಂದಾಗಿ ಯಾವುದೇ ಸಾವುಗಳಾಗಿಲ್ಲ: ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ

**ಬೆಂಗಳೂರು:** ರಾಜ್ಯದಲ್ಲಿ ಮೇ ತಿಂಗಳಿನಿಂದ ಕೋವಿಡ್ ಸೋಂಕಿನಿಂದಾಗಿ ಯಾವುದೇ ಸಾವು ಸಂಭವಿಸಿಲ್ಲ. ಡೆತ್ ಆಡಿಟ್ ವರದಿಯ ಪ್ರಕಾರ ಕೋವಿಡ್ ಪಾಸಿಟಿವ್ ಬಂದವರು ಇತರ ಮಾರಕ ಕಾಯಿಲೆಗಳಿಂದ ಮೃತಪಟ್ಟಿದ್ದಾರೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ.

ಬುಧವಾರ ನಗರದಲ್ಲಿರುವ ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಕೋವಿಡ್ ಪರಿಸ್ಥಿತಿ ಕುರಿತ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕೋವಿಡ್ ಪಾಸಿಟಿವ್ ಬಂದವರಲ್ಲಿ 11 ಮಂದಿ ಸಾವಿಗೀಡಾಗಿದ್ದಾರೆ. ಈ ಪೈಕಿ 10 ಜನರ ಡೆತ್ ಆಡಿಟ್ ರಿಪೋರ್ಟ್ ಬಂದಿದ್ದು, ಅವರೆಲ್ಲ ಇತರ ಮಾರಕ ಕಾಯಿಲೆಗಳಾದ ಹೃದಯ ಸಂಬಂಧಿ, ಕಿಡ್ನಿ, ಅಂಗಾಂಗ ವೈಫಲ್ಯದಂತಹ ಕಾರಣಗಳಿಂದ ಸಾವನ್ನಪ್ಪಿದ್ದಾರೆ ಎಂದರು. ಡೆತ್ ಆಡಿಟ್ ರಿಪೋರ್ಟ್ ಬಳಿಕವೇ ಕೋವಿಡ್ ಡೆತ್ ರಿಪೋರ್ಟ್ ಘೋಷಿಸುವಂತೆ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಕೋವಿಡ್ ಡೆತ್ ಎಂದಾಕ್ಷಣ ಅನಗತ್ಯವಾಗಿ ಜನರು ಆತಂಕಕ್ಕೆ ಒಳಗಾಗುವುದು ಸಹಜ. ಆದರೆ ವಾಸ್ತವ ಚಿತ್ರಣ ಬೇರೆಯೇ ಆಗಿರುತ್ತದೆ. ಈಗಿರುವ ಕೋವಿಡ್ ರೂಪಾಂತರಿ ವೈರಸ್ ಸೌಮ್ಯ ಸ್ವಭಾವದ್ದಾಗಿದೆ. 500ಕ್ಕೂ ಹೆಚ್ಚು ಕೋವಿಡ್ ಪಾಸಿಟಿವ್ ಪ್ರಕರಣಗಳಲ್ಲಿ ಕೇವಲ ಇಬ್ಬರು ಮಾತ್ರ ಆಸ್ಪತ್ರೆಯ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಹೀಗಾಗಿ ಆತಂಕದ ಸ್ಥಿತಿ ಇಲ್ಲ ಎಂದು ಅವರು ಹೇಳಿದರು.

ಆರೋಗ್ಯ ಇಲಾಖೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕೋವಿಡ್ ಟೆಸ್ಟಿಂಗ್ ಮಾಡಲಾಗುತ್ತಿದೆ. 10 ದಿನಗಳಲ್ಲಿ 5 ಸಾವಿರಕ್ಕೂ ಹೆಚ್ಚು ಕೋವಿಡ್ ಟೆಸ್ಟಿಂಗ್ ಮಾಡಲಾಗಿದೆ. ತೀವ್ರ ಉಸಿರಾಟದ ಪ್ರಕರಣಗಳಲ್ಲಿ ಕಡ್ಡಾಯವಾಗಿ ಕೋವಿಡ್ ಟೆಸ್ಟಿಂಗ್ ನಡೆಸಲಾಗುತ್ತಿದೆ. ಸರಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ತಜ್ಞರ ಸಮಿತಿ ಸಭೆಗಳನ್ನು ನಡೆಸುತ್ತಿದ್ದು, ಆರೋಗ್ಯ ಇಲಾಖೆ ಮೇಲ್ವಿಚಾರಣೆ ನಡೆಸುತ್ತಿದೆ. ಕೋವಿಡ್‌ಗೆ ಆತಂಕಗೊಳ್ಳದೇ ಜನರು ತಮ್ಮ ಸಹಜ ಜೀವನ ನಡೆಸಬಹುದು ಎಂದು ದಿನೇಶ್ ಗುಂಡೂರಾವ್ ಹೇಳಿದರು.

---

#### ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ ಸಮಿತಿ ಸಭೆ

## ಶುದ್ಧ ಕುಡಿಯುವ ನೀರು ಪೂರೈಕೆಗೆ ಕ್ರಮ ವಹಿಸಿ: ಜಿ.ಪಂ ಸಿಇಓ ರಾಹುಲ್ ಶಿಂಧೆ



**ಬೆಳಗಾವಿ,** : ಮಳೆಗಾಲದಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ ಕೊರತೆಯಾಗಬಾರದು. ಗ್ರಾಮ ಪಂಚಾಯತಿಗಳಲ್ಲಿ ಅಗತ್ಯವಿದ್ದಲ್ಲಿ ಕಡ್ಡಾಯವಾಗಿ ನೀರಿನ ಗುಣಮಟ್ಟದ ಪರೀಕ್ಷೆಗೊಳಪಡಿಸಬೇಕು. ಒಂದು ವೇಳೆ ಕಲುಷಿತ ನೀರಿನಿಂದ ಸಾರ್ವಜನಿಕರಿಗೆ ಆರೋಗ್ಯ ಸಮಸ್ಯೆಗಳು ಎದುರಾದಲ್ಲಿ ನೇರವಾಗಿ ಸಂಬಂಧಿಸಿದ ಅಧಿಕಾ–ರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯತ್ ವಿಡಿಯೋ ಸಂವಾದ ಸಭಾಂಗಣದಲ್ಲಿ ಗುರುವಾರ (ಜೂ.12) ನಡೆದ ವಿವಿಧ ತಾಲ್ಲೂಕುಗಳ ಕುಡಿಯುವ ನೀರು ಪೂರೈಕೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿನ ಮೇಲ್ಮಟ್ಟದ ನೀರು ಸಂಗ್ರಹಣಾ ಘಟಕಗಳನ್ನು ಮಾರ್ಗಸೂಚಿಗಳನ್ವಯ ಸ್ವಚ್ಛತೆ ಹಾಗೂ ಸುರಕ್ಷತೆಗೆ ಕ್ರಮ ವಹಿಸಬೇಕು. ಮಳೆಗಾಲದ ಸಮಯದಲ್ಲಿ ಪ್ರತಿ ಗ್ರಾಮಗಳಲ್ಲಿ ಎಫ್.ಹೆಚ್.ಟಿ.ಸಿ ಮೂಲಕ ಕುಡಿಯುವ ನೀರನ್ನು ಪರೀಕ್ಷಿಸಿ ನಂತರ ಪೂರೈಕೆಗೆ ಕ್ರಮ ವಹಿಸಬೇಕು.

ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ಗಮನ ಹರಿಸಬೇಕು. ಆಯಾ ತಾಲೂಕು ಪಂಚಾಯತ ಮತ್ತು ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿನ ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯನಿರ್ವಹಿಸುತ್ತಿರುವ ಕುರಿತು ವರದಿ ನೀಡಬೇಕು.

ನೀರು ಶುದ್ಧೀಕರಣ ಘಟಕಗಳನ್ನು ನಿರಂತರ ನಿರ್ವಹಣೆ ಮಾಡಬೇಕು. ಕೆಲವು ಗ್ರಾಮಗಳಲ್ಲಿ ನೀರು ಶುದ್ಧೀಕರಣ ಘಟಕಗಳು ಗ್ರಾಮದಿಂದ ಸ್ವಲ್ಪ ದೂರದಲ್ಲಿದ್ದು ಅಂತಹ ಶುದ್ಧೀಕರಣ ಘಟಕಗಳನ್ನು ಪಟ್ಟಿ ಮಾಡಿ ಸಮಿತಿಗೆ ಸಲ್ಲಿಸಬೇಕು ಎಂದು ಸೂಚಿಸಿದರು.

ಮಳೆಗಾಲ ಪ್ರಾರಂಭವಾಗಿರುವದರಿಂದ ಕಡ್ಡಾಯವಾಗಿ ಪ್ರತಿ 15 ದಿನಗಳಿಗೆ ಒಂದು ಬಾರಿ ಕುಡಿಯುವ ನೀರು ಸಮಸ್ಯೆಗಳ ಕುರಿತು ಸಭೆ ಆಯೋಜಿಸಬೇಕು. ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯಡಿ ನೀರು ಸರಬರಾಜು ಪ್ರಗತಿಗೆ ಅಗತ್ಯದ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನವರ, ಬೆಳಗಾವಿ ಹಾಗೂ ಚಿಕ್ಕೋಡಿ ವಿಭಾಗದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತ–ರಿದ್ದರು.

***

---

## ಬಾಲ್ಯವಿವಾಹ ಕಂಡುಬಂದರೆ ಶಿಸ್ತುಕ್ರಮ–ಎಚ್ಚರಿಕೆ

### ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಶ್ರಮಿಸಲು ಜಿಲ್ಲಾ ಪಂಚಾಯತ್ ಸಿ.ಇ.ಓ. ರಾಹುಲ್ ಶಿಂಧೆ ಸೂಚನೆ



**ಬೆಳಗಾವಿ,** : ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು. ಬಾಲ್ಯವಿವಾಹ ತಡೆಗಟ್ಟುವಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜವಾಬ್ದಾರಿ ಅತೀ ಮಹತ್ವದಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಗುರುವಾರ (ಜೂ.12) ಜರುಗಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ತಡೆಗಟ್ಟಲು ಸಂಬಂಧಿಸಿದ ಇಲಾಖೆಗಳು ತಮ್ಮ ಜವಾಬ್ದಾರಿಗಳನ್ನು ಅರಿತು ಕಾರ್ಯ ಪ್ರವೃತ್ತರಾಗಬೇಕು. ಜಿಲ್ಲೆಯಲ್ಲಿ ಬಾಲ್ಯವಿವಾಹ ಜರುಗಿರುವ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಿಸಿದವರ ಮೇಲೆ ಶಿಸ್ತು ಕ್ರಮವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಗಂಭಿರವಾಗಿ ಪರಿಗಣಿಸಬೇಕು. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ಪ್ರಕರಣಗಳು ಕಂಡುಬಂದಲ್ಲಿ ಇದಕ್ಕೆ ಕಾರಣಗಳನ್ನು ಹುಡುಕಿ ಅನೈತಿಕ ಸಾಗಾಣಿಕೆ ಕಡಿವಾಣಕ್ಕೆ ಅಧಿಕಾ–ರಿ,ಸಿಬ್ಬಂದಿಗಳು ಮುಂದಾಗಬೇಕು. ಈ ಕಾರ್ಯದಲ್ಲಿ ಸಂಬಂಧಿಸಿದ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದರು.

ಸ್ವಾಧಾರ ಗೃಹಗಳಲ್ಲಿ ದಾಖಾಲಾಗಿರುವ ನಿವಾಸಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ಪುನರ್ವಸತಿ ನೀಡುವ ಕಾರ್ಯವಾಗಬೇಕು. ಈ ಕುರಿತು ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಿ ವರದಿ ನೀಡಲು ಸೂಚಿಸಿದರು.

ಚಿಕ್ಕೋಡಿಯಲ್ಲಿ ಪ್ರಾರಂಭಾವಗಿರುವ ಸಖಿ ಒನ್ ಘಟಕದಲ್ಲಿ ಪ್ರಕರಣಗಳ ಸಂಖ್ಯೆ ತುಂಬಾ ಕಡಿಮೆಯಾಗಿದ್ದು, ಸಖಿ ಒನ್ ಘಟಕ ಪ್ರಾರಂಭವಾಗಿರುವ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳುವದರ ಮೂಲಕ ಜಾಗೃತಿ ಮೂಡಿಸಲು ತಿಳಿಸಿದರು. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳ ಕುರಿತು ಪ್ರಚಾರ ಕೈಗೊಳ್ಳಬೇಕು. ಸ್ತ್ರೀ ಶಕ್ತಿ ಗುಂಪುಗಳಿಗಾಗಿ ಸವಿರುಚಿ ಕ್ಯಾಂಟಿನ್ ಪ್ರಾರಂಭಕ್ಕಾಗಿ ಒದಗಿಸಲಾದ ವಾಹನಗಳ ಮಾಹಿತಿ ಪಡೆದು ಅವರು ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕಳ ತಡೆಗಟ್ಟುವಿಕೆ ಕುರಿತು ಆಂತರಿಕ ದೂರು ನಿವಾರಣ ಸಮಿತಿಗಳು ರಚನೆಯಾಗುವುದರ ಕುರಿತು ಪರಿಶೀಲಿಸಬೇಕು. ಎಲ್ಲ ಇಲಾಖೆಗಳಲ್ಲಿ ಸಮಿತಿ ರಚನೆಯಾಗಿರುವುದರ ಕುರಿತು ಹದಿನೈದು ದಿನದೊಳಗಾಗಿ ವರದಿ ನೀಡಲು ಸೂಚಿಸಿದರು.

ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳನ್ನು ಪಿ.ಎಮ್.ಜೆ.ಜೆ.ಬಿ.ವಾಯ್ ಹಾಗೂ ಪಿ.ಎಮ್.ಎಸ್.ಬಿ.ವಾಯ್ ಯೋಜನೆಗಳ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಕ್ರಮ ವಹಿಸಲು ಸೂಚಿಸಿದರು.

ಜಿಲ್ಲೆಯಲ್ಲಿ ಬಾಲ ಆಧಾರ ನೊಂದಣಿ ಕಾರ್ಯ ಕುಂಠಿತವಾಗಿದ್ದು, ಅಂಗನವಾಡಿ ಕೇಂದ್ರದಲ್ಲಿನ ಮಕ್ಕಳ ಬಾಲ ಆಧಾರ ಮಾಡಿಸಲು ರೂಪರೇಷೆಗಳನ್ನು ಸಿದ್ಧಪಡಿಸಿ ಅಭಿಯಾನದ ರೂಪದಲ್ಲಿ ಬಾಲ ಆಧಾರ ನೊಂದಣಿ ಕಾರ್ಯಕ್ಕೆ ಕ್ರಮಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಆರ್.ನಾಗರಾಜ್ ಅವರು ಇಲಾಖೆಯ ವಿವಿಧ ಯೋಜನೆಗಳ ಮಾಹಿತಿ ನೀಡಿದರು.

ಸಭೆಯಲ್ಲಿ ಹೆಚ್ಚುವರಿ ಪೋಲಿಸ್ ವ–ರಿಷ್ಠಾಧಿಕಾರಿ ಶ್ರುತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಈಶ್ವರ ಗಡಾದಿ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ರವಿ ಬಂಗಾರೆಪ್ಪನವರ, ಮಹಿಳಾ ಅಭಿವೃದ್ಧಿ ಅಧಿಕಾರಿ ಅರ್ಚನಾ ಮತ್ತು ವಿವಿಧ ಇಲಾಖೆ ಅಧಿಕಾರಿಗಳು, ತಾಲೂಕು ಶಿಶು ಅಭಿವೃದ್ಧಿ ಯೊಜನಾಧಿಕಾ–ರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

---

# ಜಾತಿಗಣತಿ ಮರು ಸಮೀಕ್ಷೆಗೆ ಸಚಿವ ಸಂಪುಟ ಒಪ್ಪಿಗೆ

**ಬೆಂಗಳೂರು** : ರಾಜ್ಯ ಹಿಂದುಳಿದ ವರ್ಗಗಳ ಆಯೋಗವು 2015ರಲ್ಲಿ ನಡೆಸಿದಂತಹ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ(ಜಾತಿ ಗಣತಿ)ಯು ಹತ್ತು ವರ್ಷಗಳು ಕಳೆದಿರುವ ಹಿನ್ನೆಲೆಯಲ್ಲಿ, ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ 1995 ಸೆಕ್ಷನ್ 11 ರಂತೆ ಮರು ಸಮೀಕ್ಷೆ ಕೈಗೊಳ್ಳಲು ಸಚಿವ ಸಂಪುಟವು ಸರ್ವಾನುಮತದ ತೀರ್ಮಾನ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಗುರುವಾರ ವಿಧಾನಸೌಧದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯ ಕುರಿತು ಚರ್ಚಿಸಲು ಕರೆಯಲಾಗಿದ್ದ ವಿಶೇಷ ಸಚಿವ ಸಂಪುಟ ಸಭೆಯ ಬಳಿಕ ಅವರು ಸಮ್ಮೇಳನ ಸಭಾಂಗಣದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯನ್ನು 54 ಮಾನದಂಡಗಳನ್ನು ಇಟ್ಟುಕೊಂಡು ನಡೆಸಲಾಗಿತ್ತು. 2015ರ ಎ.11 ರಂದು ಪ್ರಾರಂಭವಾದ ಸಮೀಕ್ಷೆಯು ಅದೇ ಸಾಲಿನ ಮೇ 30ರಂದು ಮುಕ್ತಾಯವಾಗಿದೆ. ಸುಮಾರು 1.60 ಲಕ್ಷ ಸಿಬ್ಬಂದಿಗಳು ಈ ಸಮೀಕ್ಷೆಯಲ್ಲಿ ತೊಡಗಿಸಿಕೊಂಡಿದ್ದರು. 2011ರ ಜನಗಣತಿ ಪ್ರಕಾರ ಕರ್ನಾಟಕದಲ್ಲಿ 6.11 ಕೋಟಿ ಜನಸಂಖ್ಯೆಯಿತ್ತು. ಇದು 2015ರ ವೇಳೆಗೆ 6.35 ಕೋಟಿ ಎಂದು ಅಂದಾಜಿಸಲಾಗಿದೆ. 5.98 ಕೋಟಿ ಜನರು ಸಮೀಕ್ಷೆಗೆ ಒಳಪಟ್ಟಿದ್ದಾರೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಕಾನೂನು ಪ್ರಕಾರ ತೀರ್ಮಾನ: ಎಚ್.ಕಾಂತರಾಜು ನೇತೃತ್ವದ ಆಯೋಗ ಸಮೀಕ್ಷೆ ಮಾಡಿ 10 ವರ್ಷಗಳು ಕಳೆದಿದೆ. ಈ ಅವಧಿಯಲ್ಲಿ ಜನಸಂಖ್ಯೆ ಹೆಚ್ಚಾಗಿರುತ್ತದೆ. ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಅನೇಕ ಬದಲಾವಣೆಗಳೂ ಆಗಿರುತ್ತವೆ. ಹತ್ತು ವರ್ಷಗಳಾದ ನಂತರ ಹೊಸದಾಗಿ



ಸಮೀಕ್ಷೆ ನಡೆಸಬೇಕೆಂದು ಹಿಂದುಳಿದ ವರ್ಗಗಳ ಆಯೋಗದ ಕಾನೂನಿನ ಸೆಕ್ಷನ್ 11(1) ರಲ್ಲಿ ಹೇಳಲಾಗಿದೆ. ಪಕ್ಷದ ವ–ರಿಷ್ಠರು ನಮಗೆ ಇದೇ ಸಲಹೆಯನ್ನು ನೀಡಿದ್ದಾರೆ. ಆದುದ–ರಿಂದ, ಕಾನೂನು ಪ್ರಕಾರ ತೀರ್ಮಾನ ತೆಗೆದುಕೊಂಡಿದ್ದೇವೆ ಎಂದು ಸಿದ್ದರಾಮಯ್ಯ ಹೇಳಿದರು.

ಈ ಹಿಂದಿನ ನಮ್ಮ ಸರಕಾರದ ಅವಧಿಯಲ್ಲಿ ಹಿಂದುಳಿದ ವರ್ಗಗಳ ಆಯೋಗದ ವರದಿ ಮತ್ತು ಅದರ ಶಿಫಾರಸ್ಸುಗಳು ಅಂತಿಮ ಗೊಂಡಿರಲಿಲ್ಲ. 2018ರಲ್ಲಿ ಸಮ್ಮಿಶ್ರ ಸರಕಾರ ರಚನೆಯಾಗಿ ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾದರು. ಪುಟ್ಟರಂಗಶೆಟ್ಟಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಾದರು. ಆ ವೇಳೆಗೆ ವರದಿ ಪೂರ್ಣಗೊಂಡಿತ್ತು ಎಂದು ಅವರು ತಿಳಿಸಿದರು.

ವರದಿ ಪಡೆಯದಂತೆ ತಡೆದ ಎಚ್.ಡಿ.ಕುಮಾರಸ್ವಾಮಿ: ಕಾಂತರಾಜು ಹಾಗೂ ಆಯೋಗದ ಸದಸ್ಯರು ಪುಟ್ಟರಂಗ ಶೆಟ್ಟಿಯನ್ನು ಭೇಟಿ ಮಾಡಿ ವರದಿ ಪಡೆಯುವಂತೆ ಕೋ–ರಿದಾಗ, ಅಂದಿನ ಮುಖ್ಯಮಂತ್ರಿಯಾಗಿದ್ದ ಎಚ್.ಡಿ. ಕುಮಾರಸ್ವಾಮಿ ಒತ್ತಡ ಹಾಕಿ ವರದಿಯನ್ನು ಪಡೆಯದಂತೆ ತಡೆದರು. ಕಾಂತರಾಜು ಅವರ ಅವಧಿ ಮುಗಿದ ನಂತರ ಜಯಪ್ರಕಾಶ್ ಹೆಗ್ಡೆಯವರನ್ನು ಬಿಜೆಪಿ ಸರಕಾರ ಆಯೋಗದ ಅಧ್ಯಕ್ಷರನ್ನಾಗಿ ನೇಮಕ ಮಾಡಿತು. ಸದಸ್ಯರೂ ಬಿಜೆಪಿಯವರೇ ಆಗಿದ್ದರು ಎಂದು ಸಿದ್ದರಾಮಯ್ಯ ಹೇಳಿದರು.

ಜಯಪ್ರಕಾಶ್ ಹೆಗ್ಡೆಯವರು ಸಮೀಕ್ಷೆಯ ದತ್ತಾಂಶಗಳ ಆಧಾರದ ಮೇಲೆ ಸರಕಾರಕ್ಕೆ 2024ರ ಫೆ.29ರಂದು ಶಿಫಾರಸ್ಸುಗಳನ್ನು ಒಳಗೊಂಡ ವರದಿಯನ್ನು ಸಲ್ಲಿಸಿದರು. ಲೋಕಸಭಾ ಚುನಾವಣೆ ಬಂದಿದ್ದರಿಂದ ವರದಿಯ ಬಗ್ಗೆ ಚರ್ಚೆ ಮಾಡಲು ಆಗಿರಲಿಲ್ಲ. ನಂತರ ವರದಿಯನ್ನು 2025ರಲ್ಲಿ ಸಚಿವ ಸಂಪುಟದಲ್ಲಿ ಮಂಡಿಸಲಾಯಿತು. ಮಂತ್ರಿ ಮಂಡಲದ ಸದಸ್ಯರು ವರದಿ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ನೀಡಿದ್ದಾರೆ. ಅಂತಿಮವಾಗಿ ಇಂದು ವರದಿಯ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅವರು ವಿವರಿಸಿದರು.

ಕೇಂದ್ರ ಸರಕಾರ ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ ನಡೆಸುವುದಾಗಿ ಹೇಳಿಲ್ಲ: ಕೇಂದ್ರ ಸರಕಾರ ನಡೆಸಲಿರುವ ಜಾತಿ ಗಣತಿಗಿಂತ ಈ ಸಮೀಕ್ಷೆ ಹೇಗೆ ಭಿನ್ನವಾಗಿ ಇರುತ್ತದೆ ಎಂಬ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ, ಕೇಂದ್ರ ಸರಕಾರವೂ ಎಲ್ಲಿಯೂ ಕೂಡಾ ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ ನಡೆಸುವುದಾಗಿ ಹೇಳಿಲ್ಲ. ಆದುದರಿಂದ, ನಾವು ಈ ಸಮೀಕ್ಷೆ ವರದಿ ಅನ್ವಯ ಸಾಮಾಜಿಕ ನ್ಯಾಯ ನೀಡಲು ಬದ್ಧವಾಗಿದ್ದೇವೆ ಎಂದು ಹೇಳಿದರು.

ತೆಲಂಗಾಣ ರಾಜ್ಯದಲ್ಲಿ 70 ದಿನಗಳಲ್ಲಿ ಈ ಸಮೀಕ್ಷೆ ನಡೆಸಿದ್ದಾರೆ. ನಮ್ಮ ರಾಜ್ಯದಲ್ಲಿ 90 ದಿನಗಳ ಒಳಗೆ ಸಮೀಕ್ಷೆ ನಡೆಸಿ, ವರದಿಯನ್ನು ಸಲ್ಲಿಸುವಂತೆ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಸೂಚಿಸಲಾಗುವುದು ಎಂದು ಸಿದ್ದರಾಮಯ್ಯ ಹೇಳಿದರು.


ಈ ಹಿಂದಿನ ಸಮೀಕ್ಷೆ ಕುರಿತು ಒಕ್ಕಲಿಗ ಹಾಗೂ ಲಿಂಗಾಯತ ಸಮುದಾಯಗಳಿಂದ ಆಕ್ಷೇಪಣೆ ಇತ್ತು. ಈ ಸಮೀಕ್ಷೆಯಲ್ಲಿ ಆ ಸಮುದಾಯಗಳಿಗೆ ಯಾವ ರೀತಿ ಭರವಸೆ ನೀಡುತ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ, ಸೆಕ್ಷನ್ 11 ರಂತೆ ಕಾನೂನು ರೀತಿಯ ಕ್ರಮ ಕೈಗೊಳ್ಳುತ್ತಿದ್ದೇವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್, ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ, ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಉಪಸ್ಥಿತರಿದ್ದರು.

**ಬಿಜೆಪಿಯ ಆರೋಪಗಳಿಗೆ ಪ್ರತಿಕ್ರಿಯಿಸುವುದಿಲ್ಲ: ಮುಖ್ಯಮಂತ್ರಿ**

ಜಾತಿ ಗಣತಿಯ ಮರು ಸಮೀಕ್ಷೆಗೆ ಸಂಬಂಧಿಸಿದಂತೆ ಬಿಜೆಪಿಯ ಯಾವೊಬ್ಬ ನಾಯಕರ ಆರೋಪಗಳಿಗೂ ಈ ಹಂತದಲ್ಲಿ ನಾನು ಪ್ರತಿಕ್ರಿಯಿಸುವುದಿಲ್ಲ. ಮುಂದಿನ ದಿನಗಳಲ್ಲಿ ಅವರ ಎಲ್ಲ ಆರೋಪಗಳಿಗೂ ಉತ್ತರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

# ಹಿಟ್ಟಣಗಿಯಲ್ಲಿ ಸಂಪನ್ನಗೊಂಡ ಗ್ರಾಮದೇವಿಯರ ಜಾತ್ರೆ



ಬೈಲಹೊಂಗಲ– ಸಮೀಪದ ಹಿಟ್ಟಣಗಿ ಗ್ರಾಮದಲ್ಲಿ ಸುಮಾರು ವರ್ಷಗಳ ತರುವಾಯ ಐದು ದಿನಗಳ ಕಾಲ ನಡೆದ ಗ್ರಾಮದೇವಿಯರ ದೇಮವ್ವ ಹಾಗೂ ದುರ್ಗಾದೇವಿಯ ಜಾತ್ರಾ ಮಹೋತ್ಸವವು ಬುಧವಾರ ಸಂಪನ್ನಗೊಂಡಿತು.

ಏಣಗಿಯ ಬಂಗಾರ ಅಜ್ಜನ ಮಠದ ವೇ.ಮೂ.ವೀರುಪಾಕ್ಷ ಸ್ವಾಮೀಜಿ ಅವರು ನೂತನ ಶ್ರೀ ಗ್ರಾಮದೇವಿ ದೇವಸ್ಥಾನ ಉದ್ಘಾಟಿಸಿ, ಹೋಮ, ಹವನ, ಮಹಾಪೂಜೆ ನೇತೃತ್ವ ವಹಿಸಿ ಮಾತನಾಡಿ, ಜಾತ್ರಾ ಮಹೋತ್ಸವಗಳು ಮನುಷ್ಯರಲ್ಲಿ ಭಕ್ತಿ–ಭಾಂದವ್ಯ ವೃದ್ದಿಸಲಿದ್ದು ಒಕ್ಕಟ್ಟಾಗಿ ಆಯೋಜನೆ ಮಾಡಿದಾಗ ಪ್ರತಿಯೊಂದು ಕಾರ್ಯಗಳು ಗ್ರಾಮಗಳಲ್ಲಿ ಯಶಸ್ವಿಯಾಗಲು ಸಾಧ್ಯವೆಂದರು.

ಪ್ರತಿ ದಿನ ಶ್ರೀದೇವಿಯರಿಗೆ ಉಡಿ ತುಂಬಲಾಯಿತು. ಯುವಕರು. ಮಹಿಳೆಯರು ಬಂಡಾರದಲ್ಲಿ ಮಿಂದೆದ್ದರು. ಶ್ರೀದೇವಿಯರ ಹೊನ್ನಾಟ, ಪಾಲಕಿ ಉತ್ಸವ ಜರುಗಿದವು. ಜಾತ್ರೆಯ ನಿಮಿತ್ಯ ಸಾಂಸ್ಕೃತಿಕ, ಅಧ್ಯಾತ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿತ್ತು. ನಿತ್ಯ ಅನ್ನ ಪ್ರಸಾದ ಜರುಗಿತು.. ಪ್ರತಿ ರಾತ್ರಿ ಡೊಳ್ಳು ಮಜಲು, ಗೀಗೀ ಪದಗಳು, ಭಜನೆ ನಡೆದವು. ಮುನವಳ್ಳಿಯ ಸೋಮಶೇಖರ ಮಠದ ಪೂಜ್ಯ ಮುರುಘೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಗೋಕಾಕದ ವಿಜಯ ಶಾಸ್ತ್ರೀ ಹಿರೇಮಠ, ಶಿವಯ್ಯ ಹಿರೇಮಠ ಅವ–ರಿಂದ ಪೂಜಾ ವಿಧಿ–ವಿದಾನಗಳು ಜರುಗಿದವು. ಶ್ರೀ ಗ್ರಾಮದೇವಿ ಜಾತ್ರಾ ಮಹೋತ್ಸವ ಕಮೀಟಿಯ ಮುಖ್ಯಸ್ಥ ಸಣ್ಣಸಂಗಪ್ಪ ಕಬ್ಬೂರ, ಪತ್ರೆಪ್ಪ ಅಂಗಡಿ ಹಾಗೂ ಆಡಳಿತ ಮಂಡಳಿಯ ಸದಸ್ಯರು, ಕುಸಲಾಪೂರ, ಗೋವನಕೊಪ್ಪ, ಹಿಟ್ಟಣಗಿ ಗ್ರಾಮಸ್ಥರು ಈ ಸಂದರ್ಭದಲ್ಲಿ ಉಪಸ್ಥಿತ–ರಿದ್ದರು. ಅಪಾರ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದರು.

# ರಸ್ತೆ ಸುರಕ್ಷತಾ ನಿಯಮ ಪಾಲನೆಯಾಗುವಂತೆ ಅಧಿಕಾರಿಗಳು ನಿಗಾವಹಿಸಬೇಕು ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ

ವಿಜಯಪುರ : ಅಪಘಾತ ತಡೆಯುವ ನಿಟ್ಟಿನಲ್ಲಿ ಮುಂಜಾಗೃತ ಕ್ರಮವಾಗಿ ರಸ್ತೆ ಸುರಕ್ಷತಾ ಪರಿಕ್ರಮ ಹಾಗೂ ಅಪಘಾತ ತಡೆಗೆ ಕೈಗೊಳ್ಳಬೇಕಾದ ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನ ಹಾಗೂ ರಸ್ತೆ ಸುರಕ್ಷತಾ ನಿಯಮಗಳು ಪಾಲನೆಯಾಗುವಂತೆ ಸಂಬಂಧಿಸಿದ ಅಧಿಕಾರಿಗಳು ನಿಗಾ ವಹಿಸುವಂತೆ ಜಿಲ್ಲಾಧಿಕಾರಿಗಳಾದ ಟಿ.ಭೂಬಾಲನ್ ಅವರು ಸೂಚನೆ ನೀಡಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಸ್ತೆ ಸುರಕ್ಷತಾ ಸಮೀತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರಸ್ತೆ ಅಪಘಾತ ತಡೆಯುವುದರ ಮೂಲಕ ಸುಗಮ ಸಂಚಾರ ಕಾಪಾಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಬರುವ ರಾಷ್ಟ್ರೀಯ ಹೆದ್ದಾ–ರಿಯಲ್ಲಿ ಅಪಘಾತ ಸಂಭವಿಸಬಹುದಾದ ಸ್ಥಳಗಳನ್ನು ಈಗಾಗಲೇ ಗುರುತಿಸಲಾಗಿದೆ.

ಸುರಕ್ಷತಾ ದೃಷ್ಟಿಯಿಂದ ರಸ್ತೆ ಅಗಲೀಕರಣ ರಸ್ತೆ ಸುಧಾರಣೆ, ಅವಶ್ಯವಿರುವಲ್ಲಿ ಅಗತ್ಯ ಮಾಹಿತಿ ಫಲಕ, ಸೈನ್ ಬೋರ್ಡ್, ಸೋಲಾರ್ ಬ್ಲಿಂಕರ್ಸ್ ಹಾಗೂ ಸರ್ವಿಸ್ ರಸ್ತೆಯಲ್ಲಿ ಬ್ಯಾರಿಕ್ಯಾಡ್ ಅಳವಡಿಕೆ, ರಸ್ತೆಗಳ ಮೇಲೆ ಅನಧಿಕೃತ ಪಾರ್ಕಿಂಗ್ ಮಾಡದಂತೆ ನಿಗಾವಹಿಸಬೇಕು, ರಸ್ತೆ ಒತ್ತುವರಿ ತೆರವುಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಸ್ತೆ ಅಪಘಾತ ತಡೆಯುವ ನಿಟ್ಟಿನಲ್ಲಿ ಕಡ್ಡಾಯವಾಗಿ ನಿಯಮಗಳನ್ನು ಪಾಲನೆಯಾಗುವ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ಸೂಚಿಸಿದರು. ಕೆಲವು ಕಡೆ ಅಂಗಡಿಕಾರರು ರಸ್ತೆ ಒತ್ತುವರಿ ಮಾಡಿಕೊಂಡಿದ್ದು, ಅಂಗಡಿ ಮುಂಭಾಗದಲ್ಲಿ ಎಲ್ಲೆಂದರಲ್ಲಿ ಪಾರ್ಕಿಂಗ್ ಮಾಡುವುದರಿಂದ ವಾಹನ ಸವಾರರಿಗೆ ತೊಂದರೆಯಾಗುತ್ತಿದೆ.

ಇಂತಹ ಒತ್ತುವರಿಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಿಕೊಡಬೇಕು. ಅವಶ್ಯಕತೆಯಿರುವಲ್ಲಿ ಸಿಸಿಟಿವಿ ಹಾಗೂ ವಿವಿಧೆಡೆ ಇರುವ ವೃತ್ತಗಳಲ್ಲಿ ಸೂಚನಾ ಫಲಕ ಹಾಗೂ ರಸ್ತೆ ಮಾರ್ಗ ಸೂಚಿಗಳನ್ನು ಅಳವಡಿಸಬೇಕು. ಜನದಟ್ಟಣೆ ಹಾಗೂ ಅಪಘಾತಕ್ಕೆ ಕಾರಣವಾಗುವ ಸಂಭವನಿಯಿರುವ ಸ್ಥಳಗಳಲ್ಲಿ ಸುಗಮ ಸಂಚಾರಕ್ಕೆ ಅನುವುಗೊಳಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಮಾತನಾಡಿ, ಜಿಲ್ಲೆಯ ಕೊಲ್ಹಾರ ಸೇತುವೆ ಮೇಲೆ ಬೀದಿ ದೀಪಗಳನ್ನು ಈಗಾಗಲೇ ಅಳವಡಿಸಲು ಕ್ರಮ ವಹಿಸಲಾಗಿದ್ದು, ಸೇತುವೆಗಳ ಮೇಲೆ ಸಂಚರಿಸುವ ವಾಹನಗಳ ನಂಬರ್ ಎದ್ದು ಕಾಣುವ ಹಾಗೂ ರಾತ್ರಿ ವಿಜನ್ ಇರುವ ಗುಣಮಟ್ಟದ ಸಿಸಿಟಿವಿ ಅಳವಡಿಸಲು ಸಂಬಂಧಿಸಿದ ರಾಷ್ಟ್ರೀಯ ಹೆದ್ದಾರಿ ಅಧಿಕಾ–ರಿಗಳಿಗೆ ಸೂಚನೆ ನೀಡಿದರು. ಟೋಲ್ ಗಳಲ್ಲಿ ದ್ವಿಚಕ್ರ ವಾಹನ ಸಂಚರಿಸುವ ಮಾರ್ಗಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿ ಅಳವಡಿಸಿ ನಿಗಾವಹಿಸಬೇಕು. ರಸ್ತೆಯ ತಿರುವುಗಳಲ್ಲಿ ಅಗತ್ಯ ಮಾಹಿತಿ ಹಾಗೂ ಸೂಚನಾ ಫಲಕ ಅಳವಡಿಸಿಕೊಂಡು ರಸ್ತೆ ಅಪಘಾತ ತಡೆಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅಪಘಾತ ಸಂಭವಿಸುವ ಸ್ಥಳಗಳನ್ನು ಗುರುತಿಸಿ ಅಲ್ಲಿ ಕೈಕೊಂಡಿರುವ ಕ್ರಮಗಳ ಕುರಿತು ಹಾಗೂ ಕೈಗೊಳ್ಳಬೇಕಾದ ಕಾರ್ಯಗಳ ಕುರಿತು ಸಂಬಂಧಿಸಿ ಅಧಿಕಾ–ರಿಗಳಿಗೆ ಪಿಪಿಟಿ ಮೂಲಕ ಸಮಗ್ರ ಮಾಹಿತಿ ನೀಡಿ ಅಗತ್ಯ ಸಲಹೆ ಸೂಚನೆಗಳನ್ನು ಅಧಿಕಾರಿಗಳಿಗೆ ನೀಡಿದರು.



ಈ ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಇಂಡಿ ಉಪ ವಿಭಾಗಾಧಿಕಾರಿ ಅನುರಾಧ ವಸ್ತ್ರದ, ಪ್ರಾದೇಶಿಕ ಸಾರಿಗೆ ಅಧಿಕಾರಿ ವಸಿಂ ಬಾಬಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಂಪತ್ ಗುಣಾರಿ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ, ಪೀಟರ್ ಅಲೆಕ್ಸಾಂಡರ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

# ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಶ್ರಮಿಸೋಣ -ಅಪರ ಜಿಲ್ಲಾಧಿಕಾರಿ

ಹಾವೇರಿ: ಬಾಲ ಕಾರ್ಮಿಕ ಮುಕ್ತ ಜಿಲ್ಲೆ ಮಾಡುವುದು ಜಿಲ್ಲಾಡಳಿತ ಆಶಯವಾಗಿದೆ. ಈ ಹಿನ್ನಲೆಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಶ್ರಮಿಸೋಣ ಎಂದು ಅಪರ ಜಿಲ್ಲಾಧಿಕಾರಿ ಡಾ.ನಾಗರಾಜ ಎಲ್.ಅವರು ಹೇಳಿದರು.

ನಗರದ ಜಿಲ್ಲಾ ಗುರುಭವನದಲ್ಲಿ ಗುರುವಾರ ಜಿಲ್ಲಾ ನ್ಯಾಯಾಂಗ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯವಾದಿಗಳ ಸಂಘ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಸಹಯೋಗದಲ್ಲಿ ಆಯೋಜಿಸಲಾದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಪ್ರತಿಜ್ಞಾವಿಧಿ ಬೋಧಿಸಿ ಅವರು ಮಾತನಾಡಿದರು.

ಯಾವುದೇ ಮಗು ಶಾಲೆಯಿಂದ ಹೊರಗುಳಿಯಬಾರದು ಎಂಬ ಉದ್ದೇಶದಿಂದ ಸರ್ಕಾರ ಕಡ್ಡಾಯ ಶಿಕ್ಷಣ ಜಾರಿಗೆ ತಂದಿದೆ. ಶಿಕ್ಷಣದಿಂದ ಮಹತ್ವದ ಬದಲಾವಣೆ ಸಾಧ್ಯ, ದೇಶದ ಆರ್ಥಿಕ ಬೆಳವಣಿಗೆಗೆ ಶಿಕ್ಷಣ ಸಹಕಾ–ರಿಯಾಗಿದೆ. ಮಕ್ಕಳು ಬಾಲ್ಯಾವಸ್ಥೆಯಲ್ಲಿ ತಮ್ಮ ಹಕ್ಕುಗಳನ್ನು ಪಡೆಯುವ ಜೊತೆಗೆ ಶಿಕ್ಷಣವಂತರಾಗಿ ಉತ್ತಮ ಬದುಕು ಕಟ್ಟಿಕೊಳ್ಳಬೇಕು. ಪೋಷಕರು ತಮ್ಮ ಮಕ್ಕಳನ್ನು ಕೆಲಸಕ್ಕೆ ಕಳಿಸದೇ ಶಾಲೆಗೆ ದಾಖಲಿಸುವ ಮೂಲಕ ಅವರಿಗೆ ಉಜ್ವಲ ಭವಿಷ್ಯ ಕಟ್ಟಿಕೊಡಬೇಕು ಎಂದು ಸಲಹೆ ನೀಡಿದರು.

ಪ್ರತಿಯೊಬ್ಬರೂ ಬಾಲ ಕಾರ್ಮಿಕ ಪದ್ಧತಿ ವಿರೋಧಿಸಬೇಕು. ಮಕ್ಕಳು ತಮ್ಮ ಹಕ್ಕುಗಳ ಮತ್ತು ಕಾಯ್ದೆ ಬಗ್ಗೆ ಅರಿವು ಹೊಂದಬೇಕು. ಮಕ್ಕಳ ಹಕ್ಕುಗಳ ರಕ್ಷಣೆಗೆ ವಿವಿಧ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ. ಕೈಗಾ–ರಿಕೆಗಳು, ಹೋಟೆಲ್, ಕಾರ್ಖಾನೆಗಳು ಇತರೆ ಸ್ಥಳಗಳಲ್ಲಿ ಬಾಲ ಕಾರ್ಮಿಕರು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098ಗೆ ಕರೆಮಾಡಿ ಅಂತಹ ಮಕ್ಕಳನ್ನು ಬಾಲ ಕಾರ್ಮಿಕ ಪದ್ಧತಿಯಿಂದ ಮುಕ್ತಗೊಳಿಸಬೇಕು ಎಂದು ಹೇಳಿದರು.



ಕ್ಷೇತ್ರ ಶಿಕ್ಷಣಾಧಿಕಾರಿ ಎಂ. ಎಚ್. ಪಾಟೀಲ ಅವರು ಮಾತನಾಡಿ, ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಆದ–ತೆ ನೀಡಿದ್ದು, ಉಚಿತ ಶಿಕ್ಷಣದ ಜೊತೆಗೆ ಪಠ್ಯಪುಸ್ತಕ, ಸಮವಸ್ತ್ರ, ಉಪಹಾರ, ಮೊಟ್ಟೆ, ರಾಗಿ ಮಾಲ್ಟ್ ಸೇರಿದಂತೆ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಮಕ್ಕಳು ಸರ್ಕಾರದ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು. ಕೆಲಸ ಅರಿಸಿ ಒಂದು ಪ್ರದೇಶದಿಂದ ಮತ್ತೊಂದು ಪ್ರದೇಶಕ್ಕೆ ಬರುವ ವಲಸೆ ಕಾರ್ಮಿಕರ ಮಕ್ಕಳಿಗೂ ಹತ್ತಿರದ ಶಾಲೆಗಳಲ್ಲಿ ದಾಖಲೆಮಾಡಿಕೊಂಡು ಶಿಕ್ಷಣ ನೀಡಲಾಗುತ್ತಿದೆ ಹಾಗೂ ವಲಸೆ ಕಾರ್ಡ್ ಸಹ ನೀಡಲಾಗುತ್ತಿದೆ. ಈ ವಲಸೆ ಕಾರ್ಡ್‌ನಿಂದ ಮುಂದೆ ಬೇರೆ ಸ್ಥಗಳಿಗೆ ಹೋದರೂ ಸಹ ಅಲ್ಲಿ ಈ ಕಾರ್ಡ್ ತೋರಿಸಿ ಶಾಲೆಗಳಿಗೆ ತೆರಳಬಹುದು ಎಂದು ಹೇಳಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅನ್ನಪೂರ್ಣ ಸಂಗಳದ ಮಾತನಾಡಿ, 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಅಪರಾಧವಾಗಿದೆ. 18 ವರ್ಷದೊಳಗಿನ ಮಕ್ಕಳು ಶಾಲೆಯಲ್ಲಿರಬೇಕು. ಮಕ್ಕಳಿಗೆ ಬದುಕುವ, ರಕ್ಷಣೆ, ಭಾಗವಹಿಸುವಿಕೆ ಹಾಗೂ ವಿಕಾಸದ ಹಕ್ಕು ನೀಡಲಾಗಿದೆ. ಮಕ್ಕಳಿಗೆ ಎಲ್ಲ ಹಕ್ಕುಗಳು ದೊರೆತಾಗ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯ. ಮಕ್ಕಳ ಮೇಲೆ ದೌರ್ಜನ್ಯ ನಡೆದಾಗ, ಕಾಣೆಯಾದ ಹಾಗೂ ಶಾಲೆಯಿಂದ ಹೊರಗಳಿದ ಮಕ್ಕಳು ಕಂಡುಬಂದಲ್ಲಿ ಕೂಡಲೇ ಮಕ್ಕಳ ಸಹಾಯವಾಣಿ ಸಂಖ್ಯೆ 1098ಗೆ ಕರೆಮಾಡಿ ಮಾಹಿತಿ ನೀಡಿದರೆ, ಅಂತಹ ಮಕ್ಕಳ ಸಮಸ್ಯೆ ಪರಿಹರಿಸಲಾಗುವುದು ಹಾಗೂ ಪುನರ್ವಸತಿ ಕಲ್ಪಿಸಲಾಗುವುದು. ಮಕ್ಕಳ ಸಹಾಯವಾಣಿ ದಿನದ 24 ಗಂಟೆಯು ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು.

ಸಹಾಯಕ ಕಾನೂನು ನೆರವು ಅಭಿರಕ್ಷಕ ಎನ್.ಎನ್.ದಿಳ್ಳೆಪ್ಪನವರ ಅವರು ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕ(ನಿಷೇಧ ಮತ್ತು ನಯಂತ್ರಣ ) ಕಾಯ್ದೆ–1986 ಹಾಗೂ ತಿದ್ದುಪಡಿ ಕಾಯ್ದೆ–2016 ಕುರಿತು ಹಾಗೂ ಆಶಾ ಕಿರಣ ರೂರಲ್ ಡೆವಲಪ್‌ಮೆಂಟ್ ಸೊಸೈಟಿ ಅಧ್ಯಕ್ಷ ಮುತ್ತುರಾಜ ಮಾದರ ಬಾಲಕಾರ್ಮಿಕ ಪದ್ಧತಿಯ ಕಾರ್ಯ ವಿಧಾನ ಮತ್ತು ತಡೆಗಟ್ಟುವಿಕೆ ಕ್ರಮಗಳ ಕು–ರಿತು ಉಪನ್ಯಾಸ ನೀಡಿದರು.

ಪ್ರಶಸ್ತಿ ಪತ್ರ ವಿತರಣೆ: ಇದೇ ಸಂದರ್ಭದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಆಯೋಜಿಸಲಾದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಡಿ.ವೈ.ಎಸ್.ಪಿ. ಎಂ. ಎಸ್.ಪಾಟೀಲ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಶ್ರೀನಿವಾಸ ಆಲದರ್ತಿ ಹಾಗೂ ಕಾರ್ಮಿಕ ನಿರೀಕ್ಷಕ ಮಹಾಂತೇಶ ಹಿರೇಮಠ ಇತರರು ಉಪಸ್ಥಿತರಿದ್ದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ತರನ್ನುಮ ಬೆಂಗಾಲಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ದೀಪಾ ಕಾರ್ಯಕ್ರಮ ನಿರೂಪಿಸಿದರು, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ರಾಘವೇಂದ್ರ ಶಿರೂರ ವಂದಿಸಿದರು.

ಜಾಥಾ: ಕಾರ್ಯಕ್ರಮಕ್ಕೂ ಮೊದಲು ಬೆಳಿಗ್ಗೆ ಹಾವೇರಿ ನಗರದ ಮುನ್ಸಿಪಲ್ ಹೈಸ್ಕೂಲ್ ಆವರಣದಲ್ಲಿ ಜಾಗೃತಿ ಜಾಥಾಕ್ಕೆ ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್..ಸಿ. ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಪ್ರಭಾರ ಸದಸ್ಯ ಕಾರ್ಯದರ್ಶಿಗಳಾದ ಬಿಪಿನ್ ಎಚ್.ಎಂ. ಅವರು ಹಸಿರು ನೀಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕರಾದ ಭಾರತಿ ಎಚ್., ಜಿಲ್ಲಾ ಕಾರ್ಮಿಕ ಅಧಿಕಾರಿ ತರನ್ನುಮ ಬೆಂಗಾಲಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಚ್. ಪಾಟೀಲ, ಮುಖ್ಯೋಪಾಧ್ಯಾಯರಾದ ಶೋಭಾ ಜಾಫಟಗೇರಿ, ಇತರರು ಭಾಗವಹಿಸಿದ್ದರು.

# ಕ್ಷಯರೋಗಿಗೆ ಆಹಾರ್ ಕಿಟ್ ವಿತರಣೆ

ಹಾವೇರಿ: ಸಂಘ ಸಂಸ್ಥೆಗಳು, ಖಾಸಗಿ ಉದ್ಯಮಗಳು, ಚುನಾಯಿತ ಪ್ರತಿನಿಧಿಗಳು, ಕೈಗಾರಿಕೆಗಳ ಮಾಲಿಕರು, ನಿಕ್ಷಯ ಮಿತ್ರರಾಗಿ ಕ್ಷಯರೋಗಿಗಳನ್ನು ದತ್ತು ಪಡೆದು ಚಿಕಿತ್ಸೆ ಮುಗಿಯವವರಿಗೆ ಪೌಷ್ಠಿಕ ಆಹಾರದ ಕಿಟ್‌ಗಳನ್ನು ನೀಡಲು ಮುಂದಾಗಬೇಕು. ಇದರಿಂದ ಕ್ಷಯರೋಗಿಗಳು ಗುಣಮುಖರಾಗಲು ಸಹಕಾರಿಯಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಕ್ಷಯರೋಗಿ ಓರ್ವರಿಗೆ ಪೌಷ್ಠಿಕ ಆಹಾರದ ಕಿಟ್ ವಿತರಣೆ ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಜಿಲ್ಲೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕ್ಷಯರೋಗಿಗಳಿಗೆ ಚಿಕಿತ್ಸೆ ಪೂರ್ಣಗೊಳಿಸುವವರೆಗೆ ನಿಕ್ಷಯ ಮಿತ್ರರಾಗಿ ಪೌಷ್ಠಿಕ ಆಹಾರ ಕಿಟ್‌ಗಳನ್ನು ವಿತರಿಸಬೇಕೆಂದು ಎಂದು ಸಲಹೆ ನೀಡಿದರು. ಡಾ.ನಿಲೇಶ ಸೇರಿದಂತೆ ಆರೋಗ್ಯ ಇಲಾಖೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.



**ಬನಹಟ್ಟಿಯಲ್ಲಿ ಜರುಗಿದ ಮಾರುತೇಶ್ವರ ಜಾತ್ರಾ ಮಹೋತ್ಸವದಲ್ಲಿ ಸಾರವಾಡ ಬೊಂಬೆ ಕುಣಿತ ನೋಡುಗರ ಮನ ಸೆಳೆಯಿತು.**

# ಶರಣರ ಆದರ್ಶ ಪಾಲನೆ ಜತೆಗೆ ಮಕ್ಕಳಿಗೆ ಸಂಸ್ಕೃತಿ ಬಗ್ಗೆ ಅರಿವು ಮೂಡಿಸಿ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ



ಕೊಪ್ಪಳ,: ಶರಣರ ತತ್ವ ಅದರ್ಶಗಳನ್ನು ಪಾಲನೆ ಮಾಡುವ ಜೊತೆಗೆ ಮಕ್ಕಳಿಗೆ ನಮ್ಮ ಸಂಸ್ಕೃತಿ ಮತ್ತು ಅಚಾರ ವಿಚಾರಗಳ ಬಗ್ಗೆ ಅರಿವು ಮೂಡಿಸಿ ಸಮಾಜವನ್ನು ಜಾಗೃತಿಗೊಳಿಸಿ ಎಂದು ಮೈನಳ್ಳಿ–ಬಿಕನಳ್ಳಿ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಬುಧವಾರ ಸಂಜೆ ನಗರದ ಶ್ರೀ ರೇಣುಕಾಚಾರ್ಯ ಭವನದಲ್ಲಿ ಹುಣ್ಣಿಮೆಯ ಅರಿವು–ಆಚ–ಾರ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು. ಶರಣರು ವಚನಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವ ಜೊತೆಗೆ ಉತ್ತಮ ಸಂಸ್ಕೃತಿ ಮತ್ತು ಧರ್ಮವನ್ನು ಪಾಲನೆ ಮಾಡುವಂತೆ ಹೇಳಿ ಹೋಗಿದ್ದಾರೆ ಇಂಥಹ ಶರಣ–ರ ಪರಂಪರೆಯನ್ನು ಹೊಂದಿರುವ ನಾವೆಲ್ಲರು ಅವರ ತತ್ವ ಅದರ್ಶಗಳನ್ನು ಮೈಗೂಡಿಸಿಕೊಂಡು ಉತ್ತಮ ಸಮಾಜವನ್ನು ನಿರ್ಮಾಣ ಮಾಡಲು ಮುಂದಾಗಬೇಕಾಗಿದೆ ಎಂದರು.

ಈ ಬಾರಿ ಹುಣ್ಣಿಮೆಯ ಅರಿವು–ಆಚ–ಾರ ಕಾರ್ಯಕ್ರಮದಲ್ಲಿ ತೊಗಲು ಬೊಂಬೆ ಆಟ ಕಲಾವಿದರನ್ನು ಕರೆಸಿ, ಪರ್ದಶನ ಏರ್ಪಡಿಸಿ ಅವರನ್ನು ಪ್ರೋತ್ಸಾಹಿಸುವ ಕಾರ್ಯಮಾಡಿದ್ದಕ್ಕೆ ಖುಷಿಯ ವಿಚಾರವಾಗಿದೆ ಎಂದರು.

ಇದೇ ವೇಳೆ ಬೇವನಹಳ್ಳಿ ರಂಗ ಗಂಗೋತ್ರಿ ಕಲತಂಡ ಕಲಾವಿದರಾದ ಸುರೇಂದ್ರಸ್ವಾಮಿ ಅವರು 'ಒಂದೇ ಭಾರತ ಕನಸು' ಎಂಬ ತೊಗಲು ಬೊಂಬೆ ಆಟದ ಪ್ರಕಾರವನ್ನು ಪ್ರರ್ದಶಿಸಿದರು. ನಂತರ ಮಹೇಶ್ವರಸ್ವಾಮಿ ಶೇಖರಯ್ಯ ಮಳಿಮಠ ಅವರು ಪ್ರಸಾದ ವ್ಯವಸ್ಥೆ ಮಾಡಿದ್ದರು.

ಕಾರ್ಯಕ್ರಮದಲ್ಲಿ ಜಂಗಮ ಸಮಾಜ ಅಧ್ಯಕ್ಷರಾದ ಹಂಪಯ್ಯ ಮೆತಗಲ್ಲ, ನಗರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಬಸಯ್ಯ ಹಿರೇಮಠ, ಮುಖಂಡರಾದ ನೀಲಕಂಠಯ್ಯ ಹಿರೇಮಠ, ಶಿವಕುಮಾರ್ ಹಿರೇಮಠ, ಗವಿಸಿದ್ದಯ್ಯ ಲಿಂಗಬಸಯ್ಯನಮಠ, ಪಂಪಯ್ಯ ಹಿರೇಮಠ, ನಾಗಭೂಷಣ ಸಾಲಿಮಠ, ಮರಿಶಾಂತವೀರ, ಲಲಿತಾ ಹಿರೇಮಠ, ಜಯಶ್ರೀ ಹಿರೇಮಠ, ಸವಿತಾ ಹಿರೇಮಠ, ಲಲಿತಾ ಸಾಲಿಮಠ ಸೇರಿದಂತೆ ಇನ್ನೂ ಅನೇಕ ಜಂಗಮ ಸಮಾಜದವರು ಇದ್ದರು.


# ಬಸವಸಾಗರಕ್ಕೆ ಕೆಬಿಜೆಎನ್‌ಎಲ್ ಎಂ.ಡಿ ಭೇಟಿ, ಪರಿಶೀಲನೆ

ಮುದ್ದೇಬಿಹಾಳ: ತಾಲ್ಲೂಕಿನ ನಾಲತವಾಡ ಸಮೀಪದ ನಾರಾಯಣಪುರ ಬಸವಾಸಗರ ಜಲಾಶಯಕ್ಕೆ ಕೆಬಿಜೆಎನ್‌ಎಲ್ ಎಂ.ಡಿ ಕೆ.ಪಿ ಮೋಹನರಾಜ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇದೇ ವೇಳೆ ಜಲಾಶಯದ ಕ್ರಸ್ಟಗೇಟ್‌ಗಳ ಕಾರ್ಯಚರಣೆ, ನಿರ್ವಹಣೆ ಕುರಿತು ಮತ್ತು ಬೂದಿಹಾಳ, ಪೀರಾಪುರ ಏತ ನೀರಾವರಿ, ಸ್ಕಾಡಾ ಗೇಟ್‌ಗಳು, ಎಡದಂಡೆ ಮುಖ್ಯ ಕಾಲುವೆ, ಅದರಡಿಯಲ್ಲಿ ಬರುವ ಉಪಕಾಲುವೆಗಳ ಕಾರ್ಯ ನಿರ್ವಹಣೆ ಕುರಿತು ಮುಖ್ಯ ಎಂಜನೀಯರ ಆರ್. ಮಂಜುನಾಥ ಸೇರಿ ಇತರೆ ಅಧಿಕಾರಿ ವರ್ಗದಿಂದ ಸಮಗ್ರ ಮಾಹಿತಿ ಪಡೆಯುವದರ ಜೊತೆಗೆ ಕೆಲವು ವಿಷಯಗಳ ಕುರಿತು ಸಲಹೆ ನೀಡಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಾಲುವೆ ಕೊನೆ ಅಂಚಿನ ರೈತರಿಗೆ ನೀರು ತಲುಪಿಸುವದು ಮಹತ್ವದ ಉದ್ದೇಶವಾಗಿದೆ ಹೀಗಾಗಿ ಕಾಲುವೆ ಜಾಲಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತದೆ, ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸದ್ಬಳಕೆಗೆ ಆದ್ಯತೆ ನೀಡಲಾಗುತ್ತದೆ ಅದಕ್ಕೆ ಪ್ರತಿಯಾಗಿ ಕಾಮಗಾರಿ ಪೂರ್ಣಗೊಂಡ ವರದಿ ಸಲ್ಲಿಸುವುದರ ಜೊತೆಗೆ ಜಲಾಶಯಕ್ಕೆ ಸಂಬಂಧಿಸಿದ ಕಾಮಗಾರಿಗಳು, ಉದ್ಯಾನವನ ನಿರ್ಮಿಸುವದು ಮತ್ತು ಜಲಾಶಯದ ಭದ್ರತೆಗೆ ಧಕ್ಕೆ ಬರದಂತೆ ಪ್ರವಾಸೋದ್ಯಮ ಸೇರಿ ಇತರೆ ಇಲಾಖೆಗಳ ಸಹಯೋಗದೊಂದಿಗೆ ಅಣೆಕಟ್ಟು ಸುರಕ್ಷತೆಗೆ ಹೆಚ್ಚು ಒತ್ತು ನೀಡಲಾಗುತ್ತದೆ ಈ ನಿಟ್ಟಿನಲ್ಲಿ ಅಗತ್ಯವಿರುವ ಕಾಮಗಾರಿಗಳನ್ನು ಕೈಗೆತ್ತುಕೊಳ್ಳಲಾಗುವದು ಎಂದು ಸುದ್ದಿಗಾರರ ಪ್ರಶ್ನೇಗೆ ಉತ್ತರಿಸಿದರು.


ಈ ಸಂದರ್ಭದಲ್ಲಿ ಮುಖ್ಯ ಎಂಜನೀಯರ ಆರ್. ಮಂಜುನಾಥ, ಅಧೀಕ್ಷಕ ಅಭಿಯಂತರ ರಮೇಶ ರಾಠೋಡ, ಇಇ ಹಣಮಂತ ಕೊಣ್ಣೂರು, ಎಇಇಗಳಾದ ವಿದ್ಯಾಧರ, ರಾಘವೇಂದ್ರ ಕುಲಕರ್ಣಿ, ಶಂಕರ ಹಡಲಗೇರಿ, ಮಹಾಲಿಂಗಪ್ಪ ಭಜಂತ್ರಿ, ವಿಜಯಕುಮಾರ ಅರಳಿ, ಬಾಲಸುಬ್ರಮಣ್ಯಂ, ಬಾಲಚಂದ್ರ, ವಿರೇಶ, ಆರ್‌ಎಫ್‌ಒ ಯಶವಂತ ರಾಠೋಡ, ಸೇರಿ ಅಣೆಕಟ್ಟು ವಲಯದಡಿಯಲ್ಲಿ ಬರುವ ಅಧಿಕಾರಿಗಳು, ಸಿಬ್ಬಂದಿಗಳು ಸೇರಿದಂತೆ ಉಪಸ್ಥಿತರಿದ್ದರು.




**ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಅಶ್ವಿನಿ ರಾಜೇಂದ್ರ ದೇಶಪಾಂಡೆ ದಂಪತಿಗಳನ್ನು ಮಂಗಳವಾರ ತಾಲೂಕಿನ ಜಲಾಲಪೂರ ಗ್ರಾಮದಲ್ಲಿ ಅಬಾಜಿ ಪೌಂಡೇಶನ್ ಅಧ್ಯಕ್ಷ, ಜಿ.ಪಂ.ಮಾಜಿ ಸದಸ್ಯ ಪ್ರಣಯ ಪಾಟೀಲ ಅವರು ಸತ್ಕರಿಸಿದರು.**

**ಗ್ರಾಮದ ಹಿರಿಯ ಮುಖಂಡರಾದ ಬಸಗೌಡ ಪಾಟೀಲ, ಬಂಡು ಪೋಕ್ಲೆ, ಅಣ್ಣಾಸಾಹೇಬ ಕೋಣೆ, ಮೌಲಾನಾ ನದಾಫ, ಸಂಜೀವ್ ಜಾದವ, ವಸಂತ ಕಾಂಬಳೆ, ರಾಜು ಹವಾಲ್ದಾರ, ತಾತಾಸಾಬ ಹವಾಲ್ದಾರ ಹಾಗೂ ಗ್ರಾಮಸ್ಥರು ಸೇರಿ ಅನೇಕರು ಇದ್ದರು.**

# ನೀರೋಕಳಿ ಆಟದ ಸಂಭ್ರಮ




ರಬಕವಿ–ಬನಹಟ್ಟಿ,ಜೂ11:ಕಾರಹುಣ್ಣಿಮೆ ನಿಮಿತ್ತ ಸೋಮವಾರ ಪೇಟೆಯ ನಾಮದೇವ ಗಲ್ಲಿಯ ಮಾರುತಿ ದೇವರ ಜಾತ್ರಾ ನಿಮಿತ್ತವಾಗಿ ನೀರೋಕಳಿ ಕಾರ್ಯಕ್ರಮವು ಸಂಭ್ರಮದಿಂದ ಜರುಗಿತು.

ನೂರಾರು ಭಕ್ತರು ಶೃದ್ಧಾ ಭಕ್ತಿಯಿಂದ ಹೊಂಡಕ್ಕೆ ನೀರು ತುಂಬಿದರು.

ನೂರಕ್ಕೂ ಅಧಿಕ ಯುವಕರ ತಂಡ ಹೊಂಡದಲ್ಲಿನ ನೀರನ್ನು ತುಂಬಿಕೊಂಡು ಎದುರಾಳಿಗಾರರನ್ನಾಗಿಸಿ ಎಸೆಯುತ್ತಲೇ ಇದ್ದರು.

ನಾಗಪ್ಪ ಬಕರೆ ಹೊಂಡದ ಪೂಜೆಯೊಂದಿಗೆ ನೀರೋಕಳಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಈರಣ್ಣ ಹೊನವಾಡ, ಕುಮಾರ ಬಕರೆ, ಪ್ರಶಾಂತ ಕೊಳಕಿ, ಮಹಾಶಾಂತ ಶೆಟ್ಟಿ, ಗಿರೀಶ ಹಾಸೀಲಕರ, ವಾಸು ಕೋಪರ್ಡೆ, ಬಾಳು ಶ್ರೀಶೈಲ ಗಣೇಶನವರ, ರಾಮು ಕೋಪರ್ಡೆ, ಮಹಾಂತೇಶ ಜಾಲಿಕಟ್ಟಿ, ಮುಕುಂದ ಕೋಪರ್ಡೆ, ಗಂಗಪ್ಪ ಗೋಂದಕರ, ಬಾಳು ಗಣೇಶನವರ, ಮಾದೇವ ಬಸ್ಮೆ, ರಾಜು ಬಂಡಿಗಣಿ, ರಮೇಶ ಬೆಳ್ಳಗಿ, ಕಿರಣ ಭಸ್ಮೆ, ಆತ್ಮಾರಾಮ ಬಕರೆ, ಚಂದು ಗೋಂದಕರ, ಶ್ರೀಶೈಲ ಬಂಡಿಗಣಿ, ಮಹಾಂತೇಶ ಜಾಲಿಕಟ್ಟಿ, ಮಾನಿಂಗ ಕೋಪರ್ಡೆ, ಬಾಳಕೃಷ್ಣ ಹಾಸೀಕರ, ಜ್ಯೋತಿಬಾ ಕೋಪರ್ಡೆ ಹನುಮಾನ ದೇವರ ಟ್ರಸ್ಟ್ ಕಮಿತಿಯ ನೂರಾರು ಕಾರ್ಯಕರ್ತರು ಸೇರಿದಂತೆ ಅನೇಕರು ಇದ್ದರು.

# ತಾಯಿ ಯಲ್ಲಮ್ಮನ ನೆಲದಲ್ಲಿ ಕಾವ್ಯಶಕ್ತಿಯ ಆರಾಧನೆ

## ಕವಿತೆ ವ್ಯವಸ್ಥೆಯನ್ನು ಎಚ್ಚರಿಸುವ ಕೆಲಸ ಮಾಡಲಿ–ಡಾ.ಮೈತ್ರೇಯಿಣಿ ಗದಿಗೆಪ್ಪಗೌಡರ



**ಸವದತ್ತಿ:** ತಾಯಿ ಎಲ್ಲಮ್ಮನ ಪುಣ್ಯಭೂಮಿಯಲ್ಲಿ ಈ ಹೊತ್ತು ಕಾವ್ಯಶಕ್ತಿಯ ಆರಾಧನೆ ನಡೆದಿದೆ. ಕವಿತೆಗಳು ವ್ಯವಸ್ಥೆಯನು ಎಚ್ಚರಿಸುವುದರ ಜೊತೆಗೆ ಅರಾಜಕತೆಯನ್ನು ತೊಡೆದು ಹಾಕುವ ಕೆಲಸ ಮಾಡುತ್ತವೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯೆ ಡಾ. ಮೈತ್ರೇಯಿಣಿ ಗದಿಗೆಪ್ಪಗೌಡರ ನುಡಿದರು. ಅವರು ಸವದತ್ತಿಯ ಸಹೃದಯ ಸಾಹಿತ್ಯ ಪ್ರತಿ?ಾನ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಡಿ. ದೇವರಾಜ್ ಅರಸು ಮೆಟ್ರಿಕ್ ನಂತರದ ಬಾಲಕರ ನಿಲಯದಲ್ಲಿ ಆಯೋಜಿಸಿದ್ದ ಸಹೃದಯ ಕಾವ್ಯ ಪ್ರಶಸ್ತಿ ಪ್ರದಾನ ಹಾಗೂ ಕವಿಗೋಷ್ಠಿ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಸ್ತುತ ಸನ್ನಿವೇಶಗಳಲ್ಲಿ ಲಾಬಿ, ವಸೂಲಿಗಳಿಂದ ಪ್ರಶಸ್ತಿಗಳು ಮೌಲ್ಯ ಕಳೆದುಕೊಳ್ಳುತ್ತಿರುವ ಈ ಹೊತ್ತಿನಲ್ಲಿ ಸಹೃದಯ ಕಾವ್ಯ ಪ್ರಶಸ್ತಿ ತನ್ನ ಪಾರದರ್ಶಕತೆಯಿಂದ ವಿಭಿನ್ನವಾಗಿ ಗುರುತಿಸಿಕೊಂಡು ನಾಡಿನಾದ್ಯಂತ ಹೆಸರು ಮಾಡಿದೆ.

ಪ್ರತಿಷ್ಠಾನ ಯಾವುದೇ ಶಿಫಾರಸಿಗೆ ಮಣಿಯದೆ ಸೂಕ್ತವಾದ ಕೃತಿಗಳನ್ನು ಆಯ್ಕೆ ಮಾಡುವ ಮೂಲಕ ಕರ್ನಾಟಕದ ಎಲ್ಲ ಸಂಘ ಸಂಸ್ಥೆಗಳಿಗೆ ಮಾದರಿಯಾಗಿ ನಿಂತಿದೆ.

ಈ ಎರಡು ಕೃತಿಗಳ ಆಯ್ಕೆ ನನಗಂತೂ ಖುಷಿ ಕೊಟ್ಟಿದೆ. ಕವಿತೆ ಯಾವ ಮುಲಾಜಿಗೂ ಒಳಗಾಗದೆ ನಿರ್ಭಿಡೆಯಿಂದ ಕಾವ್ಯ ಕಟ್ಟಿದಾಗ ಬಹುಮಾನ, ಸಮ್ಮಾನಗಳು ಒಲಿದು ಬರಲು ಸಾಧ್ಯ. ರಾಜ್ಯದ ಎಲ್ಲ ದಿಕ್ಕುಗಳಿಂದ ಪ್ರತಿಭಾವಂತ ಕವಿಗಳನ್ನು ಬರುವಂತೆ ಮಾಡಿರುವುದು ಪ್ರತಿ?ಾನದ ಶ್ಲಾಘನೀಯ ಕಾರ್ಯ ಕಾವ್ಯ ಎನ್ನುವುದು ನಮ್ಮನ್ನೆಲ್ಲ ಹಿಡಿದಿಡುವ ಸಮ್ಮೋಹನ ಶಕ್ತಿ ಎಂದು ಅವರು ಹೇಳಿದರು.

ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಡಾ. ಬಸು ಬೇವಿನಗಿಡದ ಸವದತ್ತಿಯ ನೆಲದಲ್ಲಿ ನಾಗೇಶ್ ನಾಯಕ ಹುಟ್ಟು ಹಾಕಿದ ಸಹೃದಯ ಸಾಹಿತ್ಯ ಪ್ರತಿಷ್ಠಾನ ನಾಡಿನುದ್ದಗಲಕ್ಕೂ ಪಸರಿಸಿದೆ ಎಂಬುದಕ್ಕೆ ಮೂರು ವರ್ಷಗಳಿಂದ ರಾಜ್ಯದ ನಾನಾ ಕಡೆಗಳಿಂದ ಆಗಮಿಸಿ ಪ್ರಶಸ್ತಿ ಪಡೆದುಕೊಳ್ಳುತ್ತಿರುವ ಕವಿಗಳೇ ಉದಾಹರಣೆ. ಕಾವ್ಯಕ್ಕಾಗಿಯೇ ಮೀಸಲಾಗಿರಿಸಿದ ಈ ಪುರಸ್ಕಾರ ಯುವಪ್ರತಿಭೆಗಳನ್ನು ನೀರೆರೆದು ಪೋಷಿಸುವ ಕಾರ್ಯ ಮಾಡುತ್ತಿದೆ.

ಪ್ರಶಸ್ತಿ ಎನ್ನುವುದು ಇಂದು ಉದ್ಯಮವಾಗಿರುವ ಸಂದರ್ಭದಲ್ಲಿ ಒಂದು ಚಿಕ್ಕ ಪಟ್ಟಣದಲ್ಲಿ ಪ್ರಾಮಾಣಿಕವಾಗಿ ಕರೆದು ಪ್ರಶಸ್ತಿ ಪ್ರದಾನ ಮಾಡಿರುವುದು ಸಂತಸದ ಸಂಗತಿ. ಅದಮ್ಯ ಕಾವ್ಯಪ್ರೀತಿಯ ನಾಗೇಶ್ ಜೆ. ನಾಯಕ ಕವಿ ಪೂಜೆ ಮಾಡುತ್ತಿಲ್ಲ, ಕಾವ್ಯಪೂಜೆ ಮಾಡುತ್ತಿದ್ದಾರೆ. ಪುಟ್ಟ ಪ್ರಶಸ್ತಿಗಳ ಹಿಂದೆ ಯಾವ ದುರುದ್ದೇಶವೂ ಇರುವುದಿಲ್ಲ. ನಿರ್ಮಲ ಮನಸ್ಸಿನಿಂದ ನೀಡುತ್ತಿರುವ ಈ ಪ್ರಶಸ್ತಿ ಚಿರಕಾಲ ಉಳಿಯಲಿ ಎಂದು ಅವರು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ರತ್ನಾ ಕದಮ್ ವಸತಿ ನಿಲಯದಲ್ಲಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಹಮ್ಮಿಕೊಂಡಿರುವುದು ನಮ್ಮ ಸೌಭಾಗ್ಯ. ನಿಲಯದ ಮಕ್ಕಳು ಕನ್ನಡ ಭುವನೇಶ್ವರಿಯ ವರದಾನ ಪಡೆದ ಕವಿಗಳು, ಸಾಹಿತಿಗಳನ್ನು ಕಣ್ಣಾರೆ ಕಂಡು, ಅವರ ಮಾತು ಕೇಳಿ ಸ್ಫೂರ್ತಿ ಪಡೆಯುವ ಸದವಕಾಶವನ್ನು ಒದಗಿಸಿಕೊಟ್ಟ ಪ್ರತಿ?ಾನಕ್ಕೆ ಇಲಾಖೆ ವತಿಯಿಂದ ಕೃತಜ್ಞತೆ ಸಲ್ಲಿಸುವೆ ಎಂದು ನುಡಿದರು. ತೀರ್ಪುಗಾರರಾದ ಡಾ. ಸಿ. ಕೆ. ನಾವಲಗಿ ಸ್ಥೂಲವಾಗಿ ಪ್ರಶಸ್ತಿ ಕೃತಿಗಳ ಒಳನೋಟ ಪರಿಚಯಿಸಿದರು. ಪ್ರತಿ?ಾನಕ್ಕೆ ಆರ್ಥಿಕ ನೆರವು ನೀಡಿದ ವಿಠಲ ತಡಸಲೂರು ಸಾಹಿತ್ಯದ ಅಳಿಲು ಸೇವೆಯಲ್ಲಿ ಭಾಗಿಯಾಗಿರುವುದು ಸಂತಸ ತಂದಿದೆ ಎಂದರು. ಸವಿರಾಜ್ ಆನಂದೂರು, ಡಾ. ದಸ್ತಗೀರ್‌ಸಾಬ್ ದಿನ್ನಿ ಅವರಿಗೆ ತಲಾ 5000. ರೂ ನಗದು ಬಹುಮಾನ, ಪ್ರಶಸ್ತಿ ಫಲಕದೊಂದಿಗೆ ಸಹೃದಯ ಕಾವ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕನ್ನಡ ನಾಡು–ನುಡಿ ಸೇವೆಗೈದ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿ?ತ್ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ಅವರಿಗೆ ಗೌರವ ಪ್ರಶಸ್ತಿ ಪ್ರದಾನ ಮಾಡಲಾಯಿತು. ನಂತರ ನಡೆದ ಕವಿಗೋಷ್ಠಿಯಲ್ಲಿ ಎಮ್. ಡಿ. ಬಾವಾಖಾನ್, ಗಂಗಾ ಚಕ್ರಸಾಲಿ, ಶಿವರಾಜ್ ಅರಳಿ, ಸೌಮ್ಯ ಕೋಟಗಿ, ಮಂಜುನಾಥ ಸಿಂಗನ್ನವರ, ಎಫ್. ಎಲ್. ಮದಹಳ್ಳಿ, ವೈ. ಬಿ. ಕಡಕೋಳ, ಆನಂದ ಏಣಗಿ, ಬಿ. ಎಮ್. ಬಾವಾಖಾನ್, ಚನಬಸಯ್ಯ ಪೂಜೇರ, ಬಸವರಾಜ ಪತ್ತಾರ ಕವಿತೆ ವಾಚಿಸಿದರು. ಪ್ರತಿ?ಾನದ ಅಧ್ಯಕ್ಷ ನಾಗೇಶ್ ಜೆ. ನಾಯಕ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಮುಖ್ಯ ಅತಿಥಿ, ನಿಲಯ ಪಾಲಕ ಹಾಶೀಮ್ ತಹಶೀಲದಾರ್, ಹಾಗೂ ಪ್ರತಿಷ್ಠಾನದ ಸದಸ್ಯರು ಉಪಸ್ಥಿತರಿದ್ದರು. ಎಮ್. ಪಿ. ಪಾಟೀಲ ನಿರೂಪಿಸಿದರು. ಪ್ರವೀಣ ಶೆಟ್ಟೆಪ್ಪನವರ ಸ್ವಾಗತಿಸಿದರು. ಎಸ್. ಬಿ. ಗರಗದ ಗ್ರಂಥ ಸಮರ್ಪಣೆ ಮಾಡಿದರು. ರಮೇಶ್ ತಳವಾರ ವಂದಿಸಿದರು.

# ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ- ಸಂತೋಷ ಬಂಡೆ



ವಿಜಯಪುರ: ಬಾಲ ಕಾರ್ಮಿಕ ಪದ್ಧತಿಯು ಸಾಮಾಜಿಕ ಪಿಡುಗಾಗಿದ್ದು, ಮಕ್ಕಳನ್ನು ಬಾಲ ಕಾರ್ಮಿಕರನ್ನಾಗಿ ಮಾಡದೇ ಶಿಕ್ಷಣದ ಮುಖ್ಯ ವಾಹಿನಿಗೆ ಕರೆತಂದು ಈ ಪದ್ಧತಿಯ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಗುರುವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನವನ್ನು ಉದ್ದೇಶಿಸಿ ಮಾತನಾಡಿದರು. ಬಾಲ ಕಾರ್ಮಿಕರಾಗಿ ದುಡಿಯುತ್ತಿರುವ ಮಕ್ಕಳು ಈ ಕೆಟ್ಟ ವ್ಯವಸ್ಥೆಯಿಂದ ಹೊರಬಂದು ತಮ್ಮ ಹಕ್ಕುಗಳ ಕುರಿತು ಜಾಗೃತಿ ಹೊಂದಿ ದೇಶದ ಉತ್ತಮ ನಾಗರಿಕರಾಗಬೇಕು ಎಂದು ಹೇಳಿದರು.

ಮುಖ್ಯ ಶಿಕ್ಷಕ ಎಸ್ ಎಸ್ ಅರಬ ಅಧ್ಯಕ್ಷತೆ ವಹಿಸಿ ಮಾತನಾಡಿ, ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯಕ್ಕೆ ಕಷ್ಟವಾಗುವಂಥ ಕೆಲಸಗಳನ್ನು ಮಾಡುತ್ತಾ, ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಪೌಷ್ಟಿಕ ಆಹಾರ ಕೊರತೆಯಿಂದಾಗಿ ಅನೇಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಕೆಲವೊಮ್ಮ ತಮ್ಮ ಜೀವವನ್ನೇ ಕಳೆದುಕೊಳ್ಳುತ್ತಿದ್ದಾರೆ. ಹಾಗಾಗಿ ಬಾಲ ಕಾರ್ಮಿಕ ಪದ್ಧತಿಯಿಂದ ಉಂಟಾಗುವ ಪರಿಣಾಮದ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯತೆ ತುಂಬಾ ಇದೆ ಎಂದು ಹೇಳಿದರು. ಶಿಕ್ಷಕರಾದ ಎನ್ ಬಿ ಚೌಧರಿ, ಎಸ್ ಪಿ ಪೂಜಾರಿ,ಅತಿಥಿ ಶಿಕ್ಷಕಿ ಅಲ್ಫಿಯಾ ಅಂಗಡಿ, ಮಕ್ಕಳು ಭಾಗವಹಿಸಿದ್ದರು.

# ಕೆಎಲ್‌ಇಹೆಚ್‌ಇಆರ್ ಫಿಜಿಯೋಥೆರಪಿ ಇನ್‌ಸ್ಟಿಟ್ಯೂಟ್ ವಿದ್ಯಾರ್ಥಿನಿ ರಾಷ್ಟ್ರಮಟ್ಟದ ಚಾಂಪಿಯನ್‌ಷಿಪ್‌ನಲ್ಲಿ ಚಿಂದನೆ

## ಈಶಾ ಭಾರತ ಪಾಟೀಲ್ ರಾಷ್ಟ್ರೀಯ ಕರ್ಖಾಕ್ ಕುರೆಸ್ ಚಾಂಪಿಯನ್‌ಷಿಪ್‌ನಲ್ಲಿ ಬಂಗಾರ ಗೆದ್ದು ಜಾರ್ಜಿಯಾ ವಿಶ್ವ ಚಾಂಪಿಯನ್‌ಷಿಪ್‌ಗೆ ಆಯ್ಕೆ





ಬೆಳಗಾವಿ, : ಇನ್‌ಸ್ಟಿಟ್ಯೂಟ್‌ನ ಎರಡನೇ ವರ್ಷದ ಬಿ.ಪಿ.ಟಿ ವಿದ್ಯಾರ್ಥಿನಿ ಈಶಾ ಭಾರತ ಪಾಟೀಲ್ ಅವರು ಜೂನ್ 6 ರಿಂದ ಜೂನ್ 8 ರವರೆಗೆ ರಾಜಸ್ಥಾನದ ಉದಯಪುರದಲ್ಲಿ ನಡೆದ 4ನೇ ರಾಷ್ಟ್ರೀಯ ಹಿರಿಯ ಕರ್ಖಾಕ್ ಕುರೆಸ್ ಚಾಂಪಿಯನ್‌ಷಿಪ್ 2025 ರಲ್ಲಿ ನಡೆದ ಪಂದ್ಯಾವಳಿಯಲ್ಲಿ ಬಂಗಾರ ಪದಕ ಗೆದ್ದಿದ್ದಾರೆ.

ಕರ್ಖಾಕ್ ಕುರೆಸ್ ಎಂಬ ಕರ್ಖಾಕಿಸ್ತಾನದ ಪರಂಪರೆಯ ಕುಸ್ತಿ ಶೈಲಿಗೆ "ಃಡಿಟಿ ಃಟಜ" ಎಂಬ ಅಂತರಾಷ್ಟ್ರೀಯ ಪ್ರಚಾರ ಅಭಿಯಾನದ ಮೂಲಕ ಜಾಗತಿಕ ಗುರುತಿನ ಘಳಿಗೆ ಬಂದಿದೆ. ಈಶಾ ಅವರು ದೇಶದ ವಿವಿಧ ಭಾಗಗಳಿಂದ ಬಂದ ಪ್ರತಿಷ್ಠಿತ ಪೈಲ್ವಾನರ ನಡುವೆ ಅತ್ಯುತ್ತಮ ಪ್ರ ದ ರ್ಶ ನ ನೀಡಿ ಚಾಂಪಿಯನ್ ಪಟ್ಟವನ್ನು ಗಿಟ್ಟಿಸಿಕೊಂಡಿದ್ದಾರೆ. ಈಶಾ ಅವರ ಸಾಧನೆಗೆ ಇನ್ನೊಂದು ಹೆಗ್ಗುರುತು ಎಂದರೆ, ಅವರು ಇದೀಗ ಜಾರ್ಜಿಯಾದಲ್ಲಿ ನಡೆಯಲಿರುವ ವಿಶ್ವ ಕರ್ಖಾಕ್ ಕುರೆಸ್ ಚಾಂಪಿಯನ್‌ಷಿಪನಲ್ಲಿ ಭಾರತವನ್ನು ಪ್ರತಿನಿಧಿಸಲು ಆಯ್ಕೆಯಾಗಿದ್ದಾರೆ.

ಕೆ.ಎಲ್.ಇ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ (ಏಐಊಇಖ) ಫಿಜಿಯೋಥೆರಪಿ ಇನ್‌ಸ್ಟಿಟ್ಯೂಟ್ ಬೆಳಗಾವಿ ,ಇವರು ಈ ಸಂಧರ್ಭದಲ್ಲಿ ಹೆಮ್ಮೆಪಡುವಂತಹ ಕ್ಷಣವನ್ನು ಕಂಡಿದೆ.

ಕೆ.ಎ.ಎಚ್.ಇ.ಆರ್ ಸಂಸ್ಥೆ ಈಶಾ ಅವರ ಸಾಧನೆಗೆ ಅಭಿನಂದನೆ ಸಲ್ಲಿಸಿ, ಅವರ ಭವಿಷ್ಯಕ್ಕೆ ಶುಭ ಹಾರೈಸಿದೆ.

# ಮುಗಳಿಹಾಳದಲ್ಲಿ ಅಲಂಕರಿಸಿದ ಎತ್ತುಗಳಿಂದ ಕಾರ ಹುಣ್ಣಿಮೆ ಆಚರಣೆ




ಯರಗಟ್ಟಿ: ರೈತರ ಮೊದಲ ಹಬ್ಬ ಕಾರಹುಣ್ಣಿಮೆ ನಿಮಿತ್ಯ ಬುಧವಾರ ರೈತರು ತಮ್ಮ ಎತ್ತುಗಳಿಗೆ ಅಲಂಕಾರಿಕ ವಸ್ತುಗಳನ್ನು ಖರೀದಿಸಿ ಅಲಂಕರಿಸಿದರು.

ಎತ್ತುಗಳಿಗೆ ಅಲಂಕರಿಸುವ ಮಗಡ, ಮುಗಧಾರ, ಕೊರಳಲ್ಲಿ ಕಟ್ಟುವ ಲಡ್ಡು, ಕೋಡಿಗೆ ಅಲಂಕರಿಸುವ ಗೊಂಡೆ, ಗಾಡಿಗೆ ಅಲಂಕರಿಸುವ ವಿವಿಧ ಶೃಂಗಾರ ಸಾಮಾನುಗಳ ಖರೀದಿ ಜೋರಾಗಿ ನಡೆಯಿತು.

ಕರಿಹರಿಯುವ ವಿಶೇಷ ಹಬ್ಬ: ಕಾರ ಹುಣ್ಣಿಮೆ ದಿನ ಅಲಂಕಾರಗೊಳಿಸಿದ ಜೋಡೆತ್ತುಗಳನ್ನು ಸಮೀಪದ ಮುಗಳಿಹಾಳ ಗ್ರಾಮದಲ್ಲಿ ತಂದು ಅಗಸಿಗೆ ಕಟ್ಟಿರುವ ಬೇವಿನ ತಪ್ಪಲಿನ ತೋರಣ ಹರಿದುಕೊಂಡು ಮುನ್ನುಗ್ಗುವ ಆಟ ಇದಾಗಿದ್ದು, ಯಾವ ಎತ್ತು ಮೊದಲು ಮುಂದು ಬರುತ್ತದೆ. ಆ ಎತ್ತಿಗೆ ರೈತರು ಹಿಂಗಾರು ಮತ್ತು ಮುಂಗಾರು ಎಂದು ಪರಿಗಣಿಸುತ್ತಾರೆ. ಈ ಆಟಕ್ಕೆ ರೈತರು ತಮ್ಮ ಎತ್ತುಗಳೊಂದಿಗೆ ಅಗಸಿಗೆ ಬಂದು ಅವುಗಳಿಗೆ ಹುರಿದುಂಬಿಸಿ ಓಡಿಸುತ್ತಾರೆ. ರೈತರ ಹಬ್ಬವಾದ ಕಾರಹುಣ್ಣಿಮೆ ಆಚರಿಸಲಾಗುತ್ತಿದೆ. ಗಾಡಿ ( ಎತ್ತಿನಬಂಡಿ) ಅಲಂಕರಿಸಿದ್ದಾರೆ.

ಕೃಷಿ ಕೆಲಸಕ್ಕೆ ಬಳಸುವ ವಸ್ತುಗಳ ಪೂಜೆ: ಉಳುಮೆಗೆ ಬಳಸುವ ನೇಗಿಲು, ಕುಂಟೆ, ಗಾಡಿ, ಬಾರಕೋಲು ಮತ್ತು ಇನ್ನಿತರ ಸಾಮಾನುಗಳಿಗೆ ಹುರಮಂಜು ಇಲ್ಲವೆ ಗುಲಾಲು ಹಚ್ಚಿ ಸಿಂಗರಿಸಿ ಪೂಜೆ ಮಾಡಲಾಗುತ್ತದೆ.

ಪ್ರಸಕ್ತ ವರ್ಷ ಬಿತ್ತನೆಗೆ ಅಗತ್ಯವಿದ್ದ?ಷ್ಟು ತೇವಾಂಶವಾಗಿದ್ದು, ಹೆಚ್ಚಿನ ರೈತರು ಹಬ್ಬದ ದಿನದಂದೇ ಮುಂಗಾರು ಬಿತ್ತನೆಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಊರಿನ ಹಿರಿಯರು, ಯುವಕರು ಮತ್ತಿತರರು ಇದ್ದರು.

# ಯರಗಟ್ಟಿಯ ಶ್ರೀಮತಿ ಎ.ಕೆ.ನದಾಫ ಶಿಕ್ಷಕಿಯ ಬಿಳ್ಕೊಡುಗೆ ಸಮಾರಂಭ



ಯರಗಟ್ಟಿ : ಸ್ಥಳಿಯ ಅಂಬೇಡ್ಕರ ನಗರ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ 30 ವರ್ಷ ಶಿಕ್ಷಕಿ ಸೇವೆ ಸಲ್ಲಿಸಿ ನಿವೃತ್ತಿಯಾದ ಶ್ರೀಮತಿ ಎ.ಕೆ.ನದಾಫ ಅವರಿಗೆ ಬಿಳ್ಕೊಡುಗೆ ಹಾಗೂ ಅಭಿನಂದನಾ ಕಾರ್ಯಕ್ರಮದಲ್ಲಿ ಶಾಲಾ ಸಿಬ್ಬಂದಿ, ವಿವಿಧ ಇಲಾಖೆ, ಹಾಗೂ ಹಲವಾರು ಸಂಘಟನೆಯವರು ಸನ್ಮಾನಿಸಿದರು.

ಮುಖ್ಯಶಿಕ್ಷಕ ಪಿ.ಎಂ.ತಳವಾರ ಮಾತನಾಡಿ ಇವರ ಸುದೀರ್ಘ ಸೇವೆಯಲ್ಲಿ ನಿರಂತರ ಕಲಿಸುವಿಕೆ ಚಟುವಟಿಕೆಗಳಿಂದ ಮಕ್ಕಳು ಸದಾ ಉತ್ಸಾಹಿಗಳಿಂದ ಇರುತ್ತಿದ್ದವು.

1, 2,3ನೇ ತರಗತಿ ಮಕ್ಕಳಿಗೆ ಅಷ್ಟು ಕಲಿಸುವುದಲ್ಲದೆ ನಲಿ–ಕಲಿ ವಿಭಾಗ ತರಬೇತಿ ಸಹ ಪಡೆದಿದ್ದರು. ಇವರಿಂದ ಕಲಿತವರು ಬಹಳಷ್ಟು ಉನ್ನತ ಹುದ್ದೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ನಮ್ಮ ಶಾಲೆಯ ಒಬ್ಬ ಒಳ್ಳೆಯ ಗುಣಮಟ್ಟದ ಶಿಕ್ಷಕರನ್ನು ಕಳೆದುಕೊಂಡಂತಾಗಿದೆ ಎಂದರು.

ನಂತರ ಸದಾನಂದ ಹಣಬರ ಮಾತನಾಡಿ ಶಿಕ್ಷಕರನ್ನು ಗೌರವಿಸುವಷ್ಟು ಇನ್ನುಳಿದ ಇಲಾಖೆ ಸಿಬ್ಬಂದಿಯನ್ನು ಗೌರವಿಸುವದಿಲ್ಲಾ ಯಾವುದೇ ವ್ಯಕ್ತಿ ಉನ್ನತ ಮಟ್ಟದಲ್ಲಿ ಇದ್ದಾನೆ ಎಂದರೇ ಅವರ ಹಿಂದೆ ಕಲಿಸಿದ ಗುರುವಿನ ಆಶಿರ್ವಾದ ಮತ್ತು ಅವರು ಕಲಿಸಿ ಕೊಟ್ಟ ಶಿಕ್ಷಣ ಅತ್ಯ ಅಮೂಲ್ಯವಾಗಿರುತ್ತದೆ. ಸಮಾಜದಲ್ಲಿ ನಿವೃತ್ತಿಯಾಗಿರುವ ಶಿಕ್ಷಕಿ ಕ್ರಿಯಾಶೀಲರು, ಸಮಯಪ್ರಜ್ಞ, ಮಾತೃಹೃದಯದವರು ಅವರ ನಿವೃತ್ತಿ ಜೀವನ ಸುಖಮಯವಾಗಿರಲಿ ಎಂದರು.

ಶಾಲಾ ಸುಧಾರಣಾ ಸಮೀತಿ ಅದ್ಯಕ್ಷ ಡಿ.ಕೆ.ರಫೀಕ ಮಾತನಾಡಿ ಇವರಿಂದ ಶಾಲೆ ಇವರಿಂದ ಶಿಸ್ತಿನಿಂದ ಸದಾ ಚಟುವಟಿಕೆಯಂದ ಯಾವುದೆ ತೆರನಾದ ಕಪ್ಪು ಚುಕ್ಕೆ ಇಲ್ಲದಂತೆ ಸೇವೆ ಸಲ್ಲಿಸಿ ನಿವೃತ್ತ ಆಗುವ ಅವರ ಮುಂದಿನ ಜೀವನ ಸುಗಮವಾಗಿರಲಿ ಎಂದರು.

ಮುಖ್ಯ ಶಿಕ್ಷಕ ವಿಜಯ ಮರಡಿ, ಉಮಾ ಜೋಶಿ, ಇಮಾಮಸಾಬ ಹುಸೇನಾಯ್ಕರ, ಬಾಬು ಚೆನ್ನಮೇತ್ರಿ, ಫಿರೋಜ ಖಾದ್ರಿ, ಶಾಲೆಯ ಎಲ್ಲಾ ಶಿಕ್ಷಕರುಗಳು, ಆಡಳಿತ ಮಂಡಳಿಯವರು, ಮಕ್ಕಳು ಉಪಸ್ಥಿತರಿದ್ದರು.


***

# ಕಾರಹುಣ್ಣಿಮೆಯಂಗವಾಗಿ ಸಂಭ್ರಮದಿಂದ ಜರುಗಿದ ಕರಿ ಹರಿಯುವ ಸಂಪ್ರದಾಯ



ಬಸವನಬಾಗೇವಾಡಿ, : ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಬುಧವಾರ ಕಾರಹುಣ್ಣಿಮೆಯಂಗವಾಗಿ ರೈತ ಬಾಂಧವರು ತಮ್ಮ ತಮ್ಮ ಗ್ರಾಮದಲ್ಲಿ ಆಯಾಕಟ್ಟಿನ ಸ್ಥಳಗಳಲ್ಲಿ ಎತ್ತುಗಳನ್ನು ಓಡಿಸಿ ಕರಿ ಕರಿಯುವ ಮೂಲಕ ಸಂಭ್ರಮದಿಂದ ಕಾರಹುಣ್ಣಿಮೆಯನ್ನು ಆಚರಿಸಿದರು.ಕಾರಹುಣ್ಣಿಮೆಯಂಗವಾಗಿ ರೈತ ಬಾಂಧವರು ತಮ್ಮ ತಮ್ಮ ಮನೆಗಳಲ್ಲಿರುವ ಎತ್ತು, ಕರು, ಆಕಳುಗಳ ಮೈಯನ್ನು ತೊಳೆದು ಬಣ್ಣ ಹಚ್ಚಿ ಪೂಜೆ ಮಾಡಿ ನೈವೇದ್ಯ ಅರ್ಪಿಸಿ ಉತ್ತಮ ಮಳೆ–ಬೆಳೆ ಬರಲೆಂದು ಭೂತಾಯಿ,ಭಗವಂತನಲ್ಲಿ ಪ್ರಾರ್ಥಿಸಿದರು. ಎಮ್ಮೆಗಳ ಕೊಡುಗಳಿಗೂ ಬಣ್ಣ ಹಚ್ಚಿರುವುದು ಕಂಡುಬಂದಿತ್ತು. ರೈತ ಬಾಂಧವರು ತಮ್ಮ ಜಾನುವಾರಗಳಿಗೆ ಬಣ್ಣ ಹಚ್ಚಿ ಅಲಂಕಾರ ಮಾಡಿ ಸಂಭ್ರಮಿಸುವದು ಈ ಹುಣ್ಣಿಮೆಯ ವಿಶೇಷ.ಕರಿ ಹರಿಯಲು ಎತ್ತುಗಳ ಕೊರತೆ ಎದ್ದು ಕಾಣುತ್ತಿತ್ತು.

ಕರಿ ಹರಿಯುವ ಸ್ಥಳದಲ್ಲಿ ರೈತ ಬಾಂಧವರು, ಜನರು ಎತ್ತು–ಕರುಗಳನ್ನು ಒಂದು ಬದಿಯಿಂದ ಇನ್ನೊಂದು ಬದಿಗೆ ಓಡಿಸಿ ಕರಿ ಹರಿದರು. ಎರಡು ಬದಿಗಳಲ್ಲಿ ನಿಂತ ಜನರ ಕೂಗಾಟದ ಮಧ್ಯೆ ಎತ್ತು, ಕರುಗಳು ರಭಸವಾಗಿ ಇನ್ನೊಂದು ಬದಿಗೆ ತಲುಪಿದವು. ಕರಿ ಹರಿದ ನಂತರ ಜನರು ಎತ್ತರವಾಗಿ ಕಟ್ಟಿರುವ ಬೇವಿನ ತಪ್ಪಲು, ಕೊಬ್ಬರಿ ಬಟ್ಟಲ, ಬಾಳೆಹಣ್ಣು ಪಡೆಯಲು ಒಬ್ಬರ ಮೇಲೆ ಒಬ್ಬರು ಹತ್ತಿಕೊಂಡು ಪಡೆದುಕೊಳ್ಳಲು ಸ್ಪರ್ಧೆ ಮಾಡಿದರು. ಕೊನೆಯಲ್ಲಿ ಸಿಕ್ಕುವರು ಸಂತಸದ ನಗೆ ಬೀರಿದರು. ಪಟ್ಟಣದ ವಿಜಯಪುರ ರಸ್ತೆಯಲ್ಲಿರುವ ಗುರ್ಜಿ ಕಟ್ಟಿ ಹತ್ತಿರ ಕಾರಹುಣ್ಣಿಮೆಯಂಗವಾಗಿ ಮೊದಲು ಎತ್ತುಗಳನ್ನು ಓಡಿಸುವ ಮೂಲಕ ಕರಿ ಹರಿದು ರೈತ ಬಾಂಧವರು ಸಂಭ್ರಮಿಸಿದರು. ಕರಿ ಹರಿದ ನಂತರ ಎತ್ತುಗಳನ್ನು ಮೆರವಣಿಗೆ ಮೂಲಕ ಬಸವೇಶ್ವರ ದೇವಸ್ಥಾನಕ್ಕೆ ಹೋದ ನಂತರ ಬಸವೇಶ್ವರ ವೃತ್ತದ ಮೂಲಕ ಹಾಯ್ದು ರೈತರ ಮನೆಗೆ ಹೋದಾಗ ಆರತಿ ಮಾಡಿ ಎತ್ತುಗಳನ್ನು ಮನೆಗೆ ಬರಮಾಡಿಕೊಂಡಿದ್ದು ವಿಶೇಷ ಗಮನ ಸೆಳೆಯಿತು. ಈ ಸಂದರ್ಭದಲ್ಲಿ ಬಸಣ್ಣ ದೇಸಾಯಿ, ಬಸವರಾಜ ಶೆಂಡೆ, ಸಂಗಪ್ಪ ಡಂಬಳ, ಕಾಂತಪ್ಪ ರೆಡ್ಡೇರ,



ವೀರೇಶ ಹಿರೇಮಠ, ಮಂಜು ಹಾರಿವಾಳ, ಸಂತೋಷ ಕೂಡಗಿ, ಅರವಿಂದ ಗೊಳಸಂಗಿ, ಬೀರಪ್ಪ ಪೂಜಾರ, ಸಿದ್ದು ಶೆಂಡೆ, ಮುತ್ತು ಪೂಜಾರಿ, ರಮೇಶ ಖ್ಯಾಡದ, ಚಂದ್ರಶೇಖರ ಗೊಳಸಂಗಿ ಇತರರು ಇದ್ದರು.

ಗಣಪತಿ ವೃತ್ತದಲ್ಲಿಯೂ ಕರಿ ಹರಿ ಕಾರ್ಯಕ್ರಮಕ್ಕೆ ಪಂಚಾಕ್ಷರಿ ಕಾಳಹಸ್ತೇಶ್ವರಮಠ ಎತ್ತುಗಳಿಗೆ ಪೂಜೆ ಸಲ್ಲಿಸಿದ ನಂತರ ಅವರು ಚಾಲನೆ ನೀಡಿದರು.ನಂತರ ಸಂಪ್ರದಾಯದಂತೆ ಗುಂಡು ಎತ್ತಿ ಮಳೆ–ಬೆಳೆ ಭವಿಷ್ಯ ಕೇಳಲಾಯಿತು. ಈ ಸಂದರ್ಭದಲ್ಲಿ ಬಸವರಾಜ ಹಾರಿವಾಳ, ಅಶೋಕ ಗುಳೇದ ಗುರಪ್ಪ ತುಂಬಗಿ, ಶಿವಪ್ಪ ಬುರ್ಲಿ ಇತರರು ಇದ್ದರು. ಪಟ್ಟಣದ ಸಂಗೊಳ್ಳಿ ರಾಯಣ್ಣ ನಗರದಲ್ಲಿರುವ ಯಲ್ಲಾಲಿಂಗ ದೇವಸ್ಥಾನದ ಮುಂಭಾಗ ಎತ್ತುಗಳನ್ನು ಓಡಿಸುವ ಮೂಲಕ ಕರಿ ಹರಿಯುವ ಸಂಪ್ರದಾಯ ಆಚರಿಸಲಾಯಿತು. ನಂತರ ಯಲ್ಲಾಲಿಂಗ ದೇವಸ್ಥಾನ ಆವರಣದಲ್ಲಿ ಕಲ್ಲು–ಗುಂಡುಗಳನ್ನು ರೈತ ಬಾಂಧವರು ಎತ್ತಾ್ಯಡಿದರು.

ಕರಿ ಹರಿಯುವದನ್ನು ನೋಡಲು ಅಪಾರ ಸಂಖ್ಯೆಯ ಯುವಕರು ಸೇರಿದಂತೆ ಅನೇಕರು ಆಗಮಿಸಿದ್ದರು.

# ಮುಮ್ಮಿಗಟ್ಟಿಯ ಕೆ.ವಿ.ಜಿ. ಬ್ಯಾಂಕ್‌ಗೆ ಗ್ರಾಹಕಳ ಠೇವಣಿ

## ಹಣ ಮರಳಿ ಕೊಡಲು ಆಯೋಗದ ಆದೇಶ

ಧಾರವಾಡ : ಧಾರವಾಡದ ರಾಣಿಚನ್ನಮ್ಮ ನಗರದ ನಿವಾಸಿ ವಿದ್ಯಾ ಪ್ರತಾಪ ಇವರ ಗಂಡನು ಜೀವಿತಾ ಅವಧಿಯಲ್ಲಿ ಎದುರುದಾರರ ಬ್ಯಾಂಕಿನಲ್ಲಿ ರೂ.18,100 ಗಳ ಮೂರು ಒಟ್ಟು ರೂ.54,300 ಠೇವಣಿ ಇಟ್ಟಿದ್ದರು. ಗಂಡನ ಮರಣದ ನಂತರ ಠೆವಣಿಗಳ ಹಣವನ್ನು ಮರಳಿಸುವಂತೆ ಎದುರುದಾರರಿಗೆ ವಿನಂತಿಸಿದಾಗ ಅವರು ಕೊಟ್ಟಿರಲಿಲ್ಲ. ಅಂತಹ ಅವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಬ್ಯಾಂಕಿನ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ಫಿರ್ಯಾದಿದಾರಳು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ:03/02/2025 ರಂದು ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ, ವಿಶಾಲಾಕ್ಷಿ. ಅ. ಬೋಳಶೆಟ್ಟಿ ಸದಸ್ಯರು, ದೂರುದಾರಳ ಗಂಡನು ಎದುರುದಾರ ಬ್ಯಾಂಕಿನಲ್ಲಿ ಮೂರು ಠೇವಣಿಗಳನ್ನು ಇಟ್ಟಿರುವುದು ದಾಖಲೆಗಳ ಮುಖಾಂತರ ಕಂಡು ಬಂದಿರುತ್ತದೆ. ಅಲ್ಲದೇ ದೂರುದಾರಳ ಗಂಡನು ಜೀವಿತಾ ಅವಧಿಯಲ್ಲಿ ಕಾಂಟ್ರ್ಯಾಕ್ಟರಾಗಿದ್ದು ಬ್ಯಾಂಕಿನಲ್ಲಿ ಇಟ್ಟಿದ್ದ ಠೇವಣಿಗಳ ಸರ್ಟಿಫೀಕೇಟಗಳನ್ನು ತನ್ನ ಕೆಲಸದ ಅವಶ್ಯಕತೆಗಾಗಿ ಪಿಡಬ್ಲ್ಯೂಡಿ ಆಫೀಸಿನಲ್ಲಿ ಶೂರಿಟಿ ರೂಪದಲ್ಲಿ ಇಟ್ಟಿದ್ದರು.

ಈ ಕಾರಣಕ್ಕಾಗಿ ಬ್ಯಾಂಕಿನವರು ದೂರುದಾರಳಿಗೆ ಠೇವಣಿ ಹಣವನ್ನು ಕೊಟ್ಟಿರಲಿಲ್ಲ. ನಂತರ ಆಯೋಗ ಮಧ್ಯ ಪ್ರವೇಶಿಸಿ ಬ್ಯಾಂಕಿಗೆ ಸಂಬಂಧಪಟ್ಟ ದಾಖಲೆಗಳನ್ನು ದೂರುದಾರರಿಂದ ಬರೆಯಿಸಿಕೊಂಡು ಅವಳ ಗಂಡನ ಠೇವಣಿ ಹಣವನ್ನು ಆದೇಶವಾದ ಒಂದು ತಿಂಗಳ ಒಳಗಾಗಿ ಎದುರುದಾರರು, ಬ್ಯಾಂಕಿಗೆ ಕೊಡುವಂತೆ ಆಯೋಗತನ್ನ ತೀರ್ಪಿನಲ್ಲಿ ನಿರ್ದೇಶಿಸಿದೆ.

# ಅಪ್ರೆಂಟಿಶಿಪ್ ತರಬೇತಿಗಾಗಿ ನೇರ ಸಂದರ್ಶನ

ಬಾಗಲಕೋಟೆ, : ನವನಗರದ ಸರ್ಕಾರಿ ಐಟಿಐ(ಮಹಿಳಾ) ಕಾಲೇಜ್ ನಲ್ಲಿ ಟೊಯೊಟಾ ಕಿರ್ಲೋಸ್ಕರ್ ಅಟೋ ಪಾರ್ಟ್ಸ್ ಪ್ರೈವೇಟ್ ಲಿಮಿಟೆಡ್ ಬಿಡದಿ, ಬೆಂಗಳೂರು, ವತಿಯಿಂದ ಅಪ್ರೆಂಟಿಶಿಪ್ ತರಬೇತಿಗಾಗಿ ಐ ಟಿ ಐ ಉತ್ತೀರ್ಣಗೊಂಡ ಫಿಟ್ಟರ್, ಟರ್ನರ್, ವೆಲ್ಡರ್, ಮಶಿನಿಸ್ಟ್, ಎಲೆಕ್ಟ್ರೀಷಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್ಸ್, ಎಂಎಂವಿ, ಡೀಸೆಲ್ ಮೆಕ್ಯಾನಿಕ್ ವೃತ್ತಿಯ ಅಭ್ಯರ್ಥಿಗಳಿಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಎಲ್ಲ ಮೂಲ ಹಾಗೂ ದೃಢೀಕೃತ ಅಂಕಪಟ್ಟಿಗಳ ಪ್ರತಿಗಳೊಂದಿಗೆ ಜೂ.17 ರಂದು ಬೆಳಿಗ್ಗೆ 10 ಘಂಟೆಗೆ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಐಟಿಐ, ನವನಗರದ ಪ್ರಾಚಾರ್ಯರನ್ನು (9945228380/9538481674) ಸಂಪರ್ಕಿಸಲು ಪ್ರಕಟಣೆ ಮೂಲಕ ತಿಳಿಸಲಾಗಿದೆ.

# ಅರ್ಜಿ ಆಹ್ವಾನ

ಬಾಗಲಕೋಟೆ, : ಕೃಷಿ ವಿ.ವಿ ಧಾರವಾಡದ 2025–26ನೇ ಕೃಷಿ ಮೇಳದ ಪ್ರಯುಕ್ತ ಬಾಗಲಕೋಟ ಜಿಲ್ಲೆಯ ಶ್ರೇಷ್ಠ ಕೃಷಿಕ ಮತ್ತು ಶ್ರೇಷ್ಠ ಕೃಷಿ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ರೈತರು ಮತ್ತು ರೈತ ಮಹಿಳೆಯರು ಬಾಗಲಕೋಟೆ ಕೃಷಿ ವಿಜ್ಞಾನ ಕೇಂದ್ರ ಕಛೇರಿಗೆ ಭೇಟಿ ನೀಡಿ ಅಥವಾ ಕೃಷಿ ವಿಜ್ಞಾನ ಕೇಂದ್ರದ ಅಧಿಕೃತ ವೆಬ್‌ಸೈಟ್ **www.kvkbagalkot.com** ನಿಂದ ಅರ್ಜಿ ಪಡೆದು ಸೂಕ್ತ ಮಾಹಿತಿಯನ್ನು ಭರ್ತಿ ಮಾಡಿ ಆಯಾ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಮೂಲಕ ಕೃಷಿ ವಿಜ್ಞಾನ ಕೇಂದ್ರ ಬಾಗಲಕೋಟ ಕಛೇರಿಗೆ ಜುಲೈ.31 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.ಸಂಖ್ಯೆ : 9845164642/9060734627 ಸಂಪರ್ಕಿಸಬಹುದಾಗಿದೆ ಎಂದು ಬಾಗಲಕೋಟೆ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶದಲ್ಲಿ ಸಹಕಾರಿ ಕ್ಷೇತ್ರದಿಂದ ಜನತೆಗೆ ಹಲವು ಸೌಲಭ್ಯ-ಈರಣ್ಣ ಕಡಾಡಿ

ರಾಮದುರ್ಗ ; ದೇಶದಲ್ಲಿ ಸಹಕಾರಿ ಕ್ಷೇತ್ರದ ಪ್ರಗತಿಯಿಂದ ಜನತೆ ಹಾಗೂ ರೈತ ಸಮುದಾಯಕ್ಕೆ ಸಾಕಷ್ಟು ಸೌಲಭ್ಯಗಳು ದೊರೆಯುತ್ತಿವೆ. ಜನತೆ ಸಕಾಲಕ್ಕೆ ಪಡೆದ ಸಾಲ ಮರುಪಾವತಿ ಮಾಡಿ ಸಂಸ್ಥೆಗಳ ಪ್ರಗತಿಗೆ ಸಹಕಾರ ನೀಡಬೇಕು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದರು.

ತಾಲೂಕಿನ ಸಾಲಹಳ್ಳಿಯಲ್ಲಿ ಜ್ಯೋತಿ ಅರ್ಬನ್ ಕೋ-ಆಪ್ ಕ್ರೆಡಿಟ್ ಸೊಸೈಟಿಯ 8ನೇ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಸ್ವತಂತ್ರ್ಯ ಪೂರ್ವದಲ್ಲಿಯೇ ಸಹಕಾರ ಸಂಘ ಪ್ರಾರಂಭವಾಗಿದ್ದು, ಇಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದಿಂದ ಶೂನ್ಯ ಬಡ್ಡಿದರದಲ್ಲಿ ರೈತರಿಗೆ ಸಾಲ ಲಭಿಸುತ್ತಿದೆ ಎಂದರು.

ಒಂದು ಸಹಕಾರ ಸಂಸ್ಥೆಯ ಪ್ರಗತಿ ಆಡಳಿತ ಮಂಡಳಿಯ ಪ್ರಾಮಾಣಿಕತೆ,



ಸಿಬ್ಬಂದಿಗಳ ಕಾರ್ಯಕ್ಷಮತೆ ಅವಲಂಭಿಸಿದೆ. ಸಹಕಾರಿ ಕ್ಷೇತ್ರದ ಜೊತೆಗೆ ಸರಕಾರವೂ ಸಹ ಜನತೆಗೆ ಅನೇಕ ಸೌಲಭ್ಯಗಳನ್ನು ನೀಡುತ್ತಿದೆ. ಜನತೆ ಅವುಗಳ ಸದ್ಭಳಕೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಮಲ್ಲಣ್ಣ ಯಾದವಾಡ ಮಾತನಾಡಿ, ಸಹಕಾರಿ ಸಂಘ ಸ್ಥಾಪಿಸುವದು ಮುಖ್ಯವಲ್ಲ. ಆಡಳಿತ ಮಂಡಳಿಯವರು ಸ್ಥಾಪಿಸಿದ ಸಂಸ್ಥೆಯನ್ನು ಒಗ್ಗಟ್ಟಿನಿಂದ ಯಾವುದೇ ತೊಂದರೆ ಇಲ್ಲದೆ ಮುನ್ನಡೆಸಿಕೊಂಡು ಹೋಗುವುದು ಮುಖ್ಯ ಎಂದರು.

ಚಿಪ್ಪಲಕಟ್ಟಿ ಬೃಹನ್ಮಠದ ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿ ಸಾನಿಧ್ಯ ವಹಿಸಿದ್ದರು. ಸಂಘದ ಅಧ್ಯಕ್ಷ ಮಲ್ಲಪ್ಪ ಮದಗುಣಕಿ ಅಧ್ಯಕ್ಷತೆ ವಹಿಸಿದ್ದರು.

ಜ್ಯೋತಿ ಅರ್ಬನ್ ಸೊಸೈಟಿಯ ಉಪಾಧ್ಯಕ್ಷ ಬಸವರಾಜ ನೇಮಗೌಡರ, ಮಹಾಲಕ್ಷ್ಮೀ ಸೊಸೈಟಿಯ ಅಧ್ಯಕ್ಷ ಮಲ್ಲಪ್ಪ ಗಾಣಿಗೇರ, ನಿವೃತ್ತ ಪ್ರಾಚಾರ್ಯ ಸುಭಾಸ ಕಮದಾಳ, ಗ್ರಾ.ಪಂ ಅಧ್ಯಕ್ಷ ಹನಮಂತ ವಡ್ಡರ, ಮಾರುತಿ ಕೊಪ್ಪದ, ಸೋಮಶೇಖರಯ್ಯ ಹಲಗಿಮಠ, ಸದಾಶಿವ ಜೋರಾಪೂರ ಸೇರಿದಂತೆ ಸ್ಥಳೀಯ ಸಲಹಾ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

ಸೊಸೈಟಿಯ ಮುಖ್ಯ ಕಾರ್ಯನಿರ್ವಾಹಕ ಪ್ರಕಾಶ ರಡರಟ್ಟಿ ಸ್ವಾಗತಿಸಿದರು. ಆರ್.ಬಿ.ಸಾರವಾಡ ನಿರೂಪಿಸಿದರು. ಮಂಜುನಾಥ ಬೆಳಕೋಡ ವಂದಿಸಿದರು.

# ವಿಶ್ವ ಬಾಲಕಾರ್ಮಿಕ ವಿರೋಧಿ ದಿನ; ಅಧಿಕಾರಿಗಳಿಂದ ಪ್ರತಿಜ್ಞಾವಿಧಿ ಸ್ವೀಕಾರ



ಧಾರವಾಡ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ, ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಅವರ ಸಂಯುಕ್ತ ಆಶ್ರಯದಲ್ಲಿ ಇಂದು (ಜೂ.12) ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪ್ರತಿಜ್ಞಾವಿಧಿ ಸ್ವೀಕಾರ ಸಮಾರಂಭ ಜರುಗಿತ್ತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಮಾತನಾಡಿ, ಬಾಲಕಾರ್ಮಿಕರನ್ನು ಮತ್ತು ಕಿಶೋರ ಕಾರ್ಮಿಕರನ್ನು ನೇಮಿಸಿಕೊಳ್ಳುವುದು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಕಾಯ್ದೆ 1986 ರ ಪ್ರಕಾರ ಅಪರಾಧವಾಗಿರುತ್ತದೆ. ನೇಮಿಸಿಕೊಂಡ ಮಾಲೀಕರ ವಿರುದ್ಧ ಕಾಯ್ದೆಯಡಿ ಪ್ರಕರಣ ದಾಖಲಾದಲ್ಲಿ ರೂ.20 ಸಾವಿರ ದಿಂದ 50 ಸಾವಿರದವರೆಗೆ ದಂಡ ಹಾಗೂ 6 ತಿಂಗಳಿಂದ 2 ವರ್ಷದವರೆಗೆ ಜೈಲು ಶಿಕ್ಷೆ ಅವಕಾಶವಿರುತ್ತದೆ. ಆದ್ದರಿಂದ ಬಾಲಕಾರ್ಮಿಕರನ್ನು ನೇಮಿಸಿಕೊಳ್ಳದಂತೆ ಜಾಗೃತಿ ಅವಶ್ಯವಿರುತ್ತದೆ. ಹಾಗೂ ದುಡಿಮೆ ಮಾಡುತ್ತಿರುವ ಮಕ್ಕಳು ಕಂಡು ಬಂದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ: 1098 ಗೆ ಕರೆ ಮಾಡಿ, ಮಕ್ಕಳನ್ನು ರಕ್ಷಣೆ ಮಾಡಲು ಸಹಾಯವಾಗುತ್ತದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಹುಬ್ಬಳ್ಳಿ ವಿಭಾಗದ ಕಾರ್ಮಿಕ ಇಲಾಖೆಯ ಸಹಾಯಕ ಕಾರ್ಮಿಕ ಆಯುಕ್ತ ಸಚಿನ್.ವಾಯ್. ಹಳೇಮನಿ, ಕಾರ್ಮಿಕ ಅಧಿಕಾರಿಗಳಾದ ಅಕ್ಬರ್ ಮುಲ್ಲಾ, ಮಾರಿಕಾಂಬಾ ಹುಲಕೋಟಿ, ಹಿರಿಯ ಕಾರ್ಮಿಕ ನಿರೀಕ್ಷಕಾರಾದ ಅಕ್ರಮ ಅಲ್ಲಾಪುರ, ಭುವನೇಶ್ವರಿ ಕೋಟಿಮಠ, ರಜನಿ ಹಿರೇಮಠ, ಸಂಗೀತಾ ಬೆನಕೊಪ್ಪ, ಮೀನಾಕ್ಷಿ ಸಿಂದಿಹಟ್ಟಿ, ಲತಾ ಟಿ.ಎಸ್., ಯೋಜನಾ ನಿರ್ದೇಶಕ ಬಸವರಾಜ ಸಿ. ಪಂಚಾಕ್ಷರಿಮಠ ಸೇರಿದಂತೆ ಕಚೇರಿಯ ಎಲ್ಲ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

****

## ವ್ಯಾಪಕ ಮಳೆಯ ಮುನ್ಸೂಚನೆ; ತಮ್ಮ ಕೇಂದ್ರ ಸ್ಥಾನ ಬಿಡದಂತೆ ಜಿಲ್ಲೆಯ ಎಲ್ಲ ಅಧಿಕಾರಿ, ಸಿಬ್ಬಂದಿಗಳಿಗೆ ಡಿ.ಸಿ. ಆದೇಶ

ಧಾರವಾಡ ; ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಧಾರವಾಡ ಜಿಲ್ಲೆಯಲ್ಲಿ ಭಾರಿ ಮಳೆ ಆಗುವ ಸಾಧ್ಯತೆ ಇದ್ದು, (ರೆಡ್ ಅಲರ್ಟ್) ಬಾರಿ ಮಳೆಯಿಂದ ನೆರೆಹಾವಳಿ, ಜನ ಜಾನುವಾರು, ಜೀವ ಹಾನಿ, ರಸ್ತೆ ಹಾನಿ, ಸೇತುವೆ ಹಾನಿ, ಸಾರ್ವಜನಿಕ ಆಸ್ತಿ ಹಾನಿಗಳಿಂದ, ನಾಗರಿಕ ಮೂಲಭೂತ ಸೌಕರ್ಯಕ್ಕೆ ತೊಂದರೆ ಉಂಟಾಗದಂತೆ ಕ್ರಮ ವಹಿಸುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ತಮ್ಮ ತಮ್ಮ ಸ್ಥಾನದಲ್ಲಿದ್ದು ಮಳೆ ಹಾನಿಯಿಂದ ತೊಂದರೆಗೀಡಾದ ಸಾರ್ವಜನಿಕರ ಮೂಲಭೂತ ಸೌಕರ್ಯಗಳನ್ನು ತುರ್ತಾಗಿ ಸರಿಪಡಿಸಿ ಕ್ರಮ ವಹಿಸುವುದು ಅವಶ್ಯಕತೆವಿರುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಆದೇಶಿಸಿರುತ್ತಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಭಾರಿ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಜಿಲ್ಲೆಯ ಎಲ್ಲಾ ಇಲಾಖೆಯ ಜಿಲ್ಲಾ ಮಟ್ಟದ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಅವರ ಅದೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಕಡ್ಡಾಯವಾಗಿ ತಮ್ಮ ಕೇಂದ್ರ ಸ್ಥಾನದಲ್ಲಿದ್ದು ತುರ್ತು ಸಂದರ್ಭದಲ್ಲಿ ಕಾರ್ಯನಿರ್ವಹಿಸುವುದು ಅತಿ ಅವಶ್ಯಕವಿರುವುದರಿಂದ ಎಲ್ಲಾ ಜಿಲ್ಲಾ ಮಟ್ಟದ, ತಾಲೂಕು ಮಟ್ಟದ ಅಧಿಕಾರಿಗಳು ಅನಿವಾರ್ಯ ಪರಿಸ್ಥಿತಿಯಲ್ಲಿ ರಜೆಯ ಮೇಲೆ ತೆರಳಬೇಕಾದಲ್ಲಿ ಜಿಲ್ಲಾಧಿಕಾರಿಗಳ ಪೂರ್ವಾನುಮತಿ ಪಡೆದು ರಜೆಯ ಮೇಲೆ ತೆರಳಬೇಕು. ಆದೇಶವನ್ನು ಉಲ್ಲಂಘಿಸಿದ್ದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005 ರನ್ವಯ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯ ಜಲಪ್ರದೇಶಗಳಲ್ಲಿ ಅನಧಿಕೃತ ಪ್ರವೇಶ ನಿರ್ಭಂಧಿಸಿ, ಜಿಲ್ಲಾಧಿಕಾರಿ ಆದೇಶ

ಧಾರವಾಡ : 2025-26 ನೇ ಸಾಲಿನ ಮುಂಗಾರು ಅವಧಿಯಲ್ಲಿ ಬಿರುಸಿನ ಮಳೆಯಾಗುತ್ತಿದ್ದು, ಸಾರ್ವಜನಿಕರ ಹಿತದೃಷ್ಠಿಯಿಂದ ಧಾರವಾಡ ಜಿಲ್ಲೆಯಾದ್ಯಂತ ಇರುವ ಜಲಪಾತಗಳು, ಕೆರೆಗಳು, ಹಳ್ಳ-ಕೊಳ್ಳಗಳು, ಹೊಂಡಗಳು ಅಥವಾ ಅಪಾಯ ಮಟ್ಟಕ್ಕಿಂತ ಹೆಚ್ಚಾಗಿ ನೀರು ಸಂಗ್ರಹವಿರುವ ಪ್ರದೇಶಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಅನಧಿಕೃತವಾಗಿ ಇಳಿಯುವುದು, ಸ್ನಾನ ಮಾಡುವುದು, ಮುಳುಗಿ-ಏಳುವುದು, ಈಜುವುದು ಯಾವುದೇ ತರಹದ ಸಾಹಸ ಚಟುವಟಿಕೆ ನಡೆಸುವುದು ಇತ್ಯಾದಿ ಚಟುವಟಿಕೆಗಳನ್ನು ಮುಂದಿನ ಆದೇಶದವರೆಗೆ ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದ್ದಾರೆ.

## ಜೂನ್ 23 ರಂದು ಅಂಚೆ ಅದಾಲತ್ತ ಆಯೋಜನೆ

ಧಾರವಾಡ : ಹುಬ್ಬಳ್ಳಿ, ರೇಲ್ವೆ ಅಂಚೆ ವಿಭಾಗದ ಅಂಚೆ ಇಲಾಖಾ ಪಿಂಚಣಿದಾರರಿಗಾಗಿ ಪಿಂಚಣಿ ಅದಾಲತ್ತನ್ನು ಹುಬ್ಬಳ್ಳಿ ರೇಲ್ವೆ ಅಂಚೆ ವಿಭಾಗದ ಅಧೀಕ್ಷಕರ ಕಾರ್ಯಾಲಯದಲ್ಲಿ ಜೂನ್ 23, 2025 ರಂದು ಬೆಳಿಗ್ಗೆ 11 ಗಂಟೆಗೆ ನಡೆಸಲಾಗುವುದು.

ಸೇವೆಯಿಂದ ನಿವೃತ್ತರಾದ ನೌಕರರ ಪಿಂಚಣಿ ಮತ್ತು ಇತರೆ ನಿವೃತ್ತಿ ಸೌಲಭ್ಯಗಳ ಹಾಗೂ ಕುಟುಂಬ ಪಿಂಚಣಿದಾರರ ಅಹವಾಲುಗಳೇನಾದರೂ ಇದ್ದಲ್ಲಿ ಅವುಗಳನ್ನು ಅದಾಲತ್ತಿನಲ್ಲಿ ಆಲಿಸಲಾಗುವುದು, ಗ್ರಾಮೀಣ ಅಂಚೆ, ಸೇವಕರು ಮತ್ತಿತರಿಗೆ ಈ ಅದಾಲತ್ತಿನಲ್ಲಿ ಪಾಲ್ಗೊಳ್ಳಲು ಅವಕಾಶವಿಲ್ಲ.

ಪಿಂಚಣಿ ಅದಾಲತ್ತಿನಲ್ಲಿ ಹಾಜರಾಗುವವರಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ. ಅದಾಲತ್ತಿನಲ್ಲಿ ತೀರ್ಮಾನಿಸುವ ಅಹವಾಲುಗಳಿದ್ದಲ್ಲಿ ಹುಬ್ಬಳ್ಳಿ ರೇಲ್ವೆ ಅಂಚೆ ವಿಭಾಗದ ಅಧೀಕ್ಷಕರಿಗೆ ಜೂನ್ 18, 2025 ರೊಳಗಾಗಿ ಅಹವಾಲುಗಳನ್ನು ಲಿಖಿತ ರೂಪವಾಗಿ ಅಥವಾ ಇ-ಮೇಲ್ rms-doHB.ka@indiapost.gov.in ಮೂಲಕ ಸಲ್ಲಿಸಬಹುದು ಎಂದು ರೇಲ್ವೆ ಅಂಚೆ ಸೇವೆ ಹುಬ್ಬಳ್ಳಿ ವಿಭಾಗದ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಲಾ ಮಕ್ಕಳ ಕುಡಿಯುವ ನೀರಿಗಾಗಿ ಬೋರವೆಲ್ ಕೊರೆಸಿದ ಸಹ ಶಿಕ್ಷಕಿ



ಬೈಲಹೊಂಗಲ- ತಾವು ಸೇವೆ ಸಲ್ಲಿಸುತ್ತಿರುವ ಪಟ್ಟಣದ ಸರ್ಕಾರಿ ಉರ್ದು ಹಿರಿಯ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆ ನಂಬರ್ 2 ರಲ್ಲಿನ ವಿದ್ಯಾರ್ಥಿಗಳಿಗೆ ಆಗುತ್ತಿದ್ದ ನೀರಿನ ಭವಣೆ ಮನಗಂಡು ಸಹ ಶಿಕ್ಷಕಿ ಎಸ್. ಎಮ್. ರಾಯಬಾಗಿ ಅವರು ಶಾಲೆಗೆ ದೇಣಿಗೆಯಾಗಿ ಸುಮಾರು 80.000 ಸಾವಿರ ರೂ. ಖರ್ಚು ಮಾಡಿ ಬೋರ್ವೆಲ್ ಕೊರೆಸುವದರೊಂದಿಗೆ ಮಾನವೀಯತೆ ಮೆರೆದು ಇತರೇ ಶಿಕ್ಷಕರಿಗೆ ಮಾದರಿಯಾಗಿ ಹೊರ ಹೊಮ್ಮಿದ್ದಾರೆ.

ಸುಮಾರು ಒಂದೂವರೆ ಇಂಚು



ಜಲ ಬಂದಿದ್ದರಿಂದ ನೀರು ಚಿಮ್ಮುವದನ್ನು ಕಂಡು ಶಾಲೆಯ ವಿದ್ಯಾರ್ಥಿಗಳು ತುಂಬಾ ಪುಳಕಿತರಾಗಿದ್ದಾರೆ.

ಶಾಲೆಯಲ್ಲೆಡೆ ನೀರು ಪೂರೈಸಲು ಬೇಕಾದಂತಹ ಸಾಮಗ್ರಿಗಳನ್ನು ಸಹ ದೇಣಿಗೆ ರೂಪದಲ್ಲಿ ನೀಡಿ ಸಹಕಾರ ಕೊಟ್ಟು ಮಕ್ಕಳಿಗಾಗಿ ಶಾಶ್ವತ ನೀರಿನ ವ್ಯವಸ್ಥೆ ಮಾಡಿರುವದು ಕಲಿಯುಗದಲ್ಲೂ ಇಂಥಹ ಶಿಕ್ಷಕರು ಶಾಲೆಗಳಲ್ಲಿ ಇದ್ದಾರಾ? ಎಂದು ನಾಗರಿಕರು ಮಾತನಾಡುವಂತಾಗಿದೆ.

ಈ ಶಿಕ್ಷಕಿಯ ವಿಧಾಯಕ ಕಾರ್ಯಕ್ಕೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಬೆಳಗಾವಿಯ ಉಪನಿರ್ದೇಶಕಿ ಲೀಲಾವತಿ ಹಿರೇಮಠ, ಕ್ಷೇತ್ರ ಶಿಕ್ಷಣಾಧಿಕಾರಿ ಎ.ಎನ್ ಪ್ಯಾಟಿ ಹಾಗೂ ಎಸ್‌ಡಿಎಂಸಿ ಆಡಳಿತ ಮಂಡಳಿಯ ಸದಸ್ಯರು, ಶಿಕ್ಷಕ ವರ್ಗ, ವಿದ್ಯಾರ್ಥಿಗಳ ಪಾಲಕರು, ನಾಗರಿಕರು ಅಭಿನಂದಿಸಿದ್ದಾರೆ.

# ಪರಿಸರ ನಾಶ ಮನುಕುಲವೇ ಸರ್ವನಾಶ : ಹಿರೇಮಠ




ಮುಧೋಳ: ಮನುಷ್ಯ ಪ್ರಕೃತಿಯ ಸೌಲಭ್ಯಗಳನ್ನು ಸದ್ಭಳಕೆ ಮಾಡಿಕೊಂಡು ಪರಿಸರವನ್ನು ಶುದ್ಧನೀರು, ಗಾಳಿ, ಸ್ವಚ್ಚ ವಾತವರಣವಾಗಿರಿಸಿ ಸಂರಕ್ಷಿಸಿಕೊಂಡರೆ ಮುಂದಿನ ಜನಾಂಗವು ಬದುಕಿ ಬಾಳಲು ಸಾಧ್ಯ. ಪ್ರಸ್ತುತ ಮನುಷ್ಯ ತನ್ನ ಆಡಂಬರ ಹಾಗೂ ತಾಂತ್ರಿಕ ಬದುಕಿನಿಂದ ಪರಿಸರ ಸಂರಕ್ಷಿಸದೇ ನಾಶ ಮಾಡಹೊರಟರೆ ಮನುಕುಲವೇ ಸರ್ವನಾಶ ಆಗುವದು ಎಂದು ಪರಿಸರ ಜಾಗೃತಿಯ ಕುರಿತು ಪ್ರಾಚಾರ್ಯ ಎಂ. ಎಂ.ಹಿರೇಮಠ ಹೇಳಿದರು. ಬಾಗಲಕೋಟೆ ಬಿವಿವಿ. ಸಂಘದ ದಾನಮ್ಮದೇವಿ ಮಹಿಳಾ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ರಾಷ್ಟ್ರೀಯ ಸೇವಾ ಯೋಜನೆ ಘಟಕ 1 & 2, ಯೂತ್ ರೆಡ್ ಕ್ರಾಸ್ ಹಾಗೂ ಭಾರತ ಸ್ಕೌಟ್ & ಗೈಡ್ಸ್ ವತಿಯಿಂದ ಆಯೋಜಿಸಿದ 'ಸಸಿನೆಡುವ' ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

ಎನ್.ಎಸ್.ಎಸ್ ಘಟಕದ ಕಾರ್ಯಾಕ್ರಮ ಅಧಿಕಾರಿ ಎಸ್.ಕೆ.ಸಾರವಾಡ, ಭಾರತ ಸ್ಕೌಟ್ & ಗೈಡ್ಸ್‌ನ ರೇಂಜರ್ ಎ.ಸಿ. ಕೆರೂರ, ಯೂತ್ ರೆಡ್ ಕ್ರಾಸ್‌ನ ಪ್ರೊ.ಎಸ್.ಬಿ. ಕಬ್ಬಣದ, ಪ್ರೊ. ಮಲ್ಲಿಕಾರ್ಜುನ ಎಂ., ವಿದ್ಯಾರ್ಥಿ ಪಾಲಕ ಎಂ.ಸಿ. ಹಿರೇಮಠ ಹಾಗೂ ಸಿಬ್ಬಂದಿ ವರ್ಗ, ವಿದ್ಯಾರ್ಥಿನಿಯರು ಇತರರಿದ್ದರು.

# ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ




ತಾಳಿಕೋಟೆ, ತಾಲೂಕಿನ ಬಳಗಾನೂರ ಮತ್ತು ಮಿಣಜಗಿ ಗ್ರಾಮದಲ್ಲಿ ಕೃಷಿ ಇಲಾಖೆ ವಿಜಯಪುರ, ರೈತ ಸಂಪರ್ಕ ಕೇಂದ್ರ ತಾಳಿಕೋಟೆ ಹಾಗೂ ಕೃಷಿ ವಿಜ್ಞಾನ ಕೇಂದ್ರ ವಿಜಯಪುರ ಇವರ ಸಹಯೋಗದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮವನ್ನು ಬುಧವಾರರಂದು ಆಯೋಜಿಸಲಾಗಿತ್ತು.

ಬಳಗಾನೂರ ಗ್ರಾಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ಪಶು ಸಂಗೋಪನೆ ವಿಷಯ ತಜ್ಞರಾದ ಶ್ರೀಮತಿ ವಿಜಯಲಕ್ಷ್ಮೀ ಮುಂದಿನಮನಿ ಅವರು ಮಾತನಾಡಿ ಬೆಸಿಗೆಯಲ್ಲಿ ಪಶುಗಳಿಗೆ ಬರತಕ್ಕಂತಹ ಕಾಲು ಬೇನೆ ಮತ್ತು ಬಾಯಿಬೇನೆ ರೋಗ, ಚಪ್ಪರೋಗ ಮತ್ತು ದನಗಳಿಗೆ ಲಸಿಕೆ ಹಾಕಿಸುವ ಬಗ್ಗೆ ಮಾಹಿತಿ ನೀಡಿದರು.

ಇನ್ಸೋರ್ವ ಬೇಸಾಯ ಶಾಸ್ತ್ರ ತಜ್ಞರಾದ ಶ್ರೀಮತಿ ಶಿಲ್ಪಾ ಜೋಗಾಟಪುರ ಅವರು ಮಾತನಾಡಿ ಈ ಭಾಗದಲ್ಲಿ ತೊಗರಿ ಬೆಳೆಯು ಮುಖ್ಯವಾಗಿ ವಾಣಿಜ್ಯ ಬೆಳೆಯಾಗಿ ಮಾರ್ಪಟ್ಟಿದೆ ಈ ತೊಗರಿ ಬೆಳೆಗೆ ತಗಲುವ ಕೀಟ ರೋಗ ಭಾದೆ ಮತ್ತು ಹತೋಟೆಗೆ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಕೃಷಿ ಅಧಿಕಾರಿ ಮಹೇಶ ಜೋಶಿ ಅವರು ಬೀಜೋಪಚಾರ ಆಂದೋಲನದ ಮಹತ್ವ ಟ್ರೈಕೋಡರ್ಮಾ ಪೌಡರದ ಮಹತ್ವ ಕುರಿತು ರೈತರಿಗೆ ಮಾಹಿತಿ ವದಗಿಸಿದರು.

ಮಿಣಜಗಿ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಷಯ ತಜ್ಞರು ಹಾಗೂ ನಿವೇದಿ ಪಶುತಜ್ಞ ಡಾ.ಮಂಜುನಾಥ ರೆಡ್ಡಿ ಅವರು ಮಾತನಾಡಿ ನಾಯಿ ಕಡಿದಾಗ ಅದರಿಂದ ಆಗುವ ಅನಾಹುತ ಮತ್ತು ರೆಬಿಸಿ ಲಸಿಕೆ ಪಡೆದುಕೊಳ್ಳುವ ಮಾಹಿತಿ ಒದಗಿಸಿದ ಅವರು ಈ ಲಸಿಕೆ ಹಾಕಿಸಿಕೊಳ್ಳದಿದ್ದರೆ ಮೆದುಳಿನ ಮೇಲೆ ಪರಿಣಾಮ ಬೀರಿ ಮನುಷ್ಯನಿಗೆ ಹುಚ್ಚನಾಯಿ ಕಡಿತ ಸಂಬವಿಸಬಹುದು ಜಾಗೃತರಾಗಿ ಲಸಿಕೆಯನ್ನು ಹಾಕಿಸಿಕೊಳ್ಳುವದು ಮರಿಯಬಾರದೆಂದರು. ಇನ್ಸೋರ್ವ ಶ್ರೀಮತಿ ಶಿಲ್ಪಾ ಜೋಗಟಾಪೂರ ಅವರು ಹತ್ತಿ ತಳಿ, ತೊಗರಿ ತಳಿ, ಸೂಕ್ತ ಬೇಸಾಯ ಕ್ರಮಗಳ ಬಗ್ಗೆ ಮಾಹಿತಿ ಒದಗಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಆತ್ಮ ಯೋಜನೆಯ ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಸಂಗಮೇಶ ಪಾಟೀಲ, ಸಂಜೀವಿನಿ ಸಿಬ್ಬಂದಿ ಕಿರಣಕುಮಾರ, ಅಪ್ಪು ಕುಂಟರೆಡ್ಡಿ, ಕೃಷಿ ಸಖಿಯರು ಅಲ್ಲದೇ ಮಿಣಜಗಿ ಮತ್ತು ಬಳಗಾನೂರ ಅಲ್ಲದೇ ತಾಳಿಕೋಟೆ ಪಟ್ಟಣದ ಪ್ರಗತಿಪರ ರೈತಾಪಿ ಜನರು, ಮುಖಂಡರುಗಳು ಅಭಿಯಾನದಲ್ಲಿ ಪಾಲ್ಗೊಂಡಿದ್ದರು.



ಗೋಕಾಕ: ಇಲ್ಲಿನ ಭಾವ ಸಂಗಮ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ನರೇಂದ್ರ ಪುರಂದರೆ ಅವರ 88ನೇ ಜನ್ಮದಿನದ ಅಂಗವಾಗಿ ಅವರ ಆಪ್ತ ಬಳಗದ ವತಿಯಿಂದ ಬುಧವಾರದಂದು ನಗರದ ಅವರ ಸ್ವ-ಗೃಹದಲ್ಲಿ ಅವರನ್ನು ಗೌರವಿಸಿ ಸತ್ಕರಿಸಲಾಯಿತು.
ಈ ಸಂದರ್ಭದಲ್ಲಿ ಚಂದ್ರಶೇಖರ ಅಕ್ಕಿ.ಮಹಾಲಿಂಗ ಮಂಗಿ, ಮಹಾಂತೇಶ ತಾಂವಶಿ, ಮಲ್ಲಿಕಾರ್ಜುನ ಕಲ್ಲೋಳಿ, ರಜನಿ ಜೀರಗ್ಯಾಳ, ಶಾಮರಾವ್ ಕದಿಕಟ್ಟಿ, ಈಶ್ವರಚಂದ್ರ ಬೆಟಗೇರಿ, ಪುಷ್ಪಾ ಮುರಗೋಡ, ಸೋಮಶೇಖರ ಮಗದುಮ್ಮ, ರಾಮಚಂದ್ರ ಕಾಕಡೆ, ಈಶ್ವರ ಮಮದಾಪೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಧಾರವಾಡ ತಾಲೂಕಿನಲ್ಲಿ ತಾಳೆ ಬೆಳೆ ಪ್ರದೇಶ ವಿಸ್ತರಣೆ

ಧಾರವಾಡ : ಧಾರವಾಡ ತಾಲ್ಲೂಕಿನ ತೋಟಗಾರಿಕೆ ಇಲಾಖೆಯಲ್ಲಿ 2025-26 ನೇ ಸಾಲಿನ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಯೋಜನೆಯಡಿಯಲ್ಲಿ ತಾಳೆಬೆಳೆ ಹೊಸ ಪ್ರದೇಶ ವಿಸ್ತರಣೆ ಮಾಡಲು ರೈತರಿಗೆ ಎಣ್ಣೆ ತಾಳೆಯ ಸಸಿಗಳನ್ನು ಉಚಿತವಾಗಿ ನೀಡಲಾಗುವುದು, ಪ್ರತಿ ವರ್ಷ ಇವುಗಳ ನಿರ್ವಹಣೆಗೆ 4 ವರ್ಷದವರೆಗೆ ಸಹಾಯಧನ ನೀಡಲಾಗುತ್ತದೆ ಈ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಅಥವಾ ಕಛೇರಿ ದೂರವಾಣಿ ಸಂಖ್ಯೆ:0836-2744376 ಗೆ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಇಮ್ತಿಯಾಜ್ ಚಂಗಾಪುರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಬಿಲ್ ಆನಲೈನ್ ಮೂಲಕ ಪಾವತಿಸಲು ಸೂಚನೆ

ತಾಳಿಕೋಟೆ, : ಪಟ್ಟಣದ ಹೆಸ್ಕಾಂ ವಿದ್ಯುತ್ ಸಂಪರ್ಕ ಹೊಂದಿದ ಉಪ-ವಿಭಾಗ, ವ್ಯಾಪ್ತಿಯಲ್ಲಿ ಬರುವ ಗ್ರಾಹಕರು ಇನ್ನು ಮುಂದೆ ವಿದ್ಯುತ್ ಬಿಲ್ ವಸೂಲಾತಿಗೆ ಹೆಸ್ಕಾಂ, ಸಿಬ್ಬಂದಿಗಳು ಗ್ರಾಹಕರ ಮನೆಗೆ ಭೇಟಿ ಕೊಡಲಾಗುವದಿಲ್ಲ. ಗ್ರಾಹಕರು ವಿದ್ಯುತ್ ಬಿಲ್‌ಗಳನ್ನು ನಿಗಧಿತ ದಿನಾಂಕದೊಳಗೆ ಆನಲೈನ್ ಮೂಲಕ ಬಿಲ್ ಪಾವತಿಸಬೇಕೆಂದು ಕಾರ್ಯ ಮತ್ತು ಪಾಲನೆ ಉಪವಿಭಾಗ ಹೆಸ್ಕಾಂ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ) ವಿಜಯಕುಮಾರ ಎಚ್ ಬಿರಾದಾರ ಅವರು ತಿಳಿಸಿದ್ದಾರೆ.

ಗ್ರಾಹಕರು ತಮ್ಮ ವಿದ್ಯುತ್ ಬಿಲ್ ಪಾವತಿಗಾಗಿ ತಾಳಿಕೋಟೆ ಉಪ-ವಿಭಾಗದ ಹೆಸ್ಕಾಂ ಕಛೇರಿಯ ನಗದು ಕೌಂಟರ್‌ನಲ್ಲಿ ನೇರವಾಗಿ ಪಾವತಿಸಬೇಕು ಅಥವಾ ಆನಲೈನ್ ಸೇವಗಳಾದ ಪೇಟಿಮ್, ಫೋನ್ ಪೇ, ಗೂಗಲ್ ಪೇ ಹಾಗೂ ಹೆಸ್ಕಾಂನ ಅಧೀಕೃತ ಜಾಲತಾಣಗಳನ್ನು ವಿದ್ಯುತ್ ಬಿಲ್ ಪಾವತಿಗಾಗಿ ಉಪಯೋಗಿಸಲು ಅವಕಾಶವಿರುತ್ತದೆ. ಆದ್ದರಿಂದ ತಾಳಿಕೋಟಿ ಉಪ-ವಿಭಾಗದ ಎಲ್ಲಾ ಹೆಸ್ಕಾಂನ ಗ್ರಾಹಕರು ವಿದ್ಯುತ್ ಬಿಲ್‌ಗಳನ್ನು ನಿಗಧಿತ ದಿನಾಂಕದೊಳಗೆ ಪಾವತಿಸಿ ಹೆಸ್ಕಾಂನೊಂದಿಗೆ ಸಹಕರಿಸಬೇಕೆಂದು ಮನವಿ ಮಾಡಿದ್ದಾರೆ.

ತಪ್ಪಿದ್ದಲ್ಲಿ ವಿದ್ಯುತ್ ಬಿಲ್ ಬಾಕಿ ಇರುವ ವಿದ್ಯುತ್ ಸ್ಥಾವರಗಳ ವಿದ್ಯುತ್ ಸಂಪರ್ಕವನ್ನು ಕಡಿತಗೋಳಿ ವಸೂಲಾತಿಗೆ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಪ್ರಕಟನೆ ಮೂಲಕ ಅವರು ತಿಳಿಸಿದ್ದಾರೆ.

# ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನ ಉಗುಳಿದರೆ ದಂಡ ವಿಧಿಸಿ -ಜಿಲ್ಲಾಧಿಕಾರಿ ಡಾ.ವಿಜಯಮಹಾಚಿತೇಶ ದಾನಮ್ಮನವರ

ಹಾವೇರಿ:ಜೂ.12(ಕರ್ನಾಟಕ ವಾರ್ತೆ): ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನ ಉಗುಳಿದರೆ ಅಂತವರಿಗೆ ದಂಡವಿಧಿಸಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯವಾಗಿ ದಂಡದ ಸೂಚನಾ ಫಲಕ ಅಳವಡಿಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ತಂಬಾಕು ನಿಯಂತ್ರಣ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ ನಡೆಸಿದ ಅವರು, ತಂಬಾಕು ನಿಯಂತ್ರಣ ತಿದ್ದುಪಡಿ ಕಾಯ್ದೆ-2024ರನ್ವಯ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನಗಳ ಬಳಕೆ ನಿಷೇಧಿಸಲಾಗಿದೆ. 21 ವರ್ಷದೊಳಗಿನವರಿಗೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವಂತಿಲ್ಲ ಹಾಗೂ ದಂಡದ ಮೊತ್ತವನ್ನು ರೂ.200 ಮೊತ್ತದ ಬದಲಾಗಿ ರೂ. ಒಂದು ಸಾವಿರಕ್ಕೆ ಹೆಚ್ಚಿಸಲಾಗಿದೆ. ಈ ಕಾಯ್ದೆಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಸೂಚಿಸಿದರು.

ತಂಬಾಕು ಉತ್ಪನ್ನಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಿಗೆ,



ಶಾಲಾ-ಕಾಲೇಜು ಮಕ್ಕಳಿಗೆ ಸತತವಾಗಿ ಅರಿವು ಮೂಡಿಸಬೇಕು. ತಾಲೂಕು ಮಟ್ಟದಲ್ಲಿ ನಿಯಮಾನುಸಾರ ಸಭೆ ನಡೆಸಬೇಕು ಹಾಗೂ ಅಂಗಡಿಗಳ ಮೇಲೆ ಅನಿರೀಕ್ಷಿತ ದಾಳಿ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಎಲ್ಲಾ ಸ್ಥಳಿಯ ಸಂಸ್ಥೆಗಳ (ಗಃಃ) ವ್ಯಾಪ್ತಿಗಳಲ್ಲಿ ತಂಬಾಕು ಮಾರಾಟಗಾರರಿಗೆ ನಿಯಮನುಸಾರ ಪ್ರತ್ಯೇಕ ಪರವಾನಗಿ ನೀಡಬೇಕು ಎಂದು ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಜಿಲ್ಲೆಯ ಬಸ್ ನಿಲ್ದಾಣಗಳ ಮಳಿಗೆಗಳಲ್ಲಿ ಕಡ್ಡಾಯವಾಗಿ ತಂಬಾಕು ಉತ್ಪನ್ನಗಳ ಮಾರಾಟ ನಿಷೇಧಿಸಲು ಕೆ.ಎಸ್. ಆರ್.ಟಿ.ಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಸೂಚನೆ ನೀಡಿದರು.

ನಿಯಮಾನುಸಾರ ಶಾಲಾ-ಕಾಲೇಜುಗಳ 100 ಮೀಟರ್ ಅಂತರದೊಳಗೆ ತಂಬಾಕು ಉತ್ಪನ್ನಗಳ ಮಾರಾಟ ಮಾಡುವಂತಿಲ್ಲ. ಆಯಾ ಶಾಲಾ-ಕಾಲೇಜುಗಳ ವ್ಯಾಪ್ತಿಯ ಸ್ಥಳೀಯ ಗ್ರಾಮೀಣ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು, ಶಿಕ್ಷಕರು, ಎಸ್.ಡಿ.ಎಂ.ಸಿ. ಪ್ರತಿನಿಧಿಗಳು ಹಾಗೂ ಪೊಲೀಸ್ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸುವ ಮೂಲಕ ಶಾಲಾ-ಕಾಲೇಜುಗಳ 100 ಮೀಟರ್ ಅಂತರದೊಳಗೆ ತಂಬಾಕು ಉತ್ಪನ್ನಗಳ ಮಾರಾಟ ತಡೆಗೆ ಕ್ರಮಕೈಗೊಳ್ಳಬೇಕು. ತಂಬಾಕು ಮುಕ್ತ ಶಿಕ್ಷಣ ಸಂಸ್ಥೆ ಮಾಡಬೇಕು ಹಾಗೂ ಮಕ್ಕಳ ಕಲಿಕೆಗೆ ಉತ್ತಮ ವಾತಾವರಣ ನಿರ್ಮಾಣ ಮಾಡಿಕೊಡಬೇಕು ಹಾಗೂ ಕೋಟ್ಪಾ-2003 ರ ಕಾಯ್ದೆ ಪರಿಣಾಮಕಾರಿ ಅನುಷ್ಠಾನದ ಮೂಲಕ ತಂಬಾಕು ಮುಕ್ತ ಗ್ರಾಮಗಳ ಘೋಷಣೆ ಮಾಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಂಗಳೂರು ರಾಜ್ಯ ತಂಬಾಕು ಘಟಕದ ವಿಭಾಗೀಯ ಸಂಯೋಜಕರಾದ ಮಹಾಂತೇಶ ಉಳ್ಳಾಗಡ್ಡಿ ಮಾತನಾಡಿ, ಜಿಲ್ಲಾ ಮಟ್ಟದಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಜಿಲ್ಲೆಯಲ್ಲಿ ಕಳೆದ 2024-25ನೇ ಸಾಲಿನಲ್ಲಿ 73 ದಾಳಿ ನಡೆಸಿ, 695 ಪ್ರಕರಣ ದಾಖಲಿಸಲಾಗಿದೆ ಹಾಗೂ ರೂ.60,530 ದಂಡ ಸಂಗ್ರಹಣೆ ಮಾಡಲಾಗಿದೆ. 10,755 ಪುರುಷ ಹಾಗೂ 7,221 ಮಹಿಳೆಯರು ಸೇರಿ 17,976 ಜನರಿಗೆ ಆಪ್ತಸಮಾಲೋಚನೆ ನಡೆಸಲಾಗಿದೆ, ನಿಕೋಟಿನ್ ಗಮ್ಸ್ ಹಾಗೂ ಅಗತ್ಯ ಚಿಕಿತ್ಸೆ ನೀಡಲಾಗಿದೆ. ತಂಬಾಕು ಸೇವನೆಯ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದು ಮತ್ತು ತಂಬಾಕು ನಿಯಂತ್ರಣ ಕಾಯ್ದೆಯ(ಅಔಖಿಕಂ-2003) ಪರಿಣಾಮಕಾರಿ ಅನುಷ್ಠಾನದ ಕುರಿತು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಾಜೇಶ ಸುರಗಿಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಪಿ ಆರ್ ಹಾವನೂರ, ಆರ್.ಸಿ.ಎಚ್ ಅಧಿಕಾರಿ ಡಾ. ಜಯಾನಂದ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಗದೀಶ ಪಾಟೀಲ, ಡಾ. ನೀಲೇಶ,ಡಾ.ಸಂತೋಷ ದಡ್ಡಿ, ತಾಲೂಕಾ ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ : ಜಾಗೃತಿ ಜಾಥಾ

# ಬಾಲಕಾರ್ಮಿಕ ನಿರ್ಮೂಲನೆಗೆ ಶಿಕ್ಷಣವೇ ಅಸ್ತ್ರ : ನ್ಯಾ.ದಿಡ್ಡಿ



ಬಾಗಲಕೋಟ : : ವಿವಿಧ ಕಾರಣಗಳಿಂದ ಬಾಲ ಕಾರ್ಮಿಕರಾಗಿ ಕೆಲಸ ಮಾಡುತ್ತಿರುವ ಮಕ್ಕಳನ್ನು ಗುರುತಿಸಿ, ಶಿಕ್ಷಣ ನೀಡಿದಾಗ ಮಾತ್ರ ಬಾಲಕಾರ್ಮಿಕ ಪದ್ದತಿ ನಿರ್ಮೂಲನೆ ಸಾಧ್ಯವೆಂದು ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಶಿಕ್ಷಣ, ಸಮಾಜ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕಾರ್ಮಿಕ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು 14 ವರ್ಷದೊಳಗಿನ ಮಕ್ಕಳನ್ನು ಅವರ ಶಿಕ್ಷಣ ಹಕ್ಕಿನಿಂದ ವಂಚಿಸಿ, ದುಡಿಮೆಗೆ ಬಳಸುವುದು ಕಾನೂನು ಪ್ರಕಾರ ಅಪರಾಧವಾಗಿದ್ದು, ಮಕ್ಕಳನ್ನು ದುಡಿಸಿಕೊಳ್ಳುವವರ ವಿರುದ್ದ ಕಾನೂನು ಕ್ರಮಕೈಗೊಳ್ಳಲು ಮುಂದಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರು ಬಾಲಕಾರ್ಮಿಕರನ್ನು ಪತ್ತೆ ಹತ್ತಿ ಶಾಲೆಗೆ ಸೇರಿಸಿದ ಮಾತ್ರಕ್ಕೆ ಕರ್ತವ್ಯ ಮುಗಿಯದು. 2–3 ವರ್ಷಗಳವರೆಗೆ ನಿಗಾ ವಹಿಸಬೇಕು. ಶಿಕ್ಷಣವೇ ಜೀವನ ಬದಲಾವಣೆಗೆ ಏಕೈಕ ಮಾರ್ಗ. ನಮ್ಮ ಸುತ್ತಮುತ್ತಲಿನ ಎಲ್ಲಿಯಾದರೂ ಬಾಲ ಕಾರ್ಮಿಕರು ಕಂಡುಬಂದಲ್ಲಿ ಕಾರ್ಮಿಕ ಇಲಾಖೆಯ 1098 ಸಹಾಯವಾಣಿಗೆ ಮಾಹಿತಿ ನೀಡುವ ಕಾರ್ಯವಾಗಬೇಕು. ಮಾಹಿತಿ ನೀಡುವುದು ಸಹ ನಿಮ್ಮ ಜವಾಬ್ದಾರಿ ಮಾಡಿದ ಹಾಗೆ ಎಂದರು.

ಇಂತಹ ದುಷ್ಟ ಅಮಾನವೀಯ ಪದ್ದತಿಗೆ ತಿಲಾಂಜಲಿ ಇಡಬೇಕಾಗಿದೆ.

ಬಾಲ್ಯವನ್ನು ಕದಿಯುವ, ಕಸಿಯುವ ಹಕ್ಕು ಯಾರಿಗೂ ಇಲ್ಲ. ಬಾಲ ಕಾರ್ಮಿಕರನ್ನು ಪತ್ತೆ ಹಚ್ಚುವ ಅಧಿಕಾರಿಗಳ ಪ್ರಯತ್ನಕ್ಕೆ ಸಾರ್ವಜನಿಕರು ಸಹ ನೆರವಾಗಬೇಕು. ಅಂದಾಗ ಮಾತ್ರ ಬಾಲಕಾರ್ಮಿಕರನ್ನು ಗುರುತಿಸಿ, ಶಿಕ್ಷಣ ನೀಡುವ ಮೂಲಕ ಮುಖ್ಯವಾಹಿನಿಗೆ ತರಲು ಸಾಧ್ಯವಾಗುತ್ತದೆ. ಬಾಲಕಾರ್ಮಿಕನಾಗಿದ್ದ ಬಸವರಾಜ ಲಮಾಣಿ ಬಾಲ ಕಾರ್ಮಿಕ ವಿಶೇಷ ಶಾಲೆಯಲ್ಲಿ ವ್ಯಾಸಂಗ ಮಾಡಿ ಜ್ಯೂನಿಯರ್ ಇಂಜಿನೀಯರ್ ಆಗಿರುವುದು ಬೇರೆಯವರಿಗೆ ಸ್ಪೂರ್ತಿಯಾಗಲಿದೆ ಎಂದು ಹೇಳಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹನಮಂತಗೌಡ ಪಾಟೀಲ ಮಾತನಾಡಿದರು. ವಕೀಲರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಉಪ ಕಾನೂನು ನೆರವು ಅಭೀರಕ್ಷಕ ಪ್ರಶಾಂತ ನಾರಾಯಣ–ಕರ ಬಾಲ ಮತ್ತು ಕಿಶೋರ ಕಾರ್ಮಿಕರ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016 ಕು–ರಿತು ಉಪನ್ಯಾಸ ನೀಡಿದರು. ಬಾಲಕಾರ್ಮಿಕರಾಗಿದ್ದ ಬಸವರಾಜ ಲಮಾಣಿ ಇಂಜಿನೀಯರಾದ ಬಗೆಯ ಅನುಭವವನ್ನು ಹಂಚಿಕೊಂಡರು. ಬಾಲಕಾರ್ಮಿಕತೆಯಿಂದ ಮುಕ್ತಿಹೊಂದಿ ಮುಖ್ಯವಾಹಿನಿ ಶಾಲೆಗೆ ಸೇರಿದ ಮಕ್ಕಳಿಗೆ ಪ್ರಶಂಸಣಾ ಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ರಮೇಶ ಬದ್ನೂರ, ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಸ್ಥೆಯ ಯೋಜನಾ ನಿರ್ದೇಶಕ ಸುಧಾಕರ ಬಡಿಗೇರ, ಕಾರ್ಮಿಕ ನಿರೀಕ್ಷಕ ರಾಜಶೇಖರ ಕರಡಿಕೇರಿ ಸೇರದಂತೆ ಇತರರು ಉಪಸ್ಥಿತರಿದ್ದರು. ಕಾರ್ಯಕ್ರಮ ಪೂರ್ವದಲ್ಲಿ ಬಾಲಕಾರ್ಮಿಕ ವಿರೋಧಿ ದಿನದ ಅಂಗವಾಗಿ ಹಮ್ಮಿಕೊಂಡ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಾಯಿತು.

## ಹಸಿರು ಗ್ರಂಥಾಲಯ ಸದುಪಯೋಗ ಮಾಡಿಕೊಳ್ಳುವಂತೆ ಕರೆ



ಮೋಳೆ;– ಕಾಗವಾಡ ತಾಲೂಕಿನ ಐನಾಪೂರ ಪಟ್ಟಣದ ಸಿದ್ದೇಶ್ವರ ಟ್ರೀಪಾರ್ಕ್‌ನಲ್ಲಿ ಅರಣ್ಯ ಇಲಾಖೆಯ ವತಿಯಿಂದ ವಿದ್ಯಾರ್ಥಿಗಳಿಗೆ ಹಾಗೂ ಸ್ಪರ್ದಾತ್ಮಕ ಪರೀಕ್ಷೆ ಬರೆಯುವ ತಯಾರಿಯಲ್ಲಿ ಇರುವವರಿಗೆ ಕರ್ನಾಟಕ ರಾಜ್ಯದಲ್ಲಿಯೇ ಇದೇ ಮೊದಲ ಬಾರಿಗೆ ಹಸಿರು ಗ್ರಂಥ–ಾಲಯ ಸ್ಥಾಪನೆ ಮಾಡಲಾಗಿದೆ ಇದರ ಸದುಪಯೋಗ ಪಡೆದುಕೊಳ್ಳುವಂತೆ ಅಥಣಿ ವಲಯ ಅರಣ್ಯಾಧಿಕಾರಿ ರಾಕೇಶ ಅರ್ಜುನವಾಡ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಅವರು ಇಂದು ಪತ್ರಿಕಾ ಪ್ರಕಟನೆ ನೀಡಿ ಈ ವಿಷಯ ತಿಳಿಸಿದರು. ಈ ಗ್ರಂಥಾಲಯದಲ್ಲಿ ಎಲ್ಲ ಸ್ಪರ್ಧಾತ್ಮಕ ಪರೀಕ್ಷೆಗೆ ಬೇಕಾಗುವ ಪುಸ್ತಕಗಳು ಲಭ್ಯ ಇರಲಿವೆ. ಇಲ್ಲಿ ಅರಣ್ಯ ಇಲಾಖೆಯಲ್ಲಿ ಉಚಿತವಾಗಿ ನೋಂದಣಿ ಮಾಡಲಾಗುವುದು.ಬೆಳಿಗ್ಗೆಯಿಂದ ಸಂಜೆಯವರೆಗೆ ಐನಾಪೂರ ಪಟ್ಟಣದ ಸಿದ್ದೇಶ್ವರ ಉದ್ಯಾಣವನದಲ್ಲಿ ಅಧ್ಯಯನ ಮಾಡಿ ಮತ್ತೇ ಪುಸ್ತಕ ಹಿಂದುರಿಗಿಸಿ ಹೋಗಬಹುದು, ನೋಂದಣಿ ಮಾಡಲು ಅರಣ್ಯ ಇಲಾಖೆಯಲ್ಲಿ ತಮ್ಮ

ಆಧಾರ ಆರ್ಡ ಹಾಗೂ ಇತ್ತೀಚಿನ ಎರಡು ಭಾವಚಿತ್ರ ನೀಡಿ ಮುಂಚಿತವಾಗಿ ನೋಂದಣಿ ಮಾಡಿಕೊಂಡು ಗುರುತಿನ ಚೀಟಿ ಪಡೆಯಬೇಕೇಂದು ಅಥಣಿ ವಲಯ ಅರಣ್ಯಾಧಿಕಾರಿ ರಾಖೇಶ ಅರ್ಜುನವಾಡ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಸಿದ್ದನಗೌಡರ ಎತ್ತಿಗೆ ಪ್ರಥಮ ಸ್ಥಾನ

## ಸಂಭ್ರಮದ 'ಕರಿ' ಹರಿಯುವ ಕಾರ್ಯಕ್ರಮ



ರಬಕವಿ–ಬನಹಟ್ಟಿ,ಜೂ11: ನಗರದಲ್ಲಿ ಬುಧವಾರ ಸಂಜೆ ಕಾರು ಹುಣ್ಣಿಮೆಯ ನಿಮಿತ್ತವಾಗಿ ಕರಿ ಹ–ರಿಯುವ ಕಾರ್ಯಕ್ರಮ ಸಂಭ್ರಮ ಸಡಗರದಿಂದ ನಡೆಯಿತು.

ಕರಿ ಹರಿಯುವುದಕ್ಕಿಂತ ಮುಂಚಿತವಾಗಿ ಓಡುವ ಎತ್ತುಗಳನ್ನು ವಿವಿಧ ಬಣ್ಣಗಳಿಂದ ಮತ್ತು ಬೇವಿನ ಎಲೆಗಳ ಮಾಲೆಗಳಿಂದ ಶೃಂಗರಿಸಲಾಗಿತ್ತು. ಮೆರವಣಿಗೆಯ ಮೂಲಕ ಎತ್ತುಗಳನ್ನು ಗಾಂಧಿ ವೃತ್ತದ ಬಳಿಗೆ ತೆಗೆದುಕೊಂಡು ಹೋಗಲಾಯಿತು.

ಊರಿನ ಗೌಡರಾದ ಸಿದ್ದನಗೌಡ ಪಾಟೀಲ ಎತ್ತುಗಳಿಗೆ ಪೂಜೆ ಸಲ್ಲಿಸಿ ಎತ್ತುಗಳ ಓಟಕ್ಕೆ ಚಾಲನೆ ನೀಡಿದರು. ಒಟ್ಟು ನಾಲ್ಕು ಎತ್ತುಗಳು ಓಟದಲ್ಲಿ ಪಾಲ್ಗೊಂಡಿದ್ದವು.

ಸಿದ್ಧನಗೌಡ ಪಾಟೀಲ ಎತ್ತು ಪ್ರಥಮ, ರಾಜುಗೌಡ ಪಾಟೀಲರ ಎತ್ತು ದ್ವಿತೀಯ, ಬಸಪ್ಪ ದೇಸಾರ ಎತ್ತು ತೃತೀಯ ಮತ್ತು ಗುರು ಗಾಣಿಗೇರ ಎತ್ತು ನಾಲ್ಕನೆಯ ಸ್ಥಾನ ಪಡೆದುಕೊಂಡವು.

ಕೇವಲ ಹದಿನೈದು ನಿಮಿಷ ನಡೆಯುವ ಈ ಕರಿ ಹರಿಯುವುದನ್ನು ಹಿರಿಯರು, ಮಕ್ಕಳು ಸೇರಿದಂತೆ ಸಾಕಷ್ಟು ಸಂಖ್ಯೆಯಲ್ಲಿ ಹೆಣ್ಣು ಮಕ್ಕಳು ಇದ್ದರು.

ಈ ಸಂದರ್ಭದಲ್ಲಿ ಊರಿನ ಗೌಡರಾದ ಸಿದ್ದನಗೌಡ ಪಾಟೀಲ, ರಾಜುಗೌಡ ಪಾಟೀಲ, ಶ್ರೀಶೈಲ ಧಬಾಡಿ, ಮಲ್ಲಿಕಾರ್ಜುನ ತುಂಗಳ, ಬಸವರಾಜ ಗುಂಡಿ, ಶ್ರೀಶೈಲ ಉಳ್ಳಾಗಡ್ಡಿ, ಸಿದ್ದಪ್ಪ ಅಕ್ಕಿಮಡ್ಡಿ, ಮಲ್ಲಣ್ಣ ಕಕಮರಿ, ಮುರಿಗೆಪ್ಪ ಆದರಗಿ, ಗುಂಡಿ, ಪಂಡಿತಪ್ಪ ಪಟ್ಟಣ, ಮಹಾಶಾಂತ ಶೆಟ್ಟಿ, ಕಿರಣ ಆಳಗಿ, ಭೀಮಶಿ ಪಾಟೀಲ, ಬಸವರಾಜ ಜಾಡಗೌಡ, ದಾನಪ್ಪ ಹುಲಜತ್ತಿ, ಶೇಖರ ಸಂಪಗಾಂವಿ, ರೈತರು ಮತ್ತು ಗೌಡರ, ಮಂಗಳವಾರ ಹಾಗೂ ಸೋಮವಾರ ಪೇಟೆ ಸಮಸ್ತ ದೈವ ಮಂಡಳದ ಹಿರಿಯರು ಸುತ್ತ ಮುತ್ತಲಿನ ಗ್ರಾಮದ ಹಿರಿಯರು ಇದ್ದರು.

# ರಸ್ತೆ ವಿಭಜಕದಲ್ಲಿ ಕಾಲಿಗೆ ತಾಗುವ ವಿದ್ಯುತ್ ತಂತಿ ಕಣ್ಣಿಗೆ ಕಾಣದೇ?




**ಮಹಾಲಿಂಗಪುರ:** ಪಟ್ಟಣದಲ್ಲಿ ಹಾದು ಹೋಗಿರುವ ಮುಧೋಳ–ನಿಪ್ಪಾಣಿ ರಾಜ್ಯ ಹೆದ್ದಾರಿಯ ವಿಭಜಕದಲ್ಲಿನ ವಿದ್ಯುತ್ ತಂತಿ ನೆಲದಿಂದ ಕೇವಲ ಒಂದು ಅಡಿ ಎತ್ತರದಲ್ಲಿದ್ದು, ಪಾದಚಾರಿ ಮತ್ತು ವಾಹನ ಸವಾರರ ಕಾಲಿಗೆ ತಾಗುವ ವಿದ್ಯುತ್ ತಂತಿ ಕಣ್ಣಿಗೆ ಕಾಣದೇ? ಎಂದು ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ.

ನಿಪ್ಪಾಣಿ ರಸ್ತೆಯ ರಾಯಣ್ಣ ಸರ್ಕಲ್‌ನಿಂದ (ಬುದ್ನಿಯಿಂದ) ಮುಧೋಳ ರಸ್ತೆಯ ಅಗಸಿ ಬಾಗಿಲವರೆಗೆ ಹೆದ್ದಾರಿ ವಿಭಜಕದುದ್ದಕ್ಕೂ ಬೀದಿ ದೀಪಕ್ಕೆ ವಿದ್ಯುತ್ ಕಂಬ ಅಳವಡಿಸಲಾಗಿದೆ.

ಅವುಗಳ ಪೈಕಿ ಕಬ್ಬು ಮತ್ತು ಕಣಿಕೆ ಸಾಗಿಸುವ ಬಂಡಿ ಮತ್ತು ಟ್ರ್ಯಾಕ್ಟರ್‌ಗಳ ಒತ್ತಡಕ್ಕೆ ಹಾಗೂ ವಾಹನಗಳ ಢಿಕ್ಕಿಯ ಪರಿಣಾಮ ಹತ್ತಾರು ವಿದ್ಯುತ್ ಕಂಬಗಳು ಮುರಿದು ಬಿದ್ದಿವೆ. ಅವುಗಳ ಮರು ಅಳವಡಿಕೆ ಮಾಡದಿದ್ದರೂ ಪರವಾಗಿಲ್ಲ, ಆ ವಿದ್ಯುತ್ ಕಂಬಗಳ ತಳಪಾಯದಲ್ಲಿ ಅಳವಡಿಸಲಾದ ವಿದ್ಯುತ್ ತಂತಿಗಳು ಇನ್ನೂ ಹಾಗೇ ಉಳಿದಿವೆ. ಅವುಗಳ ತುದಿಗೆ ಟಿಕ್ಸೋ ಟೇಪ್ ಸುತ್ತಿ ತಾತ್ಕಾಲಿಕ ಸುರಕ್ಷೆ ಮಾಡಿ ಕೈತೊಳೆದುಕೊಂಡಿದ್ದಾರೆ.

ಕರೆಂಟ್ ಇರುವ ಆ ವಿದ್ಯುತ್ ತಂತಿಗಳು ಬಾಯಿ ತೆರೆದು ಅಪಾಯಕ್ಕೆ ಆಹ್ವಾನ ಮಾಡುವಂತಿವೆ. ಆ ತಂತಿಗಳಲ್ಲಿ ವಿದ್ಯುತ್ ಸಂಪರ್ಕವಿರುವುದ–ರಿಂದ ರಸ್ತೆ ವಿಭಜಕದ ಹತ್ತಿರದಿಂದ ಚಲಿಸುವ ವಾಹನಗಳಿಗೆ, ಬೈಕ್ ಸವಾರರಿಗೆ, ಪಾದಚಾ–ರಿಗಳಿಗೆ ತಗುಲುವ ಅಪಾಯವಿದೆ. ಗಾಂಧೀ ಸರ್ಕಲ್‌ನಿಂದ ಚೆನ್ನಮ್ಮ ಸರ್ಕಲ್ ವರೆಗಿನ ಹೆದ್ದಾರಿಯ ಪಕ್ಕದಲ್ಲಿ ಮೂರ್ನಾಲ್ಕು ವೈನ್ ಸೆಂಟರ್ ಇದ್ದು, ಅದರ ಮುಂದೆ ಇರುವ ಪಾದಚಾರಿ ರಸ್ತೆ ಒತ್ತುವರಿಯಾಗಿದ್ದಲ್ಲದೇ ಸಾರಾಯಿ ಗ್ರಾಹಕರು ಹೆದ್ದಾರಿಯಲ್ಲೇ ವಾಹನ ನಿಲ್ಲಿಸುವುದರಿಂದ ವಾಹನಗಳಿಗೆ ರಸ್ತೆ ಇಕ್ಕಟ್ಟಾಗಿದೆ.

ಇಂಥದರಲ್ಲಿ ವಾಹನ ಸವಾರರು ಡಿವೈಡರ್ ಹತ್ತಿರದಿಂದಲೇ ಸಾಗುವುದು ಅನಿವಾರ್ಯವಾಗಿದೆ. ಪಾದಚಾರಿಗಳು ಕೂಡ ಡಿವೈಡರ್ ಮೇಲೆ ಹತ್ತಿಯೇ ರಸ್ತೆ ದಾಡುವುದು ಕಂಡು ಬರುತ್ತದೆ. ಆಗ ಅರ್ಧ ಕಟ್ ಆಗಿರುವ ವಿದ್ಯುತ್ ತಂತಿ ತಗಲುವ ಅಪಾಯವಿದೆ. ಪುರಸಭೆಯವರು ಈ ಬಗ್ಗೆ ಮುನ್ನೆಚ್ಚರಿಕೆಯ ಕ್ರಮವಾಗಿ ಅಲ್ಲಿ ವಿದ್ಯುತ್ ಕಂಬವನ್ನಾದರೂ ಅಳವಡಿಸಬೇಕು ಅಥವಾ ತೆರೆದ ವಿದ್ಯುತ್ ತಂತಿಗಳನ್ನು ಸಂಪೂರ್ಣ ಮೊಟಕುಗೊಳಿಸಬೇಕು ಎಂದು ಮಲ್ಲು ಕ್ಯಾನ್ಯಾಗೋಳ ಸೇರಿದಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

# ಮಠಗಳು ಸಂಸ್ಕಾರ ಸಂಸ್ಕೃತಿ ಕೇಂದ್ರ್ರಗಳಿದ್ದಂತೆ; ಚನ್ನಪ್ಪ



ರಬಕವಿ–ಬನಹಟ್ಟಿ,ಜೂ11: ಗ್ರಾಮೀಣ ಹಾಗೂ ಪಟ್ಟಣ ಪ್ರದೇಶದಲ್ಲಿ ಮಠಮಾನ್ಯಗಳಿರುವುದರಿಂದಲೇ ಭಾರತೀಯ ಪರಪಂಪರೆಯ ಸಂಸ್ಕಾರ ಮತ್ತು ಸಂಸ್ಕೃತಿ ಉಳಿದು ಬೆಳೆಯುತ್ತಿದೆ ಅವು ಸಂಸ್ಕಾರ ಸಂಸ್ಕೃತಿಯ ಕೇಂದ್ರ ಬಿಂದುಗಳಿದ್ದಂತೆ ಎಂದು ಕಾಶಿಯ ಡಿಐಜಿ ಚನ್ನಪ್ಪ ಶಿವಶಿಂಪಿ ಹೇಳಿದರು.

ಬುಧವಾರ ಸಂಜೆ ರಬಕವಿ ಗುರುದೇವ ಬ್ರಹ್ಮಾನಂದ ಆಶ್ರಮಕ್ಕೆ ಬೆಟ್ಟಿನೀಡಿ ಶ್ರೀ ಮಠದ ಶ್ರೀ ಗುರುಸಿದ್ಧೇಶ್ವರ ಸ್ವಾಮಿಗಳಿಂದ ಸನ್ಮಾನ ಸ್ವಿಕರಿಸಿ ಅವರು ಮಾತನಾಡಿದರು. ಹಿರಿಯರಿಲ್ಲ ಮನೆಯಲ್ಲ, ಸ್ವಾಮೀ–ಜಿಗಳಿಲ್ಲದ ಮಠವಲ್ಲ ಎಂಬ ಭಾರತಿಯ ನಾನ್ನುಡಿಯಂತೆ ಮಠದಲ್ಲಿ ಜ್ಞಾನ ತುಂಬಿದ ಗುರುಗಳಿರುವುದರಿಂದ ರಬಕವಿ ಬನಹಟ್ಟಿ ನಗರಗಳು ಆಧ್ಯಾತ್ಮದ ಅವರಿವು ಮುಡಿಸಿಕೊಂಡ ಶ್ರೀಮಂತಗೊಂಡಿವೆ. ಶ್ರೀ ಗುರುಸಿದ್ಧೇಶ್ವರ ಶ್ರೀಗಳು ಬ್ರಹ್ಮಾನಂದ ಮಠದ ಫೀಠಾಧಿಪತಿಗಳಾಗಿ ಬಂದಾಗಿನಿಂದ ತಾಲೂಕಿನಾಧ್ಯಂತ ಅಧ್ಯಾತ್ಮದ ತಂಗಾಳಿಯನ್ನು ಸುಸೂತ್ತಿದ್ದಾರೆ, ಅವರಿಂದ ಭಕ್ತ ಸಂಕುಲ ಉದ್ದಾರವಾಗಿದೆ ಎಂದರು.

ಸನ್ಮಾನಿಸಿ ಮಾತನಾಡಿದ ಶ್ರೀ ಮಠದ ಶ್ರೀ ಗುರುಸಿದ್ಧೇಶ್ವರ ಶ್ರೀಗಳು, ನನ್ನದೇನು ಇಲ್ಲ ಎಲ್ಲ ಬ್ರಹ್ಮಾನಂದ ಅಜ್ಜನವರ ಆಶೀರ್ವಾದದಿಂದ ಮತ್ತು ಅಪಾರ ಭಕ್ತ ಸಂಕುಲದವರಿಂದ ಮಠ ಅಭಿವೃದ್ಧಿ ಕಂಡಿದೆ ಎಂದರು.

ಈ ಸಂದರ್ಭದಲ್ಲಿ ಹಿರಿಯರಾದ ಬುದ್ದಪ್ಪ ಕುಂದಗೋಳ, ವಿಶ್ವನಾಥ ಮಿರ್ಜಿ, ಬಸಪ್ಪ ಗೋಪಾಳಿ, ಧರೆಪ್ಪ ಉಳ್ಳಾಗಡ್ಡಿ, ಚಂದು ಬುಯಾರ,ಮುರಗೆಪ್ಪ ಮಿರ್ಜಿ, ಸುರೇಶ ಪಟ್ಟಣಶೆಟ್ಟಿ, ಸಿದಪ್ಪ ಮೇಣಿ, ರಾಜು ಲೇಂಡಿ, ವಿರುಪಾಕ್ಷಯ್ಯ ಹಿರೇಮಠ ಸೇರಿದಂತೆ ಅನೇಕರಿದ್ದರು.

# ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

## ಬಾಲ ಕಾರ್ಮಿಕ ಪದ್ದತಿ ನಿರ್ಮೂಲನೆಗಾಗಿ ಜನ ಜಾಗೃತಿ ಮೂಡಿಸಬೇಕಿದೆ– ಜಿಲ್ಲಾಧಿಕಾರಿ ನಲಿನ್ ಅತುಲ್



ಕೊಪ್ಪಳ : ಮಕ್ಕಳೇ ದೇಶದ ಭವಿಷ್ಯದ ಪ್ರಜೆಗಳಾಗಿರುವುದ–ರಿಂದ ಅವರ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿ ನಮ್ಮ ಸಮಾಜವನ್ನು ರೂಪಿಸಬೇಕು. ಸಮಾಜದ ಅನಿಷ್ಟ ಪದ್ದತಿಯಾದ ಬಾಲ ಕಾರ್ಮಿಕ ಪದ್ದತಿ ನಿರ್ಮೂಲನೆಗಾಗಿ ಜನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಈ ಕುರಿತು ಜನರಿಗೆ ತಿಳಿ ಹೇಳಬೇಕಿದೆ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಹೇಳಿದರು.

ಗುರುವಾರದಂದು ಜಿಲ್ಲಾ ಪಂಚಾಯತ್‌ನ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಯುನಿಸೆಫ್ ಮಕ್ಕಳ ರಕ್ಷಣಾ ಯೋಜನೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನ ಹಾಗೂ ಕಾನೂನು ಅರಿವು– ನೆರವು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಹೊಸದಾಗಿ ಶಿಕ್ಷಣ ಹಕ್ಕು ಕಾಯ್ದೆ ಪ್ರಕಾರ ಮಕ್ಕಳಿಗೆ ಉಚಿತ ಶಿಕ್ಷಣ ನೀಡಬೇಕು. ನಮ್ಮ ಭಾಗದಲ್ಲಿ ಕೃಷಿ, ಹೋಟೆಲ್, ಗ್ಯಾರೇಜ್, ಆರೋಗ್ಯ ಕ್ಷೇತ್ರ ಸೇ–ರಿದಂತೆ ಹಲವಾರು ಕಡೆಗಳಲ್ಲಿ ಬಾಲಕಾರ್ಮಿಕ ಮಕ್ಕಳು ಕಂಡುಬರುತ್ತಾರೆ. ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಪಾಲಕರು ತಮ್ಮ ಮಕ್ಕಳನ್ನು ಬಾಲಕಾರ್ಮಿಕರನ್ನಾಗಿ ಮಾಡಬಾರದು. ಇದರಿಂದ ಅವರ ಬಾಲ್ಯವನ್ನು ಕಸಿದುಕೊಂಡಂತಾಗುತ್ತದೆ. ದೇಶದ ಭವಿಷ್ಯವಾದ ಮಕ್ಕಳ ವ್ಯಕ್ತಿತ್ವ ಅಭಿವೃದ್ಧಿಗೆ ಪೂರಕವಾಗುವಂತೆ ನಮ್ಮ ಸಮಾಜವನ್ನು ರೂಪಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪತ್ತೆಯಾದ 62 ಬಾಲಕಾರ್ಮಿಕ ಪ್ರಕರಣಗಳಲ್ಲಿ 13 ಬಾಲಕಾರ್ಮಿಕರ ಪ್ರಕರಣಗಳಿಗೆ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಇಂತಹ ಘಟನೆಗಳು ನಡೆಯದಂತೆ ಕಾರ್ಮಿಕ ಇಲಾಖೆ ಸೇ–ರಿದಂತೆ ಇತರೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕೆಂದು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ. ರಾಮತ್ನಾಳ ಮಾತನಾಡಿ, ಉಚಿತ ಕಡ್ಡಾಯ ಶಿಕ್ಷಣ ಸೌಲಭ್ಯಗಳಿದ್ದರೂ ಜಿಲ್ಲೆಯಲ್ಲಿ ಬಾಲಕಾರ್ಮಿಕರು ಮತ್ತು ಬಾಲ್ಯ ವಿವಾಹದಂತಹ ಪ್ರಕರಣಗಳು ಕಂಡು ಬರುತ್ತಿರುವುದು ವಿಷಾದನೀಯ ಸಂಗತಿಯಾಗಿದೆ. ಬಾಲ ಕಾರ್ಮಿಕರ ನಿರ್ಮೂಲನೆ ಕೇವಲ ಒಂದು ಇಲಾಖೆ ಕೆಲಸ ಮಾಡಿದರೆ ಸಾಲದು, ಇತರೆ ವಿವಿಧ ಇಲಾಖೆಗಳು, ಗ್ರಾಮ ಪಂಚಾಯತಿ ಪಿಡಿಓ ರಿಂದ ಹಿಡಿದು ಆಯಾ ಶಾಲೆಗಳ ಮುಖ್ಯೋಪಾಧ್ಯಾಯರ ಮೇಲೆಯೂ ಜವಾಬ್ದಾರಿ ಇದೆ. ಮಕ್ಕಳು ಒಂದು ವಾರ ಶಾಲೆಗೆ ಬರದಿದ್ದರೆ ಯಾಕೆ ಬರಲಿಲ್ಲ. ಅವರಿಗೆ ಮದುವೆ ಮಾಡಲಾಗಿದೆಯೇ, ಕೆಲಸಕ್ಕೆ ಕಳಿಸಲಾಗಿದೆಯೆ ಅಥವಾ ಅವರ ಆರೋಗ್ಯ ಸರಿಯಾಗಿಲ್ಲವೆ ಎಂಬ ಮಾಹಿತಿಯನ್ನು ಶಿಕ್ಷಕರು ಸಂಗ್ರಹಿಸಬೇಕು. ಈ ಕುರಿತು ಪಾಲಕರಿಗೆ ಒಂದು ನೋಟಿಸ್ ನೀಡುವ ಕೆಲಸವನ್ನು ಶಿಕ್ಷಕರು ಮಾಡಬೇಕು. ಬಾಲಕಾರ್ಮಿಕ ಮಕ್ಕಳನ್ನು ರಕ್ಷಣೆ ಮಾಡಿದಾಗ ಈ ಕು–ರಿತು ಪತ್ರಿಕಾ ಪ್ರಕಟಣೆ ನೀಡಬೇಕು ಎಷ್ಟು ಮಕ್ಕಳನ್ನು ರಕ್ಷಣೆ ಮಾಡಲಾಗಿದೆ, ಯಾರ ಮೇಲೆ ಪ್ರಕರಣ ದಾಖಲಿಸಲಾಗಿದೆ ಎಂಬ ಮಾಹಿತಿಯನ್ನು ಜನರಿಗೆ ತಿಳಿಸಬೇಕೆಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್ ಎಸ್. ದರಗದ ಅವರು ವಿಶ್ವ ಬಾಲಕಾರ್ಮಿಕ ವಿರೋಧಿ ದಿನ– 2025 ರ ಪ್ರಮಾಣ ವಚನ ಬೋಧಿಸಿ ಮಾತನಾಡಿ, ಈ ದಿನಾಚರಣೆ ಉದ್ದೇಶ ಮಕ್ಕಳು ಯಾರೂ ಬಾಲಕಾರ್ಮಿಕರಾಗಿ ಉಳಿಯಬಾರದು ಎಂಬುದಾಗಿದೆ. ಮಕ್ಕಳು ತಮ್ಮ ಬಾಲ್ಯದ ವಯಸ್ಸಿನಲ್ಲಿ ಹೇಗಿರಬೇಕೋ ಹಾಗೆಯೇ ಇರಬೇಕು. ದುಡಿಯುವುದಕ್ಕೆ ಕಳಿಸುವುದರಿಂದ ಅವರ ಬಾಲ್ಯವನ್ನು ಕಸಿದುಕೊಂಡಂತೆ ಆಗುತ್ತದೆ. ಇದು ಯಾಕೆ ಆಗುತ್ತದೆ ಎಂದರೆ ನಮ್ಮಲ್ಲಿ ಇನ್ನೂ ಎಷ್ಟೋ ಕಡೆಗೆ ಜನರಿಗೆ ಸರಿಯಾದ ಸೂರಿಲ್ಲ. ಅವರು ತಮ್ಮ ಹೊಟ್ಟೆ ತುಂಬಿಸಲಾಗದೆ ಅವರ ಮಕ್ಕಳು ದುಡಿಮೆಗೆ ಕೈಜೋಡಿಸುತ್ತಿದ್ದಾರೆ. ಕೆಳವರ್ಗದ ಜನ–ರಿಗೆ ಇನ್ನೂ ಬಹಳಷ್ಟು ಮೂಲಭೂತ ಸೌಲಭ್ಯಗಳನ್ನು ಕೊಡಬೇಕಿದೆ. ಎಷ್ಟೋ ಮಕ್ಕಳಿಗೆ ಇನ್ನೂ ಅವರ ಆಧಾರ್ ಕಾರ್ಡ್‌ಗಳೇ ಇಲ್ಲ ಎಂದು ಹೇಳಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಸುಧಾ ಗರಗ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಾಲ ಕಾರ್ಮಿಕ ಮಕ್ಕಳಿಗೆ ಬಾಂಡ್‌ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಶ್ರೀಶೈಲ್ ಬಿರಾದಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪರಶುರಾಮ್ ವೈ. ಶೆಟ್ಟೆಪ್ಪನವರ್, ಮಕ್ಕಳ ರಕ್ಷಣಾ ಯೋಜನೆ– ಯುನಿಸೆಫ್ ಕೊಪ್ಪಳದ ಸಂಯೋಜ–ಕರಾದ ಹರೀಶ್ ಜೋಗಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ್ ಜಿ., ಕೊಪ್ಪಳ ವೃತ್ತದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರ, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಶಾಲಾ ಶಿಕ್ಷಕರು, ಮಕ್ಕಳು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

# ನಾವು ಯಾವ ಸಂದರ್ಭದಲ್ಲಿ ಎಲ್ಲಿ ಮತ್ತು ಏಕೆ ಮೌನವಾಗಿರಬೇಕು?

ನಾವು ಮಾತನಾಡುವ ರೀತಿಗೆ ಸಂಬಂಧವನ್ನು ಉಳಿಸುವ ಅಥವಾ ಅಳಿಸುವ ಶಕ್ತಿ ಇರುತ್ತದೆ. 'ಮಾತು ಬೆಳ್ಳಿ, ಮೌನ ಬಂಗಾರ' ಈ ಮಾತು ಅಕ್ಷರಶಃ ಸತ್ಯ. ಯಾವಾಗ ಮಾತನಾಡಬೇಕು, ಯಾವಾಗ ಮೌನವಾಗಿರಬೇಕು ಎಂಬ ಪ್ರಜ್ಞೆಯನ್ನು ಬೆಳೆಸಿಕೊಂಡಿರುವುದೇ ಬುದ್ಧಿವಂತಿಕೆ. ಯಾಕೆಂದರೆ ಕೇವಲ ಮಾತಿನಿಂದಲೇ ಎಷ್ಟೋ ಸಂಬಂಧಗಳು ಕಡಿದುಕೊಳ್ಳುತ್ತವೆ. ಅದರಿಂದಲೇ ಹೇಳುವುದು 'ಮೌನಂ ಕಲಹ ನಾಸ್ತಿ'.

ಯಾವಾಗ ಮಾತನಾಡಬೇಕು, ಯಾವಾಗ ಮೌನವಾಗಿರಬೇಕು ಎಂಬುದರ ಅರಿವಿರಬೇಕು ನಮಗೆ. ಅದು ಅನುಭವದಿಂದ ಬರುವಂತದ್ದು, ಪಕ್ವತೆಯಿಂದ ಬರುವಂತದ್ದು.

ಪ್ರಶ್ನೆಗೆ ಉತ್ತರಿಸಿದ ಎಲ್ಲ ಸನ್ಮಿತ್ರ ಸದಸ್ಯರ ಅಭಿಪ್ರಾಯಗಳನ್ನು ಕ್ರೋಢೀಕರಿಸಿ ಯಾವ ಯಾವ ಸಂದರ್ಭಗಳಲ್ಲಿ ಮೌನವಾಗಿರಬೇಕು ಎಂಬುದನ್ನು ಹೇಳುವುದಾದರೆ.

ಜ್ಞಾನಿಗಳ ಮುಂದೆ, ಗುರು–ಹಿರಿಯರ ಮುಂದೆ ನಮ್ಮ ಅಲ್ಪವಿದ್ಯೆ, ಅರ್ಥಂಬರ್ಥ ತಿಳುವಳಿಕೆಯ ಪಾಂಡಿತ್ಯ ಪ್ರದರ್ಶನ ಮಾಡದೇ ಮೌನವಾಗಿರುವುದು ಲೇಸು.

ಪೂಜೆಯ ಸಮಯದಲ್ಲಿ, ಪ್ರಾರ್ಥನೆ ಸಲ್ಲಿಸುವಾಗ, ಧ್ಯಾನ ಮಾಡುವಾಗ ಮೌನವಾಗಿರಬೇಕು.

ದೇವಸ್ಥಾನಗಳಲ್ಲಿ, ದೇವರ ಸನ್ನಿಧಿಯಲ್ಲಿ ಮೌನವಾಗಿರಬೇಕು. ಆಶ್ರಮಗಳಲ್ಲಿ ಆದಷ್ಟೂ ಮೌನವಾಗಿರಬೇಕು.

ಮತ್ತೊಬ್ಬರ ಮನೆಯಲ್ಲಿ ನಡೆಯುವ ಪೂಜೆ, ದೈವಾರಾಧನೆ.. ಮುಂತಾದ ಶುಭಕಾರ್ಯಗಳಿಗೆ ಆಹ್ವಾನಿತರಾಗಿ ಹೋದಾಗ ಮೌನವಾಗಿರಬೇಕು.

ಆಧ್ಯಾತ್ಮಿಕ ಪ್ರವಚನ ನಡೆಯುವಲ್ಲಿ, ಪುರಾಣ, ಹರಿಕಥೆ ನಡೆಯುವಲ್ಲಿ ಮನಸ್ಸು ಕೊಟ್ಟು ಆಲಿಸಬೇಕು. ಅಲ್ಲಿ ಕಿವಿಗಳಿಗೆ ಮಾತ್ರ ಕೆಲಸ. ಹರಟೆಗೆ ಆಸ್ಪದ ಕೊಡದೇ ಮೌನವಾಗಿರಬೇಕು.

ನಮ್ಮ ಮಾತಿಗೆ ಬೆಲೆ, ಗೌರವ ಸಿಗದ ಕಡೆ ಮೌನವಾಗಿರಬೇಕು. ಎದುರಿಗಿರುವ ವ್ಯಕ್ತಿಯಿಂದ ನಮ್ಮ ಮಾತಿಗೆ ಸ್ಪಂದನೆ ಸಿಗದೇ ಇದ್ದಾಗ ಮೌನದಿಂದಿರಬೇಕು.

ಅಜ್ಞಾನಿಗಳ ಜೊತೆಯಲ್ಲಿ, ಮೂರ್ಖರ ಜೊತೆಯಲ್ಲಿ, ವಿತಂಡವಾದಿಗಳ ಜೊತೆಯಲ್ಲಿ ವಾದ ಮಾಡದೇ ಮೌನವಾಗಿರುವುದೇ ಲೇಸು.

ಎಲ್ಲಿ ಮಾತಿನಿಂದ ಕಲಹ ಉಂಟಾಗುವ ಸಂಭವವಿರುತ್ತದೆಯೋ ಅಲ್ಲಿ ಮೌನವಹಿಸಬೇಕು.

ಮನೆಯಲ್ಲಿ ಇಬ್ಬರು ಸ್ತ್ರೀಯರ ಮಧ್ಯೆ (ಅತ್ತೆ–ಸೊಸೆ) ಮಾತಿನ ವಾಗ್ವಾದ ನಡೆವಾಗ ಯಾರ ಪರ ವಹಿಸದೇ ಸುಮ್ಮನಿರುವುದು ಒಳ್ಳೆಯದು.

ನಮ್ಮನ್ನು ಕೆಣಕುವ ಉದ್ದೇಶದಿಂದಲೇ ಕಾಲುಕೆರೆದು ಜಗಳಕ್ಕೆ ಬರುವವರಿಗೆ ಮೌನವೇ ನಮ್ಮ ಉತ್ತರವಾಗಬೇಕು. ಅವರಿಗೆ ಅಸ್ತ್ರ ಸಿಗುವಂತಾಗಬಾರದು.

ಸಾವಿನ ಮನೆಯಲ್ಲಿ, ಸೂತಕದ ಛಾಯೆ ಆವರಿಸಿರುವ ವಾತಾವರಣದಲ್ಲಿ ಮೌನವಹಿಸಬೇಕು.

ಕೇಳದೆಯೇ ಯಾರಿಗೂ ಸಲಹೆ ಕೊಡುವ, ಉಪದೇಶ ಮಾಡುವ ಕೆಲಸವನ್ನು ಮಾಡಬಾರದು.

ಸಿಟ್ಟು ಬಂದಾಗ ಮಾತನಾಡದೇ ಮೌನವಾಗಿರಬೇಕು.. ಯಾವುದೇ ವಿಷಯಕ್ಕೂ ಕೋಪದಿಂದ ಪ್ರತಿಕ್ರಿಯೆ ನೀಡಲೇಬಾರದು. ಅಂತಹ ಸಂದರ್ಭಗಳಲ್ಲಿ ಮಾತನಾಡುವಾಗ ನಾವು ನಮ್ಮ ವಿವೇಚನೆ ಕಳೆದುಕೊಂಡಿರುತ್ತೇವೆ. ಕ್ರೋಧದಿಂದ ಗಟ್ಟಿಧ್ವನಿಯಲ್ಲಿಮತ್ತೊಬ್ಬರ ಮೇಲೆ ರೇಗಾಡಿಬಿಡುತ್ತೇವೆ. ಇದು ಕೇವಲ ಇಬ್ಬರ ನಡುವಿನ ಸಂವಹನವನ್ನು ಮಾತ್ರವಲ್ಲ, ಸಂಬಂಧವನ್ನೇ ಹಾಳು ಮಾಡಿಬಿಡುತ್ತದೆ.

ಸತ್ಯ ಏನು ಎಂಬುದು ಗೊತ್ತಿಲ್ಲದೇ ಇದ್ದಾಗ ಮಾತನಾಡದೇ ಮೌನದಿಂದಿರುವುದು ಇರುವುದು ಒಳ್ಳೆಯದು. ಕೆಲವೊಂದು ಸಂದರ್ಭಗಳಲ್ಲಿ ಘಟನೆ ಏನು, ನಿಜವಾಗಿಯೂ ಏನಾಗಿದೆ ಎಂಬುದು ತಿಳಿಯದೆಯೂ ಕೆಲವರು ಮಾತನಾಡುವುದಿದೆ. ವಿನಾಃ ಕಾರಣ ಹಬ್ಬಿದ ವದಂತಿಗಳೂ ಅದಾಗಿರಬಹುದು. ಹೀಗೆ ಗೊತ್ತಿಲ್ಲದ ವಿಚಾರಗಳಿಗೆ ಪ್ರತಿಕ್ರಿಯೆ ನೀಡುವುದರಿಂದ ಅನಗತ್ಯ ಮನಸ್ತಾಪಗಳಿಗೆ ಕಾರಣವಾಗುವುದರಿಂದ ಮೌನವಾಗಿರುವುದೇ ಲೇಸು.

ಎದುರಿಗಿದ್ದವರಿಗೆ ನಮ್ಮ ಮಾತಿನಿಂದ ನೋವುಂಟಾಗುತ್ತದೆ ಅಂತಾದರೆ ಮೌನವಾಗಿರುವುದೇ ಒಳ್ಳೆಯದು. ನಮ್ಮ ಮಾತಿನಿಂದ ಆ ವ್ಯಕ್ತಿಯ ಮನಸ್ಥಿತಿ ಕುಗ್ಗಿ ಹೋಗಬಹುದು. ಅಂತಹ ಸಂದರ್ಭದಲ್ಲಿ ಮೌನವಾಗಿರುವುದೇ ಲೇಸು.

ಇತರರು ಮಾತನಾಡುವಾಗ ಮೌನವಾಗಿದ್ದುಕೊಂಡು ಅವರ ಮಾತು ಮುಗಿಯುವವರೆಗೂ ಕೇಳಿಸಿಕೊಳ್ಳಬೇಕು. ಒಳ್ಳೆಯ ಕೇಳುಗ ಒಳ್ಳೆಯ ಮಾತುಗಾರನೂ ಆಗಬಲ್ಲ.

ನಿರಂತರವಾಗಿ ಮಾತನಾಡುತ್ತಿದ್ದರೆ ಎದುರಿಗಿದ್ದವರಿಗೆ ಸಹಿಸಿಕೊಳ್ಳಲೂ ಅಸಾಧ್ಯವಾಗಬಹುದು. ಎಷ್ಟು ಬೇಕೋ ಅಷ್ಟು ಮಾತನಾಡಿ ಮೌನವಾಗಿರುವುದು ಒಳ್ಳೆಯದು.

ಇನ್ನೊಬ್ಬರ ನಡವಳಿಕೆಯ ಬಗ್ಗೆ ತೀರ್ಪು ನೀಡಲು ಹೋಗದೇ ಮೌನವಾಗಿರುವುದು ಒಳ್ಳೆಯದು.

ಗುಂಪಿನಲ್ಲಿ ಒಂದಷ್ಟು ಜನ ಯಾವುದೋ ವಿಚಾರಕ್ಕೆ ಮಾತನಾಡುತ್ತಿರುತ್ತಾರೆ, ಏನು ಎಂಬುದು ತಿಳಿದಿರುವುದಿಲ್ಲ. ಆದರೂ ಅವರ ಮಧ್ಯೆ ಹೋಗಿ ಸೇ–ರಿಕೊಂಡಾಗ ಎಲ್ಲವೂ ಗೊತ್ತಿದ್ದವರಂತೆ ವರ್ತಿಸಬಾರದು. ಯಾವ ರೀತಿ ಮಾತನಾಡಬೇಕು, ಯಾವ ಸಂದರ್ಭದಲ್ಲಿ ಹೇಗೆ ಮಾತನಾಡಬೇಕು ಎಂಬುದರ ಅರಿವು ಇರಬೇಕು. ನಮ್ಮ ಮಾತಿನ ಅಗತ್ಯ ಇಲ್ಲದಿದ್ದರೂ ಅನಗತ್ಯವಾಗಿ ಮಾತನಾಡಿ ಮುಜುಗರಕ್ಕೀಡಾಗಬಾರದು.

ಹೇಳಿದ್ದನ್ನೇ ಮತ್ತೆ ಮತ್ತೆ ಹೇಳುವುದು. ಹೀಗೆ ಮಾಡುವುದರಿಂದ ಕೇಳಿಸಿಕೊಳ್ಳುವವರಿಗೂ ಬೇಸರವಾಗುತ್ತದೆ. ಹೇಳಿದ್ದನ್ನೇ ಹೇಳಿದರೆ ಸುಳ್ಳು ಹೇಳುತ್ತಿದ್ದಾರೋ ಏನೋ ಎಂದೆನಿಸಬಹುದು. ಮಾತಾನಾಡುವಾಗ ಇತರರು ನಮ್ಮ ಮಾತನ್ನು ತುಂಡ–ರಿಸುವ ಮೊದಲು ನಾವೇ ಮಾತಿಗೆ ಪೂರ್ಣ ವಿರಾಮ ಹಾಕಿ ಮೌನವಹಿಸುವುದು ಒಳ್ಳೆಯದು.

ನಾವು ಮಾತನಾಡುವ ರೀತಿಗೆ ಸಂಬಂಧವನ್ನು ಉಳಿಸುವ ಅಥವಾ ಅಳಿಸುವ ಶಕ್ತಿ ಇರುತ್ತದೆ. ಹಾಗಾಗಿ ಅನುಕಂಪ, ಪ್ರೀತಿ, ಸಕಾರಾತ್ಮಕತೆ, ಇತರರನ್ನು ಪ್ರೇರೇಪಿಸುವ, ಪ್ರೋತ್ಸಾಹಿಸುವ ಮಾತುಗಳನ್ನೇ ಆಡಬೇಕು. ಇಲ್ಲವಾದರೆ ಮೌನವಾಗಿರುವುದೇ ಲೇಸು.



**ಸಪ್ತಋಷಿ ಧಾರ್ಮಿಕ ಸಂಗ್ರಹ**

**ಧಾರ್ಮಿಕ ಮಾರ್ಗದರ್ಶಕ**
**ಸಂತೋಷ ಆಚಾರ್ಯ**
**ಉಡುಪಿ.**

# ಉತಾರೆ-ಹಕ್ಕುಪತ್ರ ವಿತರಣೆಗೆ ಆಗ್ರಹ



**ಮುದ್ದೇಬಿಹಾಳ:** ಪಟ್ಟಣದ ತಂಗಡಗಿ ರಸ್ತೆಪಕ್ಕದಲ್ಲಿರುವ ಕೊಳಚೆ ಪ್ರದೇಶದ ಅಡಿಯಲ್ಲಿ ಬರುವ ಪಿಲೇಕೆಮ್ಮನಗರ ಬಡಾವಣೆಯ ನಿವಾಸಿಗಳಿಗೆ ಉತಾರೆ ಮತ್ತು ಇನ್ನುಳಿದ ಹಕ್ಕುಪತ್ರ ವಿತರಿಸಬೇಕು ಎಂದು ಆಗ್ರಹಿಸಿ ಅಲ್ಲಿನ ನಿವಾಸಿಗಳು ತಮ್ಮ ವಾರ್ಡ ಪ್ರತಿನಿಧಿಸುವ ಪುರಸಭೆ ಸದಸ್ಯೆ ಶರೀಫಾ ಮೂಲಿಮನಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗೆ ಬರೆದ ಮನವಿ ಪತ್ರವನ್ನು ಗುರುವಾರ ಪುರಸಭೆ ಮುಖ್ಯಾಧಿಕಾರಿ, ಕಂದಾಯ ಅಧಿಕಾರಿಗೆ ಸಲ್ಲಿಸಿ ಬೇಡಿಕೆ ಈಡೇರಿಕೆಗೆ ಆಗ್ರಹಿಸಿದರು.

ಈ ಬಡಾವಣೆಯು ಕೊಳಚೆ ಪ್ರದೇಶ ಅಭಿವೃದ್ದಿ ಮಂಡಳಿ ವ್ಯಾಪ್ತಿಗೆ ಬರುತ್ತದೆ. 30-40 ವರ್ಷದಿಂದ ಇಲ್ಲಿ ವಾಸವಾಗಿದ್ದ ಜನರಿಗೆ 2020ರ ಮಾರ್ಚನಲ್ಲಿ ಸರ್ಕಾರ ಹೊರಡಿಸಿದ ಆದೇಶದಂತೆ ನಿಗದಿತ ಅವಧಿಯೊಳಗೆ ಹಕ್ಕುಪತ್ರ, ಉತಾರೆ, ಇನ್ನಿತರ ಮೂಲಸೌಕರ್ಯ ಒದಗಿಸಬೇಕಾಗಿತ್ತು. ಆದರೆ ಸರ್ವೆ ಕಾರ್ಯ ನಡೆದು 3-4 ವರ್ಷ ಕಳೆದೂ ಆದೇಶ ಪಾಲನೆ ಆಗಿಲ್ಲ. ಇನ್ನೂ ಅನೇಕರಿಗೆ ಹಕ್ಕುಪತ್ರ, ಉತಾರೆ ನೀಡಿಲ್ಲ. ಈ ಬಗ್ಗೆ ಕೊಳಚೆ ಪ್ರದೇಶ ಅಭಿವೃದ್ದಿ ಮಂಡಳಿ ಅಧಿಕಾರಿಗಳಿಗೆ ಪತ್ರ ಬರೆದರೂ, ಭೇಟಿ ಮಾಡಿ ಮನವಿ ಮಾಡಿದರೂ ಸರ್ಕಾರದ ಆದೇಶ ಪಾಲಿಸುತ್ತಿಲ್ಲ ಎಂದು ಮನವಿಯಲ್ಲಿ ದೂರಲಾಗಿದೆ.


ಪುರಸಭೆಯ ಸಾಮಾನ್ಯ ಸಭೆಯಲ್ಲಿ ಈ ವಿಷಯದ ಮೇಲೆ ಗಂಭೀರ ಚರ್ಚೆ ನಡೆದ ನಂತರ ಮಂಡಳಿಯ ಕೆಲವು ಅಧಿಕಾರಿಗಳು ಒಬ್ಬ ಏಜಂಟನೊಂದಿಗೆ ಶಾಮೀಲಾಗಿ ಮೂಲ ಸ್ಲಂ ನಿವಾಸಿಗಳ ಬದಲಾಗಿ ಬೇರೆಡೆಯಿಂದ ವಲಸೆ ಬಂದವರಿಂದ ಲಕ್ಷಗಟ್ಟಲೆ ಹಣ ಪಡೆದು ಅವರು ಹೆಸರನ್ನು ಸೇರ್ಪಡೆ ಮಾಡಿ ಅಂಥವರಿಗೆ ಹಕ್ಕುಪತ್ರ ಕೊಡಿಸಿದ್ದಾನೆ. ಒಂದೇ ಮನೆಯನ್ನು ನಕಲಿ ದಾಖಲೆ ಸೃಷ್ಟಿಸಿ 4-5 ಜನರಿಗೆ ಹಂಚಿಕೆ ಮಾಡಿ ಅಕ್ರಮ ನಡೆಸಿದ್ದಾನೆ. ಇದಲ್ಲದೆ ಪುರಸಭೆಗೆ ಸಂಬಂಧಿಸಿದ ಆಸ್ತಿಯಲ್ಲಿ ತಗಡಿನ ಸೆಡ್‌ಗಳನ್ನು ಹಾಕಿಸಲಾಗಿತ್ತು. ಇದನ್ನು ಪುರಸಭೆಯ ಅಧ್ಯಕ್ಷರ ನೇತೃತ್ವದ ಆರು ಜನರ ಸಮಿತಿ ಪರಿಶೀಲನೆ ನಡೆಸಿ ಮಂಡಳಿಯ ಅಧಿಕಾರಿಗಳ ಎದುರಲ್ಲೇ ಅವೆಲ್ಲವನ್ನೂ ನೆಲಸಮಗೊಳಿಸಿ ಪುರಸಭೆಯ ಜಾಗ ಉಳಿಸಿಕೊಳ್ಳಲಾಗಿತ್ತು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಇದೇ ವಿಷಯವಾಗಿ ಅರ್ಹತೆಯುಳ್ಳ ಹಲವರು ಸೌಲಭ್ಯದಿಂದ ವಂಚಿತರಾಗಬೇಕಾಗಿದ್ದು ಯಾರೋ ಮಾಡಿದ ತಪ್ಪಿಗೆ ಹಲವು ಅರ್ಹರು ಬಲಿಯಾಗಬೇಕಾಗಿದೆ. ಇದನ್ನು ಶಾಸಕರ ಗಮನಕ್ಕೆ ತಂದು ತಪ್ಪಿತಸ್ತರ ವಿರುದ್ಧ ಕ್ರಮಕ್ಕೆ ಕೋರುತ್ತೇವೆ. ಈ ವಾರ್ಡಿನ ಸಮಸ್ಯೆಯನ್ನು ಆದಷ್ಟು ಬೇಗನೆ ಸರಿಪಡಿಸಬೇಕು. ತಪ್ಪಿಸ್ಥರ ವಿರುದ್ದ ಕಾನೂನು ಕ್ರಮ ಜರುಗಿಸಬೇಕು. ಇಲ್ಲವಾದಲ್ಲಿ ವಾರ್ಡಿನ ಎಲ್ಲ ನಿವಾಸಿಗಳ ಸಮೇತ ಜಿಲ್ಲಾಧಿಕಾರಿ ಮತ್ತು ಪುರಸಭೆ ಕಚೇರಿ ಎದುರು ಆ ವಾರ್ಡ ಪ್ರತಿನಿಧಿಸುವ ಪುರಸಭೆ ಸದಸ್ಯರ ನೇತೃತ್ವದಲ್ಲಿ ಧರಣಿ, ಸತ್ಯಾಗ್ರಹ ನಡೆಸಬೇಕಾಗುತ್ತದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಮನವಿಯ ಪ್ರತಿಗಳನ್ನು ಕರ್ನಾಟಕ ಕೊಳಗೇರಿ ಅಭಿವೃದ್ದಿ ಮಂಡಳಿಯ ಅಧ್ಯಕ್ಷ ಅಭಯಪ್ರಸಾದ, ಆಯುಕ್ತರು, ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ತಹಶೀಲ್ದಾರರು ಸೇರಿ ಹಲವರಿಗೆ ಸಲ್ಲಿಸಲಾಗಿದೆ. ಪುರಸಭೆ ಸದಸ್ಯೆ ಶರೀಫಾ ಮೂಲಿಮನಿ, ಮುಖಂಡ ಅಜರುದ್ದೀನ್ ಮೂಲಿಮನಿ, ನಿವಾಸಿಗಳಾದ ದಾವಲಸಾಬ ಶೇಖ, ಹಾಜಿಸಾಬ ಜಾತಗಾರ, ಮಮತಾಜ ಕಲೇಗಾರ, ತಾರಾಬಿ ಹಡಗಲಿ, ಮಹ್ಮದರಫೀಕ ಅತ್ತಾರ, ಮಹಾಂತೇಶ, ಕಾಶೀನಾಥ, ಪ್ರವೀಣ, ಜಿಲಾನಿ, ಶಾಬುದ್ದಿನ ನದಾಫ, ಲಕ್ಮೀಬಾಯಿ ಝಿಂಗಾಡೆ, ಅಂಜುಮ ತಂಬಗಿ, ಫತ್ರುಬಿ ಜಾತಗಾರ, ಮಕ್ತುಂಬಿ ಜಾತಗಾರ, ಮಲಿಕಬಿ, ಭಿಯಾಮಾ, ಮಕ್ತುಮಸಾಬ ಬೇಪಾರಿ, ಹುಸೇನಸಾಬ ಶೇಖ, ರಫಿಕ ಶೇಖ, ರಾಜೇಭಕ್ಷ, ಆಯಿಶಾ, ಸಕೀನಾ ವಾಲಿಕಾರ, ಚಂದ್ರಶೇಖರ, ಈರಣ್ಣ ಸೇರಿದಂತೆ ಉಪಸ್ಥಿತರಿದ್ದರು.

### ಹೊಸ ತಾಲೂಕಿನ ಮೊದಲ ಪ್ರಕ್ರಿಯೆ ಪ್ರಾರಂಭ

## ತೇರದಾಳ ತಹಸೀಲ್ದಾರ್ ಕಚೇರಿಯಲ್ಲಿಯೇ ಅರ್ಜಿ ನೀಡಿ



**ತೇರದಾಳ**-ತೇರದಾಳ ತಾಲೂಕಿನ ಸಸಾಲಟ್ಟಿ, ಗೋಲಭಾವಿ, ಕಾಲತಿಪ್ಪಿ, ಹಳಿಂಗಳಿ, ತಮದಡ್ಡಿ, ಹನಗಂಡಿ, ಯರಗಟ್ಟಿ ಸೇರಿದಂತೆ ತೇರದಾಳ ಪಟ್ಟಣದ ರೈತರು ಸೇರಿದಂತೆ ಸಾರ್ವಜನಿಕರು ತಹಸೀಲ್ದಾರ್ ಕಚೇರಿಗೆ ಸಂಬಂಧಿಸಿದ ಅರ್ಜಿಗಳನ್ನು ಇನ್ನು ಮುಂದೆ ತೇರದಾಳ ತಹಸೀಲ್ದಾರ್ ಕಚೇರಿಯಲ್ಲಿಯೇ ನೀಡಬೇಕೆಂದು ತೇರದಾಳ ತಹಸೀಲ್ದಾರ್ ವಿಜಯಕುಮಾರ ಕಡಕೋಳ ತಿಳಿಸಿದ್ದಾರೆ.

ಈಗಾಗಲೇ ತೇರದಾಳ ಹೊಸ ತಾಲೂಕು ಎಂದು ಘೋಷನೆಗೊಂಡ ಬಳಿಕ ತಾಲೂಕಿಗೆ ಪ್ರತ್ಯೇಕವಾದ ಕೋಡ್ ಕೂಡ ಸರಕಾರ ನೀಡಿದೆ. ಇಷ್ಟು ದಿನ ನೆರೆಯ ತಾಲೂಕಿಗೆ ಅರ್ಜಿ ನೀಡಲು ಸಾರ್ವಜನಿಕರು ರೈತರು ಹೋಗಬೇಕಾಗಿತ್ತು. ಈಗ ಇಲ್ಲಿಯೇ ನೀಡಲು ಸೂಚಿಸಲಾಗಿದೆ. ಈ ಕುರಿತು ಜೂ. 6ರಂದು ರಬಕವಿ-ಬನಹಟ್ಟಿ ತಹಸೀಲ್ದಾರ್ ತೇರದಾಳ ತಾಲೂಕಿನ ವ್ಯಾಪ್ತಿಯವರು ತೇರದಾಳದಲ್ಲಿಯೇ ಅರ್ಜಿ ನೀಡಬೇಕೆಂದು ಆದೇಶ ಹೊರಡಿಸಿದ್ದಾರೆ. ಮತ್ತು ಕಚೇರಿ ಮುಂದೆ ಸಾರ್ವಜನಿಕ ತಿಳುವಳಿಕೆಗಾಗಿ ಬ್ಯಾನರ್ ಕೂಡ ಅಳವಡಿಸಿದ್ದಾರೆ ಎಂದು ತಹಸೀಲ್ದಾರ್ ವಿಜಯಕುಮಾರ ಕಡಕೋಳ ತಿಳಿಸಿದ್ದಾರೆ. ತೇರದಾಳ ತಹಸೀಲ್ದಾರ್ ಕಚೇರಿಗೆ ಸಂಬಂಧಿಸಿದಂತೆ ಸರಕಾರ ಸಿಬ್ಬಂದಿಗಳನ್ನು ನೇಮಿಸಿದೆ. ಭೂಮಿ ತಂತ್ರಾಂಶ ಅಳವಡಿಕೆ ಮಾತ್ರ ಬಾಕಿ ಉಳಿದಿದ್ದು ಶೀಘ್ರದಲ್ಲಿ ಅದು ಕೂಡ ಆಗಲಿದೆ. ಸರಕಾರ ಪ್ರಜಾಸೌಧ ನಿರ್ಮಾಣಕ್ಕೆ ಅನುದಾನ ಮಂಜುರು ಮಾಡಿದೆ. ಕಟ್ಟಡ ನಿರ್ಮಾಣಕ್ಕೆ ಹನಗಂಡಿ ಗ್ರಾಮದ ಸರ್ವೆ ನಂಬರ ಗುರುತಿಸಿ ಸರಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ತಹಸೀಲ್ದಾರ್ ವಿವರಣೆ ನೀಡಿದ್ದಾರೆ.

## ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ ಅವರಿಂದ ತ್ರಿಚಕ್ರ ವಾಹನ ವಿತರಣೆ



ಗದಗ : ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ ಅವರು ಗುರುವಾರ ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ವಿಕಲಚೇತನ ಇಬ್ಬರು ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ವಿತರಣೆ ಮಾಡಿದರು.

ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದಡಿ ಖರೀದಿಸಲಾದ ಎರಡು ವಾಹನಗಳನ್ನು ವಿತರಿಸಿ ನಂತರ ಮಾತನಾಡಿದ ಅವರು ವಿಕಲಚೇತನರು ತ್ರಿಚಕ್ರ ವಾಹನದ ಸದ್ಬಳಕೆ ಮಾಡಿಕೊಳ್ಳಬೇಕು. ಸರ್ಕಾರದ ಯೋಜನೆಗಳ ಸೌಲಭ್ಯಗಳನ್ನು ಅರ್ಹ ವಿಕಲಚೇತನರು ಪಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಅಂಗವಿಕಲರ ಕಲ್ಯಾಣಾಧಿಕಾರಿ ಮಹಾಂತೇಶ ಕೆ, ಗಣ್ಯರಾದ ರಾಜು ಕುರಡಗಿ, ಲಿಂಗರಾಜ ಪಾಟೀಲ, ಪ್ರಕಾಶ ಅಂಗಡಿ, ಸುರೇಶ ಮರಳಪ್ಪನವರ, ಬೂದಪ್ಪ ಹಳ್ಳಿ , ಇಲಾಖೆಯ ಸಿಬ್ಬಂದಿ ವರ್ಗ ಸೇರಿದಂತೆ ಇತರರು ಹಾಜರಿದ್ದರು.

# ವಿಶ್ವ ಬಾಲ ಕಾರ್ಮಿಕರ ಪದ್ಧತಿ ವಿರೋಧಿ ದಿನ

## ಬಾಲ ಕಾರ್ಮಿಕ ಮುಕ್ತ ಸಮಾಜ ನಿರ್ಮಾಣಕ್ಕೆ ಕಾಯ್ದೆಗಳ ಅರಿವು ಅಗತ್ಯ: ಶಾಸಕ ಆಸೀಫ್ (ರಾಜು) ಸೇಠ



**ಬೆಳಗಾವಿ,** ಬಾಲಕಾರ್ಮಿಕ ವಿರೋಧಿ ದಿನ ಅರ್ಥಪೂರ್ಣ ಆಚರಣೆಗೆ ಬಾಲ ಕಾರ್ಮಿಕ ಕಾಯ್ದೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳಬೇಕು. ಕಾಯ್ದೆಗಳ ಬಗ್ಗೆ ಅರಿತುಕೊಂಡು ಬಾಲ ಕಾರ್ಮಿಕ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಶ್ರಮಿಸಬೇಕಿದೆ ಎಂದು ಬೆಳಗಾವಿ ಉತ್ತರ ವಿಧಾನಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ ಹೇಳಿದರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ಮತ್ತು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಗುರುವಾರ (ಜೂ.12) ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನಡೆದ ವಿಶ್ವ ಬಾಲ ಕಾರ್ಮಿಕರ ಪದ್ಧತಿ ವಿರೋಧಿ ದಿನಾಚಾರಣೆ ಕಾರ್ಯಮದಲ್ಲಿ ಅವರು ಮಾತನಾಡಿದರು.

ಮಗುವಿನ ದೈಹಿಕ ಅಥವಾ ಮಾನಸಿಕ ಸಾಮರ್ಥ್ಯಕ್ಕೆ ಸೂಕ್ತವಲ್ಲದ ಯಾವುದೇ ಕೆಲಸ ಬಾಲ ಕಾರ್ಮಿಕ ಪದ್ಧತಿಯಾಗಿದೆ. ಬಾಲಕರನ್ನು ಕೆಲಸದಲ್ಲಿ ತೊಡಗಿಸಿಕೊಂಡರೆ ಅದರ ಪರಿಣಾಮಗಳು ಅವರ ಬೆಳವಣಿಗೆ ಮತ್ತು ಭವಿಷ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತವೆ. ಮಕ್ಕಳು ಶಾಲೆಯಿಂದ ವಂಚಿತರಾಗದಂತೆ ಸರ್ಕಾರಿ ಶಾಲೆಯಲ್ಲಿ ಕಡ್ಡಾಯ ಹಾಜರಾತಿ, ಉಚಿತ ಪುಸ್ತಕಗಳು ಸೇರಿಂತೆ ಅಗತ್ಯ ಸೌಕರ್ಯಗಳನ್ನು ನೀಡಲಾಗುತ್ತಿದೆ. ಬಾಲಕರು ದುಶ್ಚಟಗಳಿಗೆ ಬಲಿಯಾಗದಂತೆ ಶಿಕ್ಷಕರು, ಪಾಲಕರು ನಿರಂತರ ತಿಳಿಹೇಳಬೇಕು ಎಂದು ಹೇಳಿದರು.

ಮಕ್ಕಳು ಆಟ-ಪಾಠದಲ್ಲಿ ತೊಡಗಿಕೊಂಡು ಬೆಳೆದರೆ ಮಾತ್ರ ಭವಿಷ್ಯದಲ್ಲಿ ಉನ್ನತ ಪ್ರಜೆಯಾಗಲು ಸಾಧ್ಯ. ಮಕ್ಕಳ ಭವಿಷ್ಯನ್ನು ರೂಪಿಸುವ ನಿಟ್ಟಿನಲ್ಲಿ ತಂದೆ-ತಾಯಿ, ಶಿಕ್ಷಕರು, ಕಾರ್ಮಿಕ ಇಲಾಖೆ ಅಧಿಕಾರಿಗಳ ಪಾತ್ರ ಮಹತ್ವದಾಗಿದೆ ಎಂದು ಶಾಸಕ ಆಸೀಫ್ (ರಾಜು) ಸೇಠ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಮಾತನಾಡಿ ಬಾಲ ಕಾರ್ಮಿಕ ಪದ್ಧತಿ ಸಮಾಜದ ಅತೀ ದೊಡ್ಡ ಪಿಡುಗು, 6 ರಿಂದ 14 ವರ್ಷದ ಮಕ್ಕಳನ್ನು ಯಾವುದೇ ವ್ಯಾಪಾರ ಉದ್ಯಮ, ಅಂಗಡಿಗಳಲ್ಲಿ ಕೆಲಸಕ್ಕೆ ತೊಡಗಿಸಿಕೊಳ್ಳಬಾರದು. ಇದರಿಂದ ತಂದೆ-ತಾಯಿ ಹಾಗೂ ಕೆಲಸಕ್ಕೆ ತೊಡಗಿಸಿಕೊಂಡವರಿಗೆ ಕಾಯ್ದೆಯ ಅನ್ವಯ ಕಾನೂನಾತ್ಮಕವಾಗಿ ಶಿಕ್ಷೆ ವಿಧಿಸಲಾಗುವುದು ಎಂದರು.

ಕಾಯ್ದೆಯ ಅರಿವು ಎಲ್ಲರೂ ಪಡೆದುಕೊಂಡು ಶಾಲೆ ಬಿಟ್ಟ ಮಕ್ಕಳನ್ನು, ಕೆಲಸದಲ್ಲಿ ತೊಡಗಿಕೊಂಡು ಮಕ್ಕಳನ್ನು ಶಾಲೆಗೆ ಸೇರಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಜವಾಬ್ದಾರಿ ವಹಿಸಿಕೊಳ್ಳಬೇಕು. ಗ್ರಾಮೀಣ ಮಟ್ಟದಲ್ಲಿ ಸಹ ಇನ್ನೂ ಕೆಲವೆಡೆ ಬಾಲ ಕಾರ್ಮಿಕ ಪದ್ಧತಿ ಕುರಿತು ಅಷ್ಟೊಂದು ಪರಿಣಾಮಕಾರಿ ಜಾಗೃತಿ ಇಲ್ಲದಂತಾಗಿದೆ. ಗ್ರಾಮೀಣ ಮಟ್ಟದ ಇನ್ನಷ್ಟು ಜಾಗೃತಿ ಕಾರ್ಯಕ್ರಮಗಳು ಆಗಬೇಕಿದೆ. ತಂದೆ ತಾಯಿ ಕಡ್ಡಾಯವಾಗಿ ಮಕ್ಕಳಿಗೆ ಶಿಕ್ಷಣ ಒದಗಿಸಬೇಕು ಎಂಬ ಅರಿವು ಮೂಡಿಸಬೇಕಿದೆ ಎಂದು ಹೇಳಿದರು.

ಈಗಾಗಲೇ ಕುಟುಂಬ ನಿರ್ವಹಣೆಗೆ ಸರ್ಕಾರ ಸಾಕಷ್ಟು ಸೌಲಭ್ಯ ನೀಡುತ್ತಿದೆ. ಬಾಲ ಕಾರ್ಮಿಕರ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಪ್ರಾಮಾಣಿಕವಾಗಿ ಸಹಾಯವಾಣಿಗೆ ಕರೆ ಮಾಡಿ ಸಹಕಾರ ನೀಡಬೇಕು. ಜಿಲ್ಲೆ, ರಾಜ್ಯ, ದೇಶದಲ್ಲಿ ಬಾಲ ಕಾರ್ಮಿಕ ಪದ್ಧತಿ ಮುಕ್ತವಾಗಿಸಲು ಎಲ್ಲರ ಸಹಕಾರ ಅತ್ಯಗತ್ಯ ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ಅವರು ಮಾತನಾಡಿ ಬಾಲ ಕಾರ್ಮಿಕ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿ ವರ್ಷ ಜೂನ್.12 ರಂದು ವಿಶ್ವ ಬಾಲ ಕಾರ್ಮಿಕರ ಪದ್ಧತಿ ವಿರೋಧಿ ದಿನ ಆಚರಿಸಲಾಗುತ್ತಿದೆ. ಪ್ರಗತಿ ಸ್ಪಷ್ಟವಾಗಿದೆ ಆದರೆ ಇನ್ನೂ ಹೆಚ್ಚಿನದನ್ನು ಮಾಡಬೇಕಾಗಿದೆ. ಪ್ರಯತ್ನಗಳನ್ನು ವೇಗಗೊಳಿಸೋಣ ಎಂಬ ಘೋಷವಾಕ್ಯ ವಾಕ್ಯದೊಂದಿಗೆ "ದುಡಿಮೆ ಬೇಡ ಶಿಕ್ಷಣ ಬೇಕು" ಎಂಬ ಸಂದೇಶ ಸಮಾಜದಲ್ಲಿ ನೆಲೆಯೂರಬೇಕಿದೆ ಎಂದು ತಿಳಿಸಿದರು. ಬಾಲ ಕಾರ್ಮಿಕರನ್ನು ರಕ್ಷಿಸಿ ಸರ್ಕಾರದ ನಿಯಮಾವಳಿಯ ಪ್ರಕಾರ ಶಿಕ್ಷಣ ಸವಲತ್ತು ಒದಗಿಸುವುದು ನಮ್ಮೆಲ್ಲರ ಕರ್ತವ್ಯ. ದೇಶದ ಹಲವೆಡೆ ಮಕ್ಕಳನ್ನು ಬಳಸಿಕೊಂಡು ಭಿಕ್ಷಾಟನೆ ಮಾಫಿಯಾ ಬೆಳೆಯುತ್ತಿದೆ. ಇವೆಲ್ಲವನ್ನು ತಡೆಗಟ್ಟುವ ನಿಟ್ಟಿನಲ್ಲಿ ಮಕ್ಕಳ ರಕ್ಷಣೆಗೆ ಕಾನೂನು ಕಾಯ್ದೆ ಜಾರಿಗೆ ತರಲಾಗಿದೆ.

ಮಕ್ಕಳ ಮಾನಸಿಕ-ದೈಹಿಕ ಬೆಳವಣಿಗೆಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಮಕ್ಕಳಿಗೆ ಸರಿಯಾದ ಮಾದರಿಯಲ್ಲಿ ಶಿಕ್ಷಣ, ಕ್ರೀಡೆ, ಕೌಶಲ್ಯ ತರಬೇತಿಗಳನ್ನು ನೀಡಿದರೆ ದೇಶ ವಿಶ್ವದಲ್ಲೇ ಇನ್ನಷ್ಟು ಬಲಾಢ್ಯ, ಶ್ರೇಷ್ಠ ರಾಷ್ಟ್ರವಾಗಲಿದೆ ಎಂದು ಜಿ.ಪಂ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ತಿಳಿಸಿದರು.

ಉಪ ಕಾರ್ಮಿಕ ಆಯುಕ್ತ ಅಮರೇಂದ್ರ ಪ್ರಾಸ್ತಾವಿಕವಾಗಿ ಮಾತನಾಡಿ ಬಾಲ ಕಾರ್ಮಿಕ ಅನಿಷ್ಟ ಪದ್ಧತಿಯನ್ನು ಮುಕ್ತಗೊಳಿಸಲು ಪ್ರತಿಯೊಬ್ಬರೂ ಕೈ ಜೋಡಿಸಬೇಕು. ಬಾಲ ಕಾರ್ಮಿಕ ಪದ್ಧತಿ ಎಂಬ ಸಾಮಾಜಿಕ ಪಿಡುಗು ತೊಲಗಿಸಲು ಎಲ್ಲಾ ಇಲಾಖೆ ಅಧಿಕಾರಿಗಳು ಮಾತ್ರವಲ್ಲದೇ ಸಾರ್ವಜನಿಕರು ಸಹ ಸಹಕಾರ ನೀಡಬೇಕು ಎಂದು ಕರೆ ನೀಡಿದರು.

ಪಠ್ಯ ಪುಸ್ತಕಗಳ ವಿತರಣೆ:

ಇದೇ ಸಂದರ್ಭದಲ್ಲಿ ಶಾಸಕ ಆಸೀಫ್ (ರಾಜು) ಸೇಠ ಜಿಲ್ಲೆಯ ವಿವಿಧ ಭಾಗಗಳಿಂದ ರಕ್ಷಣೆಗೊಂಡ ಬಾಲ ಕಾರ್ಮಿಕರಿಗೆ ಶಾಲಾ ಪಠ್ಯ ಪುಸ್ತಕಗಳನ್ನು ವಿತರಿಸಿದರು. ಬಳಿಕ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಮಕ್ಕಳ ರಕ್ಷಣೆ ಕುರಿತು ಪ್ರಮಾಣ ವಚನ ಸ್ವೀಕರಿಸಲಾಯಿತು.

ಸೈಬರ್ ಆರ್ಥಿಕ ಹಾಗೂ ಮಾದಕ ಅಪರಾಧಗಳ ಪೊಲೀಸ್ ಠಾಣಾಧಿಕಾರಿ ವೀರೇಶ ದೊಡ್ಡಮನಿ, ಸಹಾಯಕ ಕಾರ್ಮಿಕ ಆಯುಕ್ತ ದೇವರಾಜ, ಜಿಲ್ಲಾ ಬಾಲ ಕಾರ್ಮಿಕರ ಯೋಜನೆ ಯೋಜನಾ ನಿರ್ದೇಶಕಿ ಜ್ಯೋತಿ ಕಾಂತೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಜಿಲ್ಲಾ ಕಾರ್ಖಾನೆಗಳ ಉಪ ನಿರ್ದೇಶಕ ವೆಂಕಟೇಶ ರಾಠೋಡ, ಕಾರ್ಮಿಕ ಅಧಿಕಾರಿ ಮಲ್ಲಿಕಾರ್ಜುನ್ ಜೋಗುರು ಸೇರಿದಂತೆ ಕಾರ್ಮಿಕ ನಿರೀಕ್ಷಕರು, ಕಾರ್ಮಿಕ ಇಲಾಖೆ ಸಿಬ್ಬಂದಿಗಳು, ವಿವಿಧ ಶಾಲೆಯ ಪಾಂಶುಪಾಲರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಶಾಲೆಯಲ್ಲಿ ಪರಿಸರ ದಿನ ಆಚರಣೆ



**ಘಟಪ್ರಭಾ.**ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಶ್ರೀ ಮಧುಕರ ದೇಶಪಾಂಡೆ ಇನಾಮದಾರ ಸರಕಾರಿ ಪ್ರೌಢ ಶಾಲೆ ಮಲ್ಲಾಪುರ ಪಿ ಜಿ ಘಟಪ್ರಭಾದಲ್ಲಿ ಸಸಿ ನೆಡುವದರೊಂದಿಗೆ ವನಮಹೋತ್ಸವ ಅಚರಿಸಲಾಯಿತು. ಈ ಸಂದರ್ಭದಲ್ಲಿ ಪ್ರಧಾನ ಗುರುಗಳಾದ ಅಶೋಕ ಮಲಬಣ್ಣವರ, ಶಿಕ್ಷಕರಾದ ಹಂಜಿ, ಪೂಜಾರಿ, ಬಾಯನಾಯಕ, ಶಿಕ್ಷಕಿಯರಾದ ಶ್ರೀಮತಿ ಕನೋಜನವರ, ಮೆಳವಂಕಿ ದಳವಾಯಿ, ಬಸಣ್ಣವರ, ಸೇರಿದಂತೆ ಎಲ್ಲಾ ಶಿಕ್ಷಕರು, ಎಸ್ ಡಿ ಎಂ ಸಿ ಸದಸ್ಯರು ಅಡುಗೆ ಸಿಬ್ಬಂದಿ ಗಳು, ವಿದ್ಯಾರ್ಥಿಗಳು ಹಾಜರಿದ್ದರು

## ಫಲಿತಾಂಶದ ಸುಧಾರಣೆಗೆ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರು ಮುನ್ನುಡಿಯನ್ನು ಬರೆಯಲಿ



**ಇಂಡಿ :** ಕಲಿಕಾ ಅಂತರ ವಿರುವ ವಿದ್ಯಾರ್ಥಿಗಳ ಫಲಿತಾಂಶ ಸುಧಾರಿಸುವಲ್ಲಿ ಆ ಮಕ್ಕಳನ್ನು ಕೇಂದ್ರಿಕರಿಸಿ ಈ ವರ್ಷದ ಕ್ರೀಯಾಯೋಜನೆಯನ್ನು ಶಾಲೆಗಳಲ್ಲಿ ಅಳವಡಿಸಿ ಫಲಿತಾಂಶದ ಸುಧಾರಣೆಗೆ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರು ಮುನ್ನುಡಿಯನ್ನು ಬರೆಯಲಿ ಎಂದು ಇಂಡಿಯ ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತಾ ಹುನ್ನುರ ಹೇಳಿದರು.

ಪಟ್ಟಣದ ಕ್ಷೇತ್ರಶಿಕ್ಷಣಾಧಿಕಾರಿಗಳ ಸಬಾಭವನದಲ್ಲಿ ಪ್ರೌಢಶಾಲೆಗಳ ಮುಖ್ಯೋಧ್ಯಾಪಾಯರ ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆ ಕುರಿತು ನಡೆದ ಕಾರ್ಯಾಗಾರದಲ್ಲಿ ಮಾತನಾಡಿದರು. ಎಸ್ಸೆಸ್ಸೆಲ್ಸಿ ನೋಡಲ್ ಅಧಿಕಾರಿ ಎ.ಓ.ಹೂಗಾರ ಮಾತನಾಡಿ ಎಸ್ಸೆಸ್ಸೆಲ್ಸಿ ಫಲಿತಾಂಶ ಅಭಿವೃದ್ದಿಯಾಗಬೇಕಾದರೆ ಹತ್ತನೆಯ ತರಗತಿಯಲ್ಲಿ ಓದುತ್ತಿರುವ ಕಲಿಕಾ ನಿಧಾನ ಗತಿಯ ಲಕ್ಷಣಗಳುಳ್ಳ ವಿದ್ಯಾರ್ಥಿಗಳಿಗೆಜೂನ 15 ರಿಂದ ಜುಲೈ 31 ರ ವರೆಗೆ ಕಲಿಕಾ ಸ್ನೇಹಿ ಸೇತುಬಂಧು ಕಾರ್ಯಕ್ರಮವನ್ನು ತಾಲೂಕಿನಲ್ಲಿ ಎಲ್ಲ ಶಾಲೆಗಳಲ್ಲಿ ಕೈಕೊಂಡು ಅಂತಹ ಮಕ್ಕಳನ್ನು ಇತರ ಮುಂದು ವರೆದ ಮಕ್ಕಳ ಜೊತೆ ಕೂಡಿಸಿ ವರ್ಷದುದ್ದಕ್ಕೂ ವಿಶೇಷ ಕಾಳಜಿ ವಹಿಸಿ ಕಲಿಕಾ ಅಂತರ ತುಂಬಿದಲ್ಲಿ ಫಲಿತಾಂಶ ಆಭಿವೃದ್ದಿಯಾಗಿ ಕಲಿಕಾ ಗುಣಮಟ್ಟ ಸಾಧಿಸುವಲ್ಲಿ ಯಾವದೇ ಸಂಶಯವಿಲ್ಲ ಎಂದರು. ಕಾರ್ಯಕ್ರಮದಲ್ಲಿ ವಿವಿಧ ಶಾಲೆಯ ಮುಖ್ಯೋಪಾಧ್ಯಾಯರು ಪಾಲ್ಗೊಂಡಿದ್ದರು.

## ರಾಜ್ಯ ಕಾಂಗ್ರೆಸ್ ಸರಕಾರ ಜನತೆಯ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ- ರಾಜ್ಯ ಸಭಾ ಸದಸ್ಯ ಈರಣ್ಣ ಕಡಾಡಿ ಆರೋಪ



**ರಾಮದುರ್ಗ** : ರಾಜ್ಯದಲ್ಲಿ ಜಾತಿ ಗಣತಿ ಮಾಡಲು ಹೊರಟಿರುವ ಕಾಂಗ್ರೆಸ್ ಸರಕಾರ ತಪ್ಪು ಅಂಕಿ ಅಂಶಗಳನ್ನು ನೀಡಿ ಜನತೆಯ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ. ಸರಕಾರ ಕೂಡಲೇ ರಾಜ್ಯದ ಜನತೆಯ ಕ್ಷಮೆ ಯಾಚಿಸಬೇಕು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಒತ್ತಾಯಿಸಿದರು.

ತಾಲೂಕಿನ ಸಾಲಹಳ್ಳಿ ಗ್ರಾಮದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2015 ರಿಂದ ಇಲ್ಲಿಯವರೆಗೆ ಜಾತಿ ಜನಗಣತಿ ವರದಿಯನ್ನು ಅಂಕಿ ಅಂಶಗಳನ್ನು ಘೋಷಿಸದೇ 2025ಕ್ಕೆ ತಮ್ಮದೆ ಆದ ಸುಳ್ಳು ಅಂಕಿ-ಸಂಖ್ಯೆಗಳನ್ನು ನೀಡಿ, ರಾಜ್ಯದ ಜನತೆಗೆ ಮೋಸ ಮಾಡಿದೆ. ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ, ಕೆ.ಸಿ. ವೇಣುಗೋಪಾಲ ಅವರು ರಾಜ್ಯ ಸರಕಾರಕ್ಕೆ ಜಣಗತಿ ಮಾಡುವಂತೆ ನಿರ್ದೇಶನ ನೀಡಿದ್ದು, ಎಷ್ಟು ಸರಿ ಎಂದು ಪ್ರಶ್ನಿಸಿದ ಅವರು, ರಾಜ್ಯ ಕಾಬಿನೆಟ್ ನಿರ್ಣಯ ತೆಗೆದಕೊಳ್ಳಬೇಕು. ಅದನ್ನು ಬಿಟ್ಟು ಕಾಂಗ್ರೆಸ್ ಪಕ್ಷದ ಉಸ್ತುವಾರಿಗಳು ಈ ಕುರಿತು ರಾಜ್ಯ ಸರಕಾರಕ್ಕೆ ನಿರ್ದೇಶನ ನೀಡಲು ಅವರು ಯಾರು ಎಂದು ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯ ಸರಕಾರ ಈಗಾಗಲೇ 180 ಕೋಟಿ ವೆಚ್ಚದಲ್ಲಿ ಜಾತಿ ಗಣತಿ ಮಾಡಿಸಿ, ಅದನ್ನು ರದ್ದುಗೊಳಿಸಿದೆ. 7 ಕೋಟಿ ಜನತೆಯ ಸಮೀಕ್ಷೆ ಕೇವಲ ಮುಂದಿನ 90 ದಿನಗಳಲ್ಲಿ ಮುಗಿಸಲು ಸಾಧ್ಯವಿಲ್ಲ. ಪುನಃ ಜಾತಿ ಗಣತಿ ಮಾಡಲು ಹೊರಟಿರುವುದು ಸರಿಯಾದ ಕ್ರಮವಲ್ಲ. ಈ ಹಿಂದೆ ಸಾಮಾಜಿಕ ಆರ್ಥಿಕ ಸ್ಥಿತಿಗತಿಗಳ ಕುರಿತು ಸಮೀಕ್ಷೆ ನಡೆದಿದೆ. ಅದೇ ಅಂಕಿ-ಅಂಶಗಳನ್ನು ತಪ್ಪಾಗಿ ಜನತೆಗೆ ನೀಡಿ, ಜನತೆಗೆ ಮೋಸ ಮಾಡಲು ಹೊರಟಿದೆ ಎಂದರು.ಕೇಂದ್ರ ಸರಕಾರ ಶೀಘ್ರದಲ್ಲಿ ಜಾತಿ ಜನಗಣತಿ ಮಾಡಲು ನಿರ್ಧಾರ ತೆಗೆದುಕೊಂಡಿದೆ. ಕೇಂದ್ರ ಸರಕಾರ ಜಾತಿ ಜಣಗಣತಿ ಮಾಡವ ಜವಾಬ್ದಾರಿ ತೆಗೆದುಕೊಂಡಿದೆ ಈ ಕುರಿತು ರಾಜ್ಯ ಸರಕಾರ ಚಿಂತಿಸುವ ಅಗತ್ಯವಿಲ್ಲ ಎಂದರು.

ವಾಲ್ಮೀಕಿ ಹಗರಣದಲ್ಲಿ ಭಾಗಿಯಾದ ಮಂತ್ರಿಯೋರ್ವರು ಇಡಿ ತನಿಖೆಯಿಂದ ಜೈಲಿಗೆ ಹೋಗಿ ಬಂದಿದ್ದಾರೆ. ಅಂತವರನ್ನು ಮತ್ತೆ ಮಂತ್ರಿ ಮಂಡಲಕ್ಕೆ ತೆಗೆದುಕೊಳ್ಳುವ ಸುಳಿವು ನೀಡಿರುವ ಮುಖ್ಯಮಂತ್ರಿಗಳ ಕ್ರಮ ವಿಷಾಧನೀಯ. ಸುಮಾರು 187 ಕೋಟಿ ವಾಲ್ಮೀಕಿ ಹಣರಣದಲ್ಲಿ ಇಡೀ ಕಾಂಗ್ರೆಸ್ ನಾಯಕರು, ಸರಕಾರದ ಪ್ರಭಾವಿಗಳು ಭಾಗಿಯಾಗಿದ್ದಾರೆ. ಅವರನ್ನು ರಕ್ಷಿಸಲು ಹೊರಟಿರುವ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳ ನಿರ್ಧಾರಕ್ಕೆ ಇಡೀ ರಾಜ್ಯದ ಜನತೆ ತಲೆ ತಗ್ಗಿಸುವಂತಾಗಿದೆ ಎಂದು ವಿಷಾಧ ವ್ಯಕ್ತಪಡಿಸಿದರು.

ಇತ್ತಿಚೆಗೆ ಐಪಿಎಲ್ ಕ್ರಿಕೇಟ್ ಪಂದ್ಯ ಗೆದ್ದ ಆರ್‌ಸಿಬಿ ಅಭಿಮಾನಿಗಳ ಸಂಭ್ರಮಾಚರಣೆ ಸಂದರ್ಭದಲ್ಲಿ ಕಾಲ್ತುಳಿದ ಉಂಟಾಗಿ ಸುಮಾರು 11 ಜನತೆ ಸಾವನ್ನಪ್ಪಿದ್ದಾರೆ. ಘಟನೆಯ ಹೊಣೆಯನ್ನು ಸ್ವತಃ ಸರಕಾರವೇ ತೆಗೆದುಕೊಳ್ಳಬೇಕು. ಈ ವಿಷಯ ಕಾಂಗ್ರೆಸ್ ಹೈ ಕಮಾಂಡ ನಾಯಕರ ಗಮನಕ್ಕೆ ಬಂದಾಗ ಅವರೂ ಸಹ ಸರಕಾರದ ನಿರ್ಲಕ್ಷ್ಯಕ್ಕೆ ಚಿಮಾರಿ ಹಾಕಿದ್ದಾರೆ. 11 ಜನತೆಯ ಸಾವಿಗೆ ಯಾರು ಹೊಣೆ ಎಂದು ಸರಕಾರವೇ ಉತ್ತರ ಕೊಡಬೇಕಿದೆ ಎಂದರು.

ವಾಲ್ಮೀಕಿ ಹಣಗರಣ, ಜಾತಿ ಜಣಗಣತಿ, ಆರ್‌ಸಿಬಿ ಕಾಲ್ತುಳಿದ ಮೂರು ಘಟನೆಗಳಿಂದ ಸರಕಾರದ ರಾಜ್ಯದ ಜನತೆಯ ಅನ್ಯಾಯ ಮಾಡುತ್ತಿದೆ ಎಂದು ಸ್ಪಷ್ಟವಾಗುತ್ತದೆ. ಕೂಡಲೇ ಮುಖ್ಯಮಂತ್ರಿಗಳು ರಾಜ್ಯದ ಜನತೆಯ ಕ್ಷಮೆ ಯಾಚಿಸಬೇಕು. ಎಲ್ಲಾ ಘಟನೆಗಳಿಗೂ ಸ್ಪಷ್ಟನೆ ನೀಡಬೇಕು ಎಂದಪತ್ರಿಕಾಗೋಷ್ಠಿಯ ಮೂಲಕ ಈರಣ್ಣ ಕಡಾಡಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಮಲ್ಲಣ್ಣ ಯಾಡವಾಡ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಮಾರುತಿ ಕೊಪ್ಪದ, ರಾಜೇಶ ಬೀಳಗಿ ಸೇರಿದಂತೆ ಇತರರಿದ್ದರು.



**ಘಟಪ್ರಭಾದ.ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಆವರಣದಲ್ಲಿ ಸಮುದಾಯ ಭವನ ನಿರ್ಮಾಣ ಮಾಡಲು ಕರ್ನಾಟಕ ವಿಧಾನ ಪರಿಷತ್ ಸದಸ್ಯರ ನಿಧಿಯಿಂದ ಅನುದಾನ ಮಂಜೂರು ಶ್ರಮಿಸಿದ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಲಖನ್ ಜಾರಕಿಹೊಳಿ ಅವರಿಗೆ ಗೋಕಾಕ ನಗರದಲ್ಲಿ ಘಟಪ್ರಭಾದ ಸಾಮಾಜಿಕ ಕಾರ್ಯಕರ್ತರಾದ ಶ್ರೀಕಾಂತ ವಿ ಮಹಾಜನ ಮತ್ತು ಘಟಪ್ರಭಾದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಅಧ್ಯಕ್ಷರಾದ ಶ್ರೀಕಾಂತ ಬಿ ಕುಲಕರ್ಣಿ ಅವರೊಂದಿಗೆ ಅಭಿನಂದಿಸಲಾಯಿತು.**

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :109, Postal Reg No. PMG/KA/NK/BM/135/25-27 / POST AT Vantamury Colony Post Office